ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೩೪

ಪಟ್ಟಿ – ೦೧

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತ ಮೂರನೇ ಅಧಿವೇಶನ

ಸೋಮವಾರ, ದಿನಾಂಕ : ೧೫ನೇ ಜುಲೈ, ೨೦೨೪

---

## ಸಮೂಹ – I

೧. ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು

೨. ಇಂಧನ ಸಚಿವರು

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೪. ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು

೫. ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು

೬. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

೭. ಉನ್ನತ ಶಿಕ್ಷಣ ಸಚಿವರು

---

# ಯುಯುಸಿಎಂಎಸ್ ನಿಂದ ಆಗುತ್ತಿರುವ ಅನಾನುಕೂಲಗಳ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧ (೧೦೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಯುಯುಸಿಎಂಎಸ್ ಅನುಸರಿಸುತ್ತಿರುವ ಕುವೆಂಪು ವಿಶ್ವವಿದ್ಯಾಲಯದ ಅಡಿಯಲ್ಲಿ ಬರುವ ಕಾಲೇಜುಗಳ ಸಂಖ್ಯೆ ಎಷ್ಟು;

(ಆ) ಕುವೆಂಪು ವಿಶ್ವವಿದ್ಯಾಲಯದ ವಿದ್ಯಾರ್ಥಿ ಪ್ರವೇಶಕ್ಕೆ ಸಂಬಂಧಿಸಿದಂತೆ, ಯುಯುಸಿಎಂಎಸ್ ಪ್ರವೇಶ ಪೋರ್ಟಲ್ ತೆರೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಕುವೆಂಪು ವಿಶ್ವವಿದ್ಯಾಲಯದಲ್ಲಿ ಪ್ರವೇಶಕ್ಕೆ ಸಂಬಂಧಿಸಿದಂತೆ, ಸಿಬ್ಬಂದಿಗಳ ತಾಂತ್ರಿಕ ಜ್ಞಾನದ ಕೊರತೆ ಹಾಗೂ ಅಧಿಕಾರಿಗಳ ಕರ್ತವ್ಯ ಪ್ರಜ್ಞೆಯ ಕೊರತೆಯಿಂದ ವಿದ್ಯಾರ್ಥಿ ಪ್ರವೇಶಕ್ಕೆ ತೊಂದರೆ ಆಗುತ್ತಿರುವ ಕುರಿತು ಸರ್ಕಾರ ತುರ್ತು ಕ್ರಮ ಕೈಗೊಳ್ಳುವುದೇ ; (ವಿವರ ಒದಗಿಸುವುದು)

(ಈ) ೨೦೨೪-೨೫ನೇ ಶೈಕ್ಷಣಿಕ ವರ್ಷಕ್ಕೆ ವಿದ್ಯಾರ್ಥಿ ಪ್ರವೇಶಕ್ಕೆ ಸಂಬಂಧಿಸಿದಂತೆ SEP/NEP ಗಳಲ್ಲಿ ಯಾವುದಕ್ಕೆ ಮಾನ್ಯತೆ ನೀಡಲಾಗಿರುತ್ತದೆ ;

(ಉ) ಮಾನ್ಯತೆ ನೀಡಿರುವ ಪಠ್ಯಕ್ರಮ ಪದ್ಧತಿಯನ್ನು ಕೂಡಲೇ ವಿಳಂಬ ಮಾಡದೆ ಹಾಗೂ ವಿದ್ಯಾರ್ಥಿಗಳಿಗೆ ಶಿಕ್ಷಣಕ್ಕೆ ಅನಾನುಕೂಲವಾಗದಂತೆ ಅಳವಡಿಸಲಾಗುವುದೇ ? (ವಿವರ ನೀಡುವುದು)

# ಕರ್ನಾಟಕ ವಿದ್ಯುತ್ ನಿಗಮ ನಿಯಮಿತದಿಂದ ಯೋಜನೆಗಳಿಗೆ ಸಾಲ ಹಾಗೂ ಮರುಪಾವತಿಸಿದ ಮೊತ್ತದ ಬಗ್ಗೆ

**ಶ್ರೀ ಡಿ.ಎಸ್.ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨ (೧೦೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ವಿದ್ಯುತ್ ನಿಗಮಕ್ಕೆ ೫ ವಿದ್ಯುತ್ ಸರಬರಾಜು ಕಂಪನಿಗಳಿಂದ ೨೦೨೧-೨೨ ರಿಂದ ೨೦೨೩-೨೪ನೇ ಸಾಲಿನವರೆಗೆ ಬಂದಿರುವ ವಾರ್ಷಿಕ ಆದಾಯ ವೆಚ್ಚವಷ್ಟು;

(ಆ) ಕರ್ನಾಟಕ ವಿದ್ಯುತ್ ನಿಗಮವು ೨೦೨೦-೨೧ ರಿಂದ ೨೦೨೩-೨೪ ರವರೆಗೆ ತೆಗೆದುಕೊಂಡ ಸಾಲವೆಷ್ಟು; ಮರುಪಾವತಿಸಿದ ಅಸಲು ಹಾಗೂ ಬಡ್ಡಿ ಎಷ್ಟು; ಪಾವತಿಸಬೇಕಾದ ಅಸಲು, ಬಡ್ಡಿ ಎಷ್ಟು; (ವಿವರ ಒದಗಿಸುವುದು)

(ಇ) ಕರ್ನಾಟಕ ವಿದ್ಯುತ್ ನಿಗಮವು ಕಳೆದ ೧೦ ವರ್ಷಗಳಿಂದ ಯಾವ್ಯಾವ ಯೋಜನೆಗಳು ಹಾಗೂ ವೆಚ್ಚಗಳಿಗೆ ಎಲ್ಲಿಂದ ಸಾಲ ಪಡೆದಿದೆ; ವಿನಿಯೋಗಿಸಿದ್ದೆಷ್ಟು, ಮರು ಪಾವತಿಸಿದ್ದೆಷ್ಟು; (ವಿವರ ಒದಗಿಸುವುದು)

(ಈ) ಕರ್ನಾಟಕ ವಿದ್ಯುತ್ ನಿಗಮ ನಿಯಮಿತಕ್ಕೆ ೨೦೨೪ರ ಜೂನ್ ಅಂತ್ಯದವರೆಗೆ ಸರ್ಕಾರ ಹಾಗೂ ಎಸ್ಕಾಂಗಳು ಪಾವತಿಸಬೇಕಾದ ಬಾಕಿ ಮೊತ್ತ ಎಷ್ಟಿದೆ; ಮರುಪಾವತಿಗೆ ಕೈಗೊಂಡ ಕ್ರಮಗಳೇನು ?

## ೨೦೨೧ರ ಸಹಾಯಕ ಪ್ರಾಧ್ಯಾಪಕರ ನೇಮಕಾತಿ ಕುರಿತು

**ಶ್ರೀ ಡಿ.ಎಸ್.ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩ (೧೦೩) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೧ರ ಸಹಾಯಕ ಪ್ರಾಧ್ಯಾಪಕರ ನೇಮಕಾತಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ಪ್ರತಿ ನೀಡುವ ಪ್ರಕ್ರಿಯೆ ಯಾವ ಹಂತದಲ್ಲಿದೆ ;

(ಆ) ಆಯ್ಕೆ ಪಟ್ಟಿ ಅಧಿಸೂಚನೆಯಾದ ನಂತರ ಎಲ್ಲಾ ಪರಿಶೀಲನಾ ಕಾರ್ಯ ಶೇ.೯೦% ರಷ್ಟು ಪೂರ್ಣಗೊಂಡರೂ ಅಭ್ಯರ್ಥಿಗಳಿಗೆ ಆದೇಶ ನೀಡಲು ವಿಳಂಬವಾಗುತ್ತಿರುವುದಕ್ಕೆ ಪರಿಹಾರಗಳನ್ನು ಕಂಡುಕೊಳ್ಳಲಾಗಿದೆಯೇ ; (ವಿವರ ಒದಗಿಸುವುದು)

(ಇ) ಹೈದರಾಬಾದ್ ಕರ್ನಾಟಕ ವಿಭಾಗದ ಮೀಸಲಾತಿ ವಿಷಯವಾಗಿ ಬಂದಂತಹ ಸರ್ಕಾರದ ಸುತ್ತೋಲೆ ಸಂಖ್ಯೆ:ಸಿಆಸುಇ/೦೩/ ಹೈಕಕೋ/೨೦೧೯, ದಿನಾಂಕ: ೦೧.೦೨.೨೦೨೩ನ್ನು ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯು ಎತ್ತಿಹಿಡಿದಿದ್ದು, ಈ ಕುರಿತು ೧೩ ಮಾರ್ಚ್ ೨೦೨೪ ರಂದು ಉಚ್ಚನ್ಯಾಯಾಲಯದ ಮಧ್ಯಂತರ ತೀರ್ಪು ಸಹ ಕೌನ್ಸಿಲಿಂಗ್ ನಡೆಸಿ, ಸ್ಥಳ ನಿಯುಕ್ತಿಗೊಳಿಸಬಹುದೆಂದು ಆದೇಶ ನೀಡಿದ್ದರೂ ಪ್ರಕ್ರಿಯೆ ತಡವಾಗಲು ಕಾರಣವೇನು ;

(ಈ) ಈ ಆದೇಶಾನುಸಾರ ಸರ್ಕಾರವು ಈಗಾಗಲೇ ಬೇರೆ ಇಲಾಖೆಯ ಹುದ್ದೆಗಳಿಗೆ ಷರತ್ತುಬದ್ಧ ನೇಮಕಾತಿ ಆದೇಶವನ್ನು ನೀಡಿದ್ದು, ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಆದೇಶ ನೀಡದಿರಲು ಕಾರಣವೇನು ; (ವಿವರ ಒದಗಿಸುವುದು)

(ಉ) ಅನಗತ್ಯ ನೆಪಹೇಳಿ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡದೆ ಮುಂದೂಡುವ ಆಲೋಚನೆ ಇದೆಯೇ ?

## ಕರ್ನಾಟಕ ರಾಜ್ಯ ವೈದ್ಯಕೀಯ ಸರಬರಾಜು ನಿಗಮದ ಕಾರ್ಯವೈಖರಿ ಕುರಿತು

**ಶ್ರೀ ಡಿ.ಎಸ್.ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪ (೧೦೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ಆಸ್ಪತ್ರೆಗಳಲ್ಲಿ ಜೀವ ರಕ್ಷಕ ಔಷಧಿಗಳೊಂದಿಗೆ ಇತರೆ ಔಷಧಿಗಳನ್ನು ಪೂರೈಸುವ ಜವಾಬ್ದಾರಿ ಹೊಂದಿರುವ ಕರ್ನಾಟಕ ರಾಜ್ಯ ವೈದ್ಯಕೀಯ ಸರಬರಾಜು ನಿಗಮ, ಸರಿಯಾಗಿ ಕಾರ್ಯ ನಿರ್ವಹಿಸದಿರುವ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಔಷಧಿ ಸರಬರಾಜುಗಳ ಕಾರ್ಯವೈಖರಿಗಳಲ್ಲಿ ನಿಗಮದಲ್ಲಿ ಭ್ರಷ್ಟಾಚಾರ, ಅಕ್ರಮ ಅವ್ಯವಹಾರ ಹಾಗೂ ಕಮೀಷನ್ ಧಂಧೆಗಳನ್ನು ನಡೆಸುವವರ ಮೇಲೆ ಸರ್ಕಾರ ಕಠಿಣ ಕ್ರಮ ಕೈಗೊಳ್ಳುವುದೇ ;

(ಇ) ಕ್ರಮ ಕೈಗೊಂಡಿದ್ದಲ್ಲಿ, ಕ್ರಮ ವಿವರದ ಮಾಹಿತಿಯನ್ನು ಒದಗಿಸುವುದು ? (ಪ್ರಸ್ತುತ ಕ್ರಮಗಳ ವಿವರ ಹಾಗೂ ಮುಂದಿನ ಕ್ರಮದ ವಿವರ ನೀಡುವುದು)

## ಆರ್.ಟಿ.ಇ. ಕಾಯಿದೆಯ ಬಗ್ಗೆ

**ಶ್ರೀ ಎಂ.ಎಲ್.ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫ (೫೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅರ್.ಟಿ.ಇ ಕಾಯಿದೆಯ ಉದ್ದೇಶವೇನು; ಆರ್.ಟಿ.ಇ ಕಾಯಿದೆಯಡಿಯಲ್ಲಿ ವಿದ್ಯಾರ್ಥಿಗಳ ಆಯ್ಕೆ ಯಾವ ರೀತಿ ನಡೆಯುತ್ತದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಆರ್.ಟಿ.ಇ ಕಾಯಿದೆಯ ಅನುಷ್ಠಾನದಿಂದ ೧ ರಿಂದ ೮ನೇ ತರಗತಿಯವರೆಗೂ ಪ್ರವೇಶ ಶುಲ್ಕವನ್ನು ಸರ್ಕಾರವೇ ನೀಡುತ್ತಿದ್ದು, ೮ನೇ ತರಗತಿಯಿಂದ ದ್ವಿತೀಯ ಪಿ.ಯು.ಸಿ ವರೆಗೂ ಈ ಯೋಜನೆಯನ್ನು ವಿಸ್ತರಿಸುವುದರಿಂದ ಗ್ರಾಮೀಣ ಮತ್ತು ನಗರ ಪ್ರದೇಶದಲ್ಲಿರುವ ಬಡಮಕ್ಕಳಿಗೆ ಅನುಕೂಲವಾಗಲಿದ್ದು ಸರ್ಕಾರವು ಈ ಯೋಜನೆಯನ್ನು ವಿಸ್ತರಿಸುವ ಬಗ್ಗೆ ಚಿಂತಿಸಿದೆಯೇ ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಇ) ಸರ್ಕಾರಿ ಶಾಲೆಗಳಲ್ಲಿ ಸಿಬಿಎಸ್‌ಇ ಪಠ್ಯಕ್ರಮವನ್ನು ಅಳವಡಿಸದಿರಲು ಕಾರಣವೇನು ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಈ) ಸರ್ಕಾರಿ ಶಾಲೆಗಳಲ್ಲಿ ಸಿಬಿಎಸ್‌ಇ ಪಠ್ಯಕ್ರಮವಿಲ್ಲದೇ ಇರುವುದರಿಂದ ಆರ್.ಟಿ.ಇ ಕಾಯಿದೆಯಡಿ ಬಡಮಕ್ಕಳು ಖಾಸಗಿ ಶಾಲೆಗಳಿಗೆ ದಾಖಲಾಗುತ್ತಿದ್ದು, ಸರ್ಕಾರಿ ಶಾಲೆಗಳಲ್ಲೂ ಸಿಬಿಎಸ್‌ಇ ಪಠ್ಯಕ್ರಮ ಜಾರಿಗೊಳಿಸುವ ಬಗ್ಗೆ ಸರ್ಕಾರ ಯೋಚಿಸಿದೆಯೇ ? (ಸಂಪೂರ್ಣವಾದ ಮಾಹಿತಿ ನೀಡುವುದು)

## ಆರೋಗ್ಯ ಕೇಂದ್ರಗಳಲ್ಲಿ ಸಿಬ್ಬಂದಿ ಕೊರತೆಯ ಬಗ್ಗೆ

**ಶ್ರೀ ಎಂ.ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬ (೫೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳೆಷ್ಟು ; ಸದರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳೆಷ್ಟು ; ನಿಯೋಜನೆ ಮೇರೆಗೆ ಕರ್ತವ್ಯ ನಿರ್ವಹಿಸುತ್ತಿರುವ ವೈದ್ಯರ ಮತ್ತು ಸಿಬ್ಬಂದಿಗಳ ಸಂಪೂರ್ಣ ಮಾಹಿತಿ ನೀಡುವುದು ;

(ಆ) ಸದರಿ ಜಿಲ್ಲೆಗಳಲ್ಲಿರುವ ತಾಲ್ಲೂಕು ಆಸ್ಪತ್ರೆಗಳಲ್ಲಿ, ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರುವ ವಿವಿಧ ದರ್ಜೆಯ ಹುದ್ದೆಗಳನ್ನು ತ್ವರಿತಗತಿಯಲ್ಲಿ ನೇಮಕಾತಿಗೊಳಿಸಲು ಸರ್ಕಾರದ ಸಕಾಲಿಕ ಕ್ರಮಗಳು ಯಾವುವು; (ಸಂಪೂರ್ಣವಾದ ಮಾಹಿತಿ ನೀಡುವುದು)

(ಇ) ಸರ್ಕಾರಿ ವ್ಯಾಪ್ತಿಯ ಆರೋಗ್ಯ ಸೇವೆಯನ್ನು ಗ್ರಾಮೀಣರು ಹೆಚ್ಚಿನ ಪ್ರಮಾಣದಲ್ಲಿ ಅವಲಂಬಿಸಿರುವುದರಿಂದ ಆದ್ಯತೆಯ ಮೇರೆಗೆ ಸಿಬ್ಬಂದಿ ವರ್ಗ ಮತ್ತು ಮೂಲಸೌಕರ್ಯ ಸೌಲಭ್ಯಗಳನ್ನು ಒದಗಿಸಿಕೊಟ್ಟು ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ ಸರ್ಕಾರವು ಯಾವ ಕ್ರಮ ಕೈಗೊಳ್ಳಲಿದೆ;

(ಈ) ತಾಲ್ಲೂಕು ಮಟ್ಟದ ಆಸ್ಪತ್ರೆಗಳಲ್ಲಿ ಮಹಿಳೆಯರು ಮತ್ತು ಮಕ್ಕಳು ಹೆಚ್ಚಿನ ಪ್ರಮಾಣದಲ್ಲಿ ಬರುತ್ತಿದ್ದು ಆಸ್ಪತ್ರೆಗಳಲ್ಲಿ ಸಾರ್ವಜನಿಕರಿಗೆ ಗುಣಮಟ್ಟದ ಮತ್ತು ಸುವ್ಯವಸ್ಥಿತ ಆರೋಗ್ಯ ಸೇವಾ ಸೌಲಭ್ಯಗಳನ್ನು ಒದಗಿಸಿಕೊಡುವಲ್ಲಿ ಸರ್ಕಾರದ ಮುಂದಿರುವ ಪ್ರಸ್ತಾವನೆಗಳು ಮತ್ತು ಕ್ರಮಗಳು ಯಾವುವು? (ಸಂಪೂರ್ಣವಾದ ಮಾಹಿತಿ ನೀಡುವುದು)

## ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಪ್ರಾರಂಭಿಸುವ ಬಗ್ಗೆ

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :-**

೭ (೯೩) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಿವಮೊಗ್ಗ ಜಿಲ್ಲೆಯಲ್ಲಿರುವ ಒಟ್ಟು ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಸಂಖ್ಯೆ ಎಷ್ಟು ;

(ಆ) ಶಿವಮೊಗ್ಗ ಜಿಲ್ಲೆಯ ಕೈಗಾರಿಕೆಗೆ ಪ್ರಸಿದ್ಧಿ ಪಡೆದ ಭದ್ರಾವತಿ ತಾಲ್ಲೂಕಿನಲ್ಲಿ ಹೊಸ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಪ್ರಾರಂಭಿಸುವ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳುವುದೇ ? (ವಿವರ ನೀಡುವುದು)

## ಕುವೆಂಪು ವಿ.ವಿ. ಘಟಕ ಕಾಲೇಜಿನಲ್ಲಿ ವಿಜ್ಞಾನ ಪದವಿ ಕೋರ್ಸ್ ಪ್ರಾರಂಭಿಸುವ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :-**

೮ (೯೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಿವಮೊಗ್ಗ ಜಿಲ್ಲೆಯ ಕುವೆಂಪು ವಿಶ್ವವಿದ್ಯಾನಿಲಯದ ಘಟಕ ಕಾಲೇಜಿನಲ್ಲಿ ವಿಜ್ಞಾನ ಪದವಿ ಕೋರ್ಸ್‌ನ್ನು ನಡೆಸಲಾಗುತ್ತಿದೆಯೇ ;

(ಆ) ಇಲ್ಲದಿದ್ದಲ್ಲಿ, ಸದರಿ ವಿಶ್ವವಿದ್ಯಾನಿಲಯದ ಘಟಕ ಕಾಲೇಜಿನಲ್ಲಿ ವಿಜ್ಞಾನ ಪದವಿ ಕೋರ್ಸ್‌ನ್ನು ಪ್ರಾರಂಭಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ? (ವಿವರ ನೀಡುವುದು)

## ಪ್ರಾಥಮಿಕ ಆರೋಗ್ಯ ಘಟಕಗಳನ್ನು ಮೇಲ್ದರ್ಜೆಗೇರಿಸುವ ಬಗ್ಗೆ

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :-**

೯ (೯೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಿವಮೊಗ್ಗ ಜಿಲ್ಲೆಯಲ್ಲಿರುವ ಒಟ್ಟು ಪ್ರಾಥಮಿಕ ಆರೋಗ್ಯ ಘಟಕಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಹಾಗೂ ಹೋಬಳಿವಾರು ವಿವರ ನೀಡುವುದು)

(ಆ) ಸದರಿ ಪ್ರಾಥಮಿಕ ಆರೋಗ್ಯ ಘಟಕಗಳಲ್ಲಿ ಎಷ್ಟು ಘಟಕಗಳನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆ; (ವಿವರ ನೀಡುವುದು)

(ಇ) ಹೌದಾದಲ್ಲಿ, ಯಾವ ಕಾಲಮಿತಿಯೊಳಗೆ ಎಷ್ಟು ಪ್ರಾಥಮಿಕ ಆರೋಗ್ಯ ಘಟಕಗಳನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೇರಿಸಲಾಗುವುದು ;

(ಈ) ಜನಸಂಖ್ಯಾನುಗುಣವಾಗಿ ಪ್ರಾಥಮಿಕ ಆರೋಗ್ಯ ಘಟಕಗಳನ್ನು ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೇರಿಸಲು ಇರುವ ಸರ್ಕಾರದ ನೀತಿಗಳೇನು ? (ವಿವರ ನೀಡುವುದು)

## ಹೊಸ ಸರ್ಕಾರಿ ನರ್ಸಿಂಗ್ ಕಾಲೇಜು ಪ್ರಾರಂಭಿಸುವ ಬಗ್ಗೆ

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :-**

೧೦ (೯೭) ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಿವಮೊಗ್ಗ ಜಿಲ್ಲೆಯಲ್ಲಿರುವ ಒಟ್ಟು ಸರ್ಕಾರಿ ನರ್ಸಿಂಗ್ ಕಾಲೇಜುಗಳ ಸಂಖ್ಯೆ ಎಷ್ಟು;

(ಆ) ಶಿವಮೊಗ್ಗ ಜಿಲ್ಲೆಯ ಕೈಗಾರಿಕೆಗೆ ಪ್ರಸಿದ್ಧಿ ಪಡೆದ ಭದ್ರಾವತಿ ತಾಲ್ಲೂಕಿನಲ್ಲಿ ಹೊಸ ಸರ್ಕಾರಿ ನರ್ಸಿಂಗ್ ಕಾಲೇಜು ಪ್ರಾರಂಭಿಸುವ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳುವುದೇ ? (ವಿವರ ನೀಡುವುದು)

## ಅತಿಥಿ ಉಪನ್ಯಾಸಕರ ವೇತನವನ್ನು ಹೆಚ್ಚಿಸುವ ಬಗ್ಗೆ

**ಶ್ರೀ ಎಸ್. ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೧೧ (೪೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ಹಾಗೂ ಅನುದಾನಿತ ಪದವಿಪೂರ್ವ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರು ಅತೀ ಕನಿಷ್ಠ ಮಾಸಿಕ ಸಂಭಾವನೆ ಪಡೆಯುತ್ತಿದ್ದು, ಇದರಿಂದ ಅವರ ಕುಟುಂಬದ ಪೋಷಣೆ ಕಷ್ಟಸಾಧ್ಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ ಅತಿಥಿ ಉಪನ್ಯಾಸಕರ ಮಾಸಿಕ ಸಂಭಾವನೆಯನ್ನು ಕನಿಷ್ಠ ರೂ.೨೫.೦೦೦ಕ್ಕೆ ಹೆಚ್ಚಿಸಿ, ಅವರ ಜೀವನ ನಿರ್ವಹಣೆಗೆ ಅನುಕೂಲ ಮಾಡಿಕೊಡುವ ಸಂಬಂಧ ಸರ್ಕಾರದ ಹಂತದಲ್ಲಿ ಚರ್ಚೆ ನಡೆಸಲಾಗಿದೆಯೇ ;

(ಇ) ನಡೆದಿದ್ದಲ್ಲಿ, ಮಾಸಿಕ ಸಂಭಾವನೆಯನ್ನು ರೂ.೨೫.೦೦೦ಕ್ಕೆ ಹೆಚ್ಚಳ ಮಾಡಲು ನಿಗದಿಪಡಿಸಿರುವ ಕಾಲಮಿತಿ ಎಷ್ಟು?

## ೨೦೦೬ರ ನಂತರ ನೇಮಕಾತಿ ಹೊಂದಿರುವ ಎಲ್ಲಾ ಬೋಧಕ/ ಬೋಧಕೇತರ ಸಿಬ್ಬಂದಿಯವರಿಗೆ ಓ.ಪಿ.ಎಸ್ ಮಾಡುವ ಬಗ್ಗೆ

**ಶ್ರೀ ಎಸ್. ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೧೨ (೪೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೦೬ ನಂತರ ನೇಮಕಾತಿ ಹೊಂದಿರುವ ಎಲ್ಲಾ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗಳಿಗೆ ಜಾರಿಯಾಗಿರುವ ಹೊಸ

ಪಿಂಚಣಿ ಪದ್ಧತಿಯನ್ನು ರದ್ದುಗೊಳಿಸಿ ಹಳೇ ಪಿಂಚಣಿ ಯೋಜನೆಯನ್ನು ಜಾರಿಗೊಳಿಸುವ ಕುರಿತು ಸರ್ಕಾರದ ಹಂತದಲ್ಲಿ ಚರ್ಚೆಯಾಗಿದೆಯೇ ; ಚರ್ಚೆಯಾಗಿದ್ದಲ್ಲಿ, ಈ ಬಗ್ಗೆ ಕೈಗೊಂಡ ಕ್ರಮಗಳೇನು ;

(ಆ) ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರುಗಳ ವೇತನ ತಾರತಮ್ಯ, ಸರಿಪಡಿಸುವ ನಿಟ್ಟಿನಲ್ಲಿ ಕುಮಾರನಾಯಕ ನೇತೃತ್ವದ ವರದಿಯ ಶಿಫಾರಸ್ಸಿನಂತೆ ಹಾಗೂ ಸರ್ಕಾರದ ಲಿಖಿತ ಭರವಸೆಯಂತೆ ಎರಡನೇ ಹೆಚ್ಚುವರಿ ವೇತನ ಬಡ್ತಿ ಮಂಜೂರು ಮಾಡುವ ಸಂಬಂಧ ಸರ್ಕಾರ ಕೈಗೊಂಡ ಕ್ರಮಗಳೇನು ; ಹೆಚ್ಚುವರಿ ವೇತನ ಬಡ್ತಿ ಮಂಜೂರು ಕುರಿತಂತೆ ಸರ್ಕಾರ ನಿಗದಿಪಡಿಸಿರುವ ಕಾಲಮಿತಿ ಎಷ್ಟು ?

## ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಹಾಯಕ ಪ್ರಾಧ್ಯಾಪಕರ ನೇಮಕಾತಿ ಬಗ್ಗೆ

**ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರ) ಮತ್ತು**
**ಶ್ರೀ ಪಿ.ಹೆಚ್ ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೩ (೫೯+೪೬) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಹಾಯಕ ಪ್ರಾಧ್ಯಾಪಕರ ನೇಮಕಾತಿ ೨೦೨೧ರ ಅಧಿಸೂಚನೆ, ಸ್ಪರ್ಧಾತ್ಮಕ ಪರೀಕ್ಷೆ ಮುಗಿದು ಅಂತಿಮ ಆಯ್ಕೆ ಪಟ್ಟಿ ಪ್ರಕಟವಾಗಿ ದಿನಾಂಕ:೦೪.೧೧.೨೦೨೩ರ ವಿಶೇಷ ರಾಜ್ಯಪತ್ರದಲ್ಲಿ ಅಧಿಕೃತವಾಗಿ ಪ್ರಕಟಿಸಿ ಸದರಿ ನೇಮಕಾತಿಗೆ ಸಂಬಂಧಿಸಿದಂತೆ ೧೨೦೮ ಅಭ್ಯರ್ಥಿಗಳ ಪೊಲೀಸ್ ಮತ್ತು

ಮೆಡಿಕಲ್ ವೆರಿಫಿಕೇಶನ್, ಅಂಕಪಟ್ಟಿಗಳ ನೈಜತೆ ಮೊದಲಾದ ಎಲ್ಲಾ ಪ್ರಕ್ರಿಯೆಗಳು ಶೇ.೯೦ರಷ್ಟು ಮುಗಿದಿದ್ದರೂ ನೇಮಕಾತಿ ಆದೇಶ ನೀಡಲು ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು ;

(ಆ) ೨೦೨೧ರ ಸಹಾಯಕ ಪ್ರಾಧ್ಯಾಪಕರ ನೇಮಕಾತಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳ ಆದೇಶ ನೀಡುವ ಪ್ರಕ್ರಿಯೆ ಯಾವ ಹಂತದಲ್ಲಿದೆ; ಹೈದರಾಬಾದ್ ಕರ್ನಾಟಕ ವಿಭಾಗದ ಮೀಸಲಾತಿಗೆ ಸಂಬಂಧಿಸಿದಂತೆ ಮಾನ್ಯ ಉಚ್ಚ ನ್ಯಾಯಾಲಯವು ೧೩ ಮಾರ್ಚ್ ೨೦೨೪ರಂದು ಮಧ್ಯಂತರ ತೀರ್ಪು ನೀಡಿ ಕೌನ್ಸಿಲಿಂಗ್ ನಡೆಸಿ ಸ್ಥಳ ನಿಯುಕ್ತಿಗೊಳಿಸಬಹುದೆಂದು ಆದೇಶ ನೀಡಿದ್ದರೂ ನೇಮಕಾತಿ ಪ್ರಕ್ರಿಯೆ ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು ;

(ಇ) ಮಾನ್ಯ ಉಚ್ಚ ನ್ಯಾಯಾಲಯವು ೧೩ ಮಾರ್ಚ್ ೨೦೨೪ರಂದು ನೀಡಿದ ಮಧ್ಯಂತರ ತೀರ್ಪಿನ ಆದೇಶದನ್ವಯ ಕೆ.ಪಿ.ಟಿ.ಸಿ.ಎಲ್, ಇಲಾಖೆ ಹುದ್ದೆಗಳಿಗೆ, ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆ, ಲೋಕೋಪಯೋಗಿ ಇಲಾಖೆ ಹುದ್ದೆಗಳಿಗೆ ಹಾಗೂ ಸಿ.ಆ.ಸು ಇಲಾಖೆ ಹುದ್ದೆಗಳಿಗೆ ಷರತ್ತುಬದ್ಧ ನೇಮಕಾತಿ ಆದೇಶವನ್ನು ನೀಡಲಾಗಿದ್ದರೂ ಸಹಾಯಕ ಪ್ರಾಧ್ಯಾಪಕರಿಗೆ ನೇಮಕಾತಿ ಆದೇಶ ನೀಡದಿರಲು ಕಾರಣವೇನು ;

(ಈ) ಸದರಿ ಆದೇಶವನ್ನು ಯಾವ ಕಾಲಮಿತಿಯಲ್ಲಿ ನೀಡಲಾಗುವುದು ?

## ಪದವಿ ಕಾಲೇಜುಗಳ ಅತಿಥಿ ಉಪನ್ಯಾಸಕರ ಸಮಸ್ಯೆ ಬಗ್ಗೆ

**ಶ್ರೀ ಎಸ್. ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೧೪ (೬೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪದವಿ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರುಗಳ ಸಂಖ್ಯೆ ಎಷ್ಟು; ಈ ಅತಿಥಿ ಉಪನ್ಯಾಸಕರಿಗೆ ಸರ್ಕಾರದಿಂದ ಯಾವ ರೀತಿಯ ವೇತನವನ್ನು ನೀಡಲಾಗುತ್ತಿದೆ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಆ) ರಾಜ್ಯದ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ಕಾರ್ಯಭಾರ ಎಷ್ಟು; ರಾಜ್ಯದ ಕೆಲವು ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರುಗಳಿಗೆ ಹೆಚ್ಚಿನ ಕೆಲಸದ ಒತ್ತಡ ಹೇರುತ್ತಿರುವುದರಿಂದ ಈ ಸಮಸ್ಯೆ ನಿವಾರಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? (ಸಂಪೂರ್ಣವಾದ ಮಾಹಿತಿ ನೀಡುವುದು)

## ಶಿಕ್ಷಕರ ಬಡ್ತಿ ಕುರಿತು

**ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೧೫ (೧೦೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರೌಢ ಶಾಲಾ ಶಿಕ್ಷಕರು ಪ್ರಾಥಮಿಕ ಶಾಲೆಯಿಂದ ಪ್ರೌಢ ಶಾಲೆಗೆ ಬಡ್ತಿ ಹೊಂದಲು ೩ ವರ್ಷಗಳ ಪದವಿ ಹಾಗೂ ೨ ವರ್ಷಗಳ ಬಿ.ಎಡ್ (ಸ್ಪರ್ಧಾತ್ಮಕ ಪರೀಕ್ಷೆಯ ಮೂಲಕ) ವಿದ್ಯಾರ್ಹತೆಗಳ ಬಳಿಕ ಅವರ ಸೇವಾ ಜೇಷ್ಠತೆ ಆಧಾರದ ಮೇಲೆ ಬಡ್ತಿ ನೀಡಲಾಗುತ್ತಿರುವುದು ನಿಜವೇ ; ಒಬ್ಬ ದ್ವಿತೀಯ ದರ್ಜೆ ಸಹಾಯಕನಾಗಿ ನೇಮಕಾತಿ ಹೊಂದಿದ ನೌಕರ ಯಾವುದೇ ಹೆಚ್ಚಿನ ವಿದ್ಯಾರ್ಹತೆ ಪಡೆಯದಿದ್ದರು ಕೂಡ ಆತನಿಗೆ ಪ್ರಥಮ ದರ್ಜೆ ಸಹಾಯಕ, ಅಧೀಕ್ಷಕ, ಕಛೇರಿ ವ್ಯವಸ್ಥಾಪಕ, ಪತ್ರಾಂಕಿತ ವ್ಯವಸ್ಥಾಪಕರಾಗಿ ಬಡ್ತಿ ನೀಡಲಾಗುತ್ತಿರುವುದು ಸರಿಯೇ ;

ಕೆ.ಸಿ.ಎಸ್.ಆರ್ ನಲ್ಲಿ ಎಲ್ಲಾ ನೌಕರರಿಗೂ ಒಂದೇ ನಿಯಮ ಅನ್ವಯಿಸಿದ್ದರಿಂದ ಕಳೆದ ಹಲವಾರು ವರ್ಷಗಳಿಂದ ಬಡ್ತಿ ಹೊಂದಿದ ಪ್ರೌಢ ಶಾಲಾ ಸಹ ಶಿಕ್ಷಕರು ೧೦,೧೫,೨೦ ವರ್ಷಗಳ ವೇತನ ಬಡ್ತಿಗಳಿಂದ ವಂಚಿತರಾಗುತ್ತಿದ್ದು, ಈ ಶಿಕ್ಷಕರಿಗೆ ಆಗುತ್ತಿರುವ ಈ ಅನ್ಯಾಯವನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಶಿಕ್ಷಕರ ಅವಲಂಬಿತರ ವೈದ್ಯಕೀಯ ವೆಚ್ಚ ಮರುಪಾವತಿ ಸಂದರ್ಭದಲ್ಲಿ ಅವಲಂಬಿತ ಪ್ರಮಾಣ ಪತ್ರ ನೀಡಲು ಕಂದಾಯ ಇಲಾಖೆಯವರು ಒಂದೇ ಪಡಿತರ ಚೀಟಿಯಲ್ಲಿ ನೌಕರ ಹಾಗೂ ಅವಲಂಬಿತ ಇರಬೇಕೆನ್ನುವ ಷರತ್ತು ವಿಧಿಸುತ್ತಿರುವುದು ನೌಕರ ಹಾಗೂ ಅವಲಂಬಿತ ಹೆಸರು ಇದ್ದರೂ ಕೂಡ ನೌಕರನ ಆದಾಯವನ್ನೇ ವೃದ್ಧ ತಂದೆ ತಾಯಿಗಳ ಆದಾಯವನ್ನಾಗಿ ಪರಿಗಣಿಸುತ್ತಿರುವುದು ನೌಕರರು ವೈದ್ಯಕೀಯ ವೆಚ್ಚ ಮರುಪಾವತಿಸಿಕೊಳ್ಳಲು ಸಮಸ್ಯೆಯಾಗುತ್ತಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರೌಢ ಶಾಲಾ ವಿಭಾಗಗಳಲ್ಲಿ ಹಿರಿಯ ಸಹ ಶಿಕ್ಷಕರ ಹುದ್ದೆಯಿದ್ದು, ಸದರಿ ಶಿಕ್ಷಕರು ಶಾಲೆಯ ಸಂಪೂರ್ಣ ಜವಾಬ್ದಾರಿ ನಿರ್ವಹಿಸುತ್ತಿದ್ದು, ಅಲ್ಲಿ ಪೂರ್ಣಕಾಲಿಕ ಮುಖ್ಯೋಪಾಧ್ಯಾಯರ/ಉಪ ಪ್ರಾಂಶುಪಾಲರ ಹುದ್ದೆ ಮಂಜೂರಾಗದಿರುವುದರಿಂದ ಪ್ರಭಾರ ವಹಿಸಿರುವ ಹಿರಿಯ ಸಹ ಶಿಕ್ಷಕರಿಗೆ ಸೇವಾ ಸೌಲಭ್ಯಗಳು ದೊರೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ ;

(ಈ) ರಾಜ್ಯದ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಪ್ರಥಮ ದರ್ಜೆ, ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳು ಖಾಲಿ ಇದ್ದು, ಅತಿಥಿ ಶಿಕ್ಷಕರ ನೇಮಕಾತಿ ಮಾಡಿದಂತೆ ಅತಿಥಿ ಸಹಾಯಕರ ನೇಮಕಾತಿ ಮಾಡಿ ಗೌರವ ಧನ ನೀಡಿದ್ದಲ್ಲಿ, ಶಿಕ್ಷಕರು ಪಾಠ ಬೋಧನೆಯಲ್ಲಿ ತೊಡಗಿಸಿಕೊಳ್ಳಬಹುದಲ್ಲವೇ ;

(ಉ) ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಆಂಗ್ಲ ಮಾಧ್ಯಮಕ್ಕೆ ಅನುಮತಿ ನೀಡಿದಂತೆ ಅನುದಾನಿತ ಪ್ರೌಢ ಶಾಲೆಗಳಲ್ಲಿ ಆಂಗ್ಲ ಮಾಧ್ಯಮ ವಿಭಾಗ ಪ್ರಾರಂಭಿಸದಿರಲು ಕಾರಣವೇನು ;

(ಊ) ಪ್ರಸ್ತುತ ಸರ್ಕಾರವು ನೂತನ ಪಿಂಚಣಿ ರದ್ದುಗೊಳಿಸಿ ಹಳೆ ಪಿಂಚಣಿ ವ್ಯವಸ್ಥೆ ಜಾರಿಗೆ ತರುವ ಬಗ್ಗೆ ಗಮನ ಹರಿಸದಿರುವುದಕ್ಕೆ ಕಾರಣವೇನು ;

(ಋ) ಕಳೆದ ೧೪ ವರ್ಷಗಳಿಂದ ಪ್ರೌಢ ಶಾಲೆಗಳಿಂದ ಕಾಲೇಜು ಉಪನ್ಯಾಸಕರ ಹುದ್ದೆಗೆ ಮುಂಬಡ್ತಿ ನೀಡದಿರಲು ಕಾರಣವೇನು ? (ಸಂಪೂರ್ಣ ವಿವರ ನೀಡುವುದು)

## ಕಲ್ಯಾಣ ಕರ್ನಾಟಕದಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳ ಕುರಿತು

**ಡಾ॥ ಚಂದ್ರಶೇಖರ ಬಸವರಾಜ ಪಾಟೀಲ (ಪದವೀಧರರ ಕ್ಷೇತ್ರ) :-**

೧೬ (೮೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲ್ಯಾಣ ಕರ್ನಾಟಕದ ಭಾಗದಲ್ಲಿರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಈ ಭಾಗದಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿಗೆ ಸರ್ಕಾರ ಕೈಗೊಂಡ ಕ್ರಮವೇನು ;

(ಇ) ಯಾವ ಕಾಲಮಿತಿಯೊಳಗೆ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ?

## ಅನುದಾನಿತ ಪ್ರೌಢ ಶಾಲೆಗಳ ಕುರಿತು

**ಡಾ॥ ಚಂದ್ರಶೇಖರ ಬಸವರಾಜ ಪಾಟೀಲ (ಪದವೀಧರರ ಕ್ಷೇತ್ರ) :-**

೧೭ (೮೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :-

ಕಲ್ಯಾಣ ಕರ್ನಾಟಕದಲ್ಲಿರುವ ಅನುದಾನಿತ ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು ; ಸದರಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ಸಂಖ್ಯೆ ಎಷ್ಟು ? (ತಾಲ್ಲೂಕುವಾರು, ಜಿಲ್ಲಾವಾರು ಶಿಕ್ಷಕರುಗಳ ಮಾಹಿತಿ ಒದಗಿಸುವುದು)

## ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರುಗಳ ಕುರಿತು

**ಡಾ॥ ಚಂದ್ರಶೇಖರ ಬಸವರಾಜ ಪಾಟೀಲ (ಪದವೀಧರರ ಕ್ಷೇತ್ರ) :-**

೧೮ (೮೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :-

ಕಲ್ಯಾಣ ಕರ್ನಾಟಕದ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರುಗಳ ಮತ್ತು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರುಗಳ ಸಂಖ್ಯೆ ಎಷ್ಟು ? (ತಾಲ್ಲೂಕುವಾರು ಮತ್ತು ಜಿಲ್ಲಾವಾರು ಮಾಹಿತಿ ಒದಗಿಸುವುದು)

## ಕಲ್ಯಾಣ ಕರ್ನಾಟಕದಲ್ಲಿ ಬಡ್ತಿ ಹೊಂದಿದ ಶಿಕ್ಷಕರುಗಳ ಮತ್ತು ಉಪನ್ಯಾಸಕರುಗಳ ಕುರಿತು

**ಡಾ॥ ಚಂದ್ರಶೇಖರ ಬಸವರಾಜ ಪಾಟೀಲ (ಪದವೀಧರರ ಕ್ಷೇತ್ರ) :-**

೧೯ (೮೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲ್ಯಾಣ ಕರ್ನಾಟಕದ ಪ್ರಾಥಮಿಕ ಶಾಲೆಯಿಂದ ಪ್ರೌಢ ಶಾಲೆಗೆ ಬಡ್ತಿ ಹೊಂದಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರುಗಳ ಮತ್ತು ಪ್ರೌಢ ಶಾಲೆಯಿಂದ ಪದವಿ ಪೂರ್ವ ಕಾಲೇಜಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರ ಸಂಖ್ಯೆ ಎಷ್ಟು ; (ಜಿಲ್ಲಾ ಮತ್ತು ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ಸದರಿಯವರಿಗೆ ೧೦.೧೫.೨೦ ವರ್ಷಗಳ ವೇತನ ಬಡ್ತಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಬಡ್ತಿ ನೀಡಲಾಗುವುದು ?

## ವಿಶ್ವವಿದ್ಯಾನಿಲಯಗಳಲ್ಲಿರುವ ಖಾಲಿ ಹುದ್ದೆಗಳ ಕುರಿತು

**ಡಾ॥ ಚಂದ್ರಶೇಖರ ಬಸವರಾಜ ಪಾಟೀಲ (ಪದವೀಧರರ ಕ್ಷೇತ್ರ) :-**

೨೦ (೮೮) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲ್ಯಾಣ ಕರ್ನಾಟಕದ ಭಾಗದಲ್ಲಿರುವ ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಪ್ರಾಧ್ಯಾಪಕರುಗಳ ಸಂಖ್ಯೆ ಎಷ್ಟು ;

(ಆ) ಸದರಿ ಹುದ್ದೆಗಳ ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು ? (ವಿವರ ನೀಡುವುದು)

## ಪಡಿತರ ಚೀಟಿಯ ವಿಚಾರಣೆಯಲ್ಲಿ ಆಗುತ್ತಿರುವ ವಿಳಂಬ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೧ (೧೧೨) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪ್ರಸ್ತುತ ಬಿ.ಪಿ.ಎಲ್. ಎ.ಪಿ.ಎಲ್ ಮತ್ತು ಅಂತ್ಯೋದಯ ಪಡಿತರ ಚೀಟಿಗಳನ್ನು ಹೊಂದಿರುವ ಕುಟುಂಬಗಳ ಸಂಖ್ಯೆ ಎಷ್ಟು ; ಬಿ.ಪಿ.ಎಲ್ ಪಡಿತರ ಚೀಟಿಯನ್ನು ಪಡೆಯಲು ಸರ್ಕಾರ ನಿಗದಿಪಡಿಸಿರುವ ಮಾನದಂಡಗಳೇನು ;

(ಆ) ೨೦೨೩-ಏಪ್ರಿಲ್ ನಿಂದ ಜೂನ್-೨೦೨೪ ತಿಂಗಳ ಅಂತ್ಯದವರೆಗೆ ಬಿ.ಪಿ.ಎಲ್. ಎ.ಪಿ.ಎಲ್ ಮತ್ತು ಅಂತ್ಯೋದಯ ಪಡಿತರ ಚೀಟಿಗಾಗಿ ಅರ್ಜಿ ಸಲ್ಲಿಸಿರುವ ಕುಟುಂಬಗಳ ಸಂಖ್ಯೆ ಎಷ್ಟು; ಹೊಸ ಬಿ.ಪಿ.ಎಲ್ ಪಡಿತರ ಚೀಟಿಗಾಗಿ ಅರ್ಜಿ ಸಲ್ಲಿಸಿರುವ ಅರ್ಹ ಫಲಾನುಭವಿಗಳಿಗೆ ಅರ್ಜಿ ಸಲ್ಲಿಸಿದ ದಿನಾಂಕದಿಂದ ಎಷ್ಟು ಸಮಯದ ಒಳಗಾಗಿ ಅವರಿಗೆ ಪಡಿತರ ಚೀಟಿಯನ್ನು ನೀಡಲಾಗುತ್ತದೆ ; ಅರ್ಜಿ ಸಲ್ಲಿಸಲು ಅವಕಾಶ ನೀಡಿಲ್ಲದಿದ್ದಲ್ಲಿ, ಕಾರಣಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ಅನ್ನಭಾಗ್ಯ ಯೋಜನೆಯಡಿ ಪಡಿತರ ಬದಲಾಗಿ ೨೦೨೩-೨೪ ಮತ್ತು ೨೦೨೪-೨೫ನೇ ಸಾಲಿನಲ್ಲಿ ಇಲ್ಲಿಯವರೆಗೆ ಎಷ್ಟು ಮೊತ್ತವನ್ನು ಪಡಿತರ ಚೀಟಿದಾರರಿಗೆ ಪಾವತಿ ಮಾಡಲಾಗಿದೆ ; ಒಟ್ಟು ಫಲಾನುಭವಿಗಳ ಸಂಖ್ಯೆ ಎಷ್ಟು ; ಪಾವತಿ ಮಾಡಲಾದ ಫಲಾನುಭವಿಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡದ ಫಲಾನುಭವಿಗಳ ಸಂಖ್ಯೆ ಎಷ್ಟು ;

(ಈ) ಪಡಿತರ ಚೀಟಿಗಳ ತಿದ್ದುಪಡಿ ಹಾಗೂ ಹೊಸ ಪಡಿತರ ಚೀಟಿ ಪಡೆಯಲು ಜನರು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಸರ್ಕಾರಿ ಯೋಜನೆಗಳಿಗೆ ಹಾಗೂ ಆರೋಗ್ಯ ಸಂಬಂಧಿಸಿದ ಸವಲತ್ತುಗಳನ್ನು ಪಡೆಯಲು ಪಡಿತರ ಚೀಟಿಯು ಅತ್ಯವಶ್ಯಕವಾಗಿದ್ದು ಸರಿಯಾದ ಸಮಯದಲ್ಲಿ ಸಾರ್ವಜನಿಕರಿಗೆ ಪಡಿತರ ಚೀಟಿಯ ತಿದ್ದುಪಡಿ ಮತ್ತು ವಿತರಣೆ ಮಾಡದಿದ್ದಲ್ಲಿ ಅವರನ್ನು ವಂಚಿಸಿದಂತೆ ಆಗುವುದಿಲ್ಲವೇ ?

## ಗೃಹ ಜ್ಯೋತಿ ಯೋಜನೆಯ ಅನುಷ್ಠಾನದ ಕುರಿತು ಮತ್ತು ಸರ್ಕಾರದ ಬಾಕಿ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೨ (೧೧೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗೃಹ ಜ್ಯೋತಿ ಯೋಜನೆಯಡಿ ನೋಂದಣಿ ಮಾಡಿಕೊಂಡಿರುವ ವಿದ್ಯುತ್ ಬಳಕೆದಾರರ ಸಂಖ್ಯೆ ಎಷ್ಟು ; ಈ ಯೋಜನೆಯಿಂದ ಹೊರಗುಳಿದವರ ಸಂಖ್ಯೆ ಎಷ್ಟು ; (ಹೆಸ್ಕಾಂವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಯೋಜನೆಯಲ್ಲಿ ನೋಂದಣಿ ಮಾಡಿಕೊಂಡಿರುವ ಪರಿಶಿಷ್ಟ ಜಾತಿ ಮತ್ತು ಪಂಗಡದ ವ್ಯಾಪ್ತಿಗೆ ಒಳಪಡುವ ವಿದ್ಯುತ್ ಬಳಕೆದಾರರ ಸಂಖ್ಯೆ ಎಷ್ಟು; ಇಲ್ಲಿಯವರೆಗೆ ಅವರು ಬಳಕೆ ಮಾಡಿಕೊಂಡಿರುವ ವಿದ್ಯುತ್ ಪ್ರಮಾಣ ಮತ್ತು ಮೊತ್ತವೆಷ್ಟು ; ಸದರಿ ಮೊತ್ತವು ಸರ್ಕಾರದಿಂದ ಪಾವತಿ ಆಗಿದೆಯೇ ;

(ಇ) ಸದರಿ ಯೋಜನೆಯಡಿ ೨೦೨೩–೨೪ ಮತ್ತು ೨೦೨೪–೨೫ನೇ ಸಾಲಿನಲ್ಲಿ ನೋಂದಾಯಿತ ವಿದ್ಯುತ್ ಬಳಕೆದಾರರು ಉಪಯೋಗಿಸಿದ ವಿದ್ಯುತ್ ಪ್ರಮಾಣವೆಷ್ಟು ; ಹಾಗೂ ಎಷ್ಟು ಮೊತ್ತದ ವಿದ್ಯುತ್‌ನ್ನು ಬಳಕೆ ಮಾಡಲಾಗಿದೆ ;

(ಈ) ಗೃಹ ಜ್ಯೋತಿ ಯೋಜನೆಯ ಫಲಾನುಭವಿಗಳು ಬಳಸಿದ ವಿದ್ಯುತ್‌ಗೆ ಅನುಗುಣವಾಗಿ ಸರಿಯಾದ ಸಮಯದಲ್ಲಿ ಸರ್ಕಾರದಿಂದ ವಿದ್ಯುತ್ ಬಳಕೆಯ ಮೊತ್ತವು ಪಾವತಿಯಾಗುತ್ತಿದೆಯೇ ; (ಪಾವತಿ ವಿವರ ನೀಡುವುದು)

(ಉ) ಗೃಹ ಜ್ಯೋತಿ ಯೋಜನೆಯಡಿ ಸರ್ಕಾರದಿಂದ ಪಾವತಿಯಾಗದೇ ಬಾಕಿ ಉಳಿಸಿಕೊಂಡಿರುವ ಮೊತ್ತವೆಷ್ಟು ? (ಸಂಪೂರ್ಣ ಮಾಹಿತಿ ನೀಡುವುದು)

## ಬೆಂಗಳೂರು ನಗರ ಜಿಲ್ಲೆಯಲ್ಲಿ ಅರಣ್ಯ ಭೂವಿಯ ಒತ್ತುವರಿಯ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ ) :-**

೨೩ (೧೩೧) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರ ಜಿಲ್ಲೆಯಲ್ಲಿರುವ ಅರಣ್ಯ ಭೂಮಿಯ ವಿಸ್ತೀರ್ಣವೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಅರಣ್ಯ ಭೂಮಿಯಲ್ಲಿ ಒತ್ತುವರಿಯಾಗಿರುವ ಅರಣ್ಯ ಪ್ರದೇಶದ ವ್ಯಾಪ್ತಿ ಎಷ್ಟು ; (ಒತ್ತುವರಿದಾರರ ವಿವರ ನೀಡುವುದು)

(ಇ) ಸದರಿ ಒತ್ತುವರಿ ತೆರವುಗೊಳಿಸದಂತೆ ಎಷ್ಟು ಜನ ನ್ಯಾಯಾಲಯದಿಂದ ತಡೆಯಾಜ್ಞೆಯನ್ನು ತಂದಿದ್ದಾರೆ ; ತಡೆಯಾಜ್ಞೆಯನ್ನು ತೆರವುಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; (ಪ್ರಕರಣವಾರು ವಿವರ ನೀಡುವುದು)

(ಈ) ನ್ಯಾಯಾಲಯದ ತಡೆಯಾಜ್ಞೆಯಿಲ್ಲದ ಅರಣ್ಯ ಭೂಮಿಯ ಒತ್ತುವರಿ ತೆರವುಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಇಂಧನ ಇಲಾಖೆಗೆ ರಾಜ್ಯ ಸರ್ಕಾರ ಬಾಕಿ ಹಣ ಬಿಡುಗಡೆ ಮಾಡುವ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :-**

೨೪ (೧೩೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೩-೨೪ನೇ ಆರ್ಥಿಕ ವರ್ಷದಲ್ಲಿ ರಾಜ್ಯದಲ್ಲಿ ಗೃಹ ಜ್ಯೋತಿ ಯೋಜನೆಯಲ್ಲಿ ಬಳಕೆ ಮಾಡಲಾದ ಒಟ್ಟು ವಿದ್ಯುತ್ ಪ್ರಮಾಣವೆಷ್ಟು ; ಇದರಿಂದ ಇಂಧನ ಇಲಾಖೆಗೆ ಬರಬೇಕಾದ ಒಟ್ಟು ಮೊತ್ತವೆಷ್ಟು ; (ಎಸ್ಕಾಂವಾರು ವಿವರ ನೀಡುವುದು)

(ಆ) ೨೦೨೩-೨೪ನೇ ಆರ್ಥಿಕ ವರ್ಷದಲ್ಲಿ ರಾಜ್ಯ ಸರ್ಕಾರ ಗೃಹ ಜ್ಯೋತಿ ಯೋಜನೆಗಾಗಿ ಇಂಧನ ಇಲಾಖೆಗೆ ಬಿಡುಗಡೆ ಮಾಡಿದ ಅನುದಾನವೆಷ್ಟು; ಬಾಕಿ ಇರುವ ಹಣವೆಷ್ಟು ;

(ಇ) ಇಂಧನ ಇಲಾಖೆಯು ದೈನಂದಿನ ಖರ್ಚಿಗೂ ಹಣವಿಲ್ಲದ ಕಾರಣ ಬರಬೇಕಾದ ಬಾಕಿ ಹಣವನ್ನು ಪಾವತಿಸಿ ಎಂದು ಸರ್ಕಾರಕ್ಕೆ ಪತ್ರ ಬರೆದಿದೆಯೇ ; ಬರೆದಿದ್ದಲ್ಲಿ, ಸದರಿ ಪತ್ರದ ಪ್ರತಿಯನ್ನು ನೀಡುವುದು ;

(ಈ) ಇಂಧನ ಇಲಾಖೆಗೆ ನೀಡಬೇಕಾಗಿರುವ ಬಾಕಿ ಹಣವನ್ನು ಸರ್ಕಾರ ಯಾವ ಕಾಲಮಿತಿಯಲ್ಲಿ ಪಾವತಿ ಮಾಡಲಾಗುವುದು ?

## ತುಮಕೂರು ಜಿಲ್ಲೆಯ ತಾಲ್ಲೂಕು ಆಸ್ಪತ್ರೆಗಳ ಅವ್ಯವಸ್ಥೆಯ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :-**

೨೫ (೧೩೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರವು ಕುಟುಂಬ ಯೋಜನೆಯನ್ನು ಪ್ರೋತ್ಸಾಹಿಸಲು ಕೈಗೊಂಡಿರುವ ಕಾರ್ಯಕ್ರಮಗಳಾವುವು ;

(ಆ) ತುಮಕೂರು ಜಿಲ್ಲೆ ವ್ಯಾಪ್ತಿಯ ತಾಲ್ಲೂಕು ಆಸ್ಪತ್ರೆಗಳಲ್ಲಿ ಸಂತಾನ ಹರಣ ಶಸ್ತ್ರಚಿಕಿತ್ಸೆ ನಡೆಸಲು ಸೂಕ್ತ ಸೌಲಭ್ಯಗಳನ್ನು ಸರ್ಕಾರದಿಂದ ಒದಗಿಸಲಾಗಿದೆಯೇ ;

(ಇ) ೨೦೨೪ನೇ ಸಾಲಿನಲ್ಲಿ ಪಾವಗಡ ತಾಲ್ಲೂಕು ಆಸ್ಪತ್ರೆಯಲ್ಲಿ ಸಂತಾನ ಹರಣ ಮತ್ತು ಗರ್ಭಕೋಶದ ಚಿಕಿತ್ಸೆಗೆ ಒಳಾಗದ ೩ ಮಹಿಳೆಯರು ಸಾವನ್ನಪ್ಪಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ;

(ಈ) ೨೦೨೪ರ ಮಾರ್ಚ್ ತಿಂಗಳಲ್ಲಿ ತುಮಕೂರು ಜಿಲ್ಲೆ, ಗುಬ್ಬಿ ತಾಲ್ಲೂಕಿನಲ್ಲಿ ಅರಿವಳಿಕೆ ನೀಡದೆ ಸಂತಾನ ಹರಣ ಶಸ್ತ್ರಚಿಕಿತ್ಸೆ ಮಾಡಿದ ಪರಿಣಾಮ ಮಹಿಳೆ ಅಸ್ವಸ್ಥರಾದ ಘಟನೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ , ಈ ರೀತಿ ಬೇಜವಾಬ್ದಾರಿಯಿಂದ ವರ್ತಿಸಿದ ವೈದ್ಯರ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮವೇನು ?

## ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಶೂನ್ಯ ಫಲಿತಾಂಶ ಗಳಿಸಿದ ಶಾಲೆಗಳ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :-**

೨೬ (೧೩೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೩-೨೪ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಶೂನ್ಯ ಫಲಿತಾಂಶ ಗಳಿಸಿದ ಶಾಲೆಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ಸರ್ಕಾರಿ ಶಾಲೆಗಳ ಮತ್ತು ಖಾಸಗಿ ಶಾಲೆಗಳ ಸಂಖ್ಯೆ ಎಷ್ಟು ; ಸದರಿ ಶಾಲೆಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಶೂನ್ಯ ಫಲಿತಾಂಶ ಗಳಿಸಿದ ಸರ್ಕಾರಿ ಶಾಲೆಗಳಲ್ಲಿ ಮಂಜೂರಾದ ಶಿಕ್ಷಕರ ಹುದ್ದೆಗಳು ಎಷ್ಟು ; ಖಾಲಿಯಿರುವ ಶಿಕ್ಷಕರ ಹುದ್ದೆಗಳ ಸಂಖ್ಯೆ ಎಷ್ಟು ;

(ಇ) ಶೂನ್ಯ ಫಲಿತಾಂಶ ಪಡೆದ ಸರ್ಕಾರಿ ಶಾಲೆಗಳಲ್ಲಿ ಖಾಲಿಯಿರುವ ಶಿಕ್ಷಕರ ಹುದ್ದೆಗಳಿಗೆ ಶಿಕ್ಷಕರನ್ನು ನೇಮಕ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು ;

(ಈ) ಸದರಿ ಶಾಲೆಗಳಲ್ಲಿ ಫಲಿತಾಂಶ ಉತ್ತಮಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಪದವಿ ವಿದ್ಯಾರ್ಥಿಗಳಿಗೆ ಮುದ್ರಿತ ಅಂಕಪಟ್ಟಿ ನೀಡದಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೨೭ (೧೪೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರ ವಿಶ್ವವಿದ್ಯಾಲಯದ ಪದವಿ ವಿದ್ಯಾರ್ಥಿಗಳಿಗೆ ಪರೀಕ್ಷೆ ಮುಗಿದು ವರ್ಷ ಕಳೆದರೂ ಮುದ್ರಿತ ಅಂಕಪಟ್ಟಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ವಿದ್ಯಾರ್ಥಿಗಳ ಉನ್ನತ ವ್ಯಾಸಂಗ ಅಥವಾ ಕೆಲಸಕ್ಕೆ ಸೇರಿಕೊಳ್ಳುವುದಕ್ಕೆ ತೊಂದರೆಯಾಗುತ್ತಿಲ್ಲವೇ ;

(ಇ) ಬೆಂಗಳೂರು ನಗರ ವಿಶ್ವವಿದ್ಯಾಲಯ ವ್ಯಾಪ್ತಿಯಲ್ಲಿ ಎಷ್ಟು ಪದವಿ ಮತ್ತು ಸ್ನಾತಕೋತ್ತರ ಪದವಿ ಕಾಲೇಜುಗಳಿವೆ ಹಾಗೂ ಎಷ್ಟು ವಿದ್ಯಾರ್ಥಿಗಳು ಪರೀಕ್ಷೆ ತೆಗೆದುಕೊಳ್ಳುತ್ತಾರೆ ;

(ಈ) ಪರೀಕ್ಷೆಯಲ್ಲಿ ಉತ್ತೀರ್ಣರಾದವರಿಗೆ ಮುದ್ರಿತ ಅಂಕಪಟ್ಟಿ ಕಡ್ಡಾಯವಾಗಿ ವಿದ್ಯಾರ್ಥಿಗಳಿಗೆ ನೀಡಬೇಕಾಗಿರುವುದು ವಿಶ್ವವಿದ್ಯಾಲಯದ ಕರ್ತವ್ಯ ಎಂಬುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ, ಅಥವಾ ಅಂಕಪಟ್ಟಿ ಮುದ್ರಣ ಮಾಡಲು ಸರ್ಕಾರದಲ್ಲಿ ಆರ್ಥಿಕ ಸಮಸ್ಯೆ ಇದೆಯೇ ? (ವಿವರ ನೀಡುವುದು)

## ಸರ್ಕಾರಿ ಶಾಲೆಗಳಲ್ಲಿ ಕೊಠಡಿ ಪೀಠೋಪಕರಣ ಹಾಗೂ ಶಿಕ್ಷಕರ ಕೊರತೆ ಇರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೨೮ (೧೪೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಸರ್ಕಾರಿ ಶಾಲೆಗಳಲ್ಲಿ ಅಗತ್ಯವಾಗಿ ಬೇಕಾಗಿರುವ ಕೊಠಡಿ, ಪೀಠೋಪಕರಣಗಳು ಹಾಗೂ ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ತೆಗೆದುಕೊಂಡ ಕ್ರಮವೇನು ;

(ಆ) ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ಶಾಲೆಗಳ ಸಂಖ್ಯೆಯೆಷ್ಟು; ಇದರಲ್ಲಿ ೧೦ ಕ್ಕಿಂತ ಕಡಿಮೆ ಮಕ್ಕಳಿರುವ ಸರಾಸರಿ ಶಾಲೆಗಳ ಸಂಖ್ಯೆಯೆಷ್ಟು; ಇರುವ ಶಾಲೆಗಳಲ್ಲಿ ಏಕೋಪಾಧ್ಯಾಯ ಸರ್ಕಾರಿ ಶಾಲೆಗಳ ಸಂಖ್ಯೆಯೆಷ್ಟು ;

(ಇ) ಪ್ರತಿ ವರ್ಷವೂ ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಕ್ಷೀಣಿಸುತ್ತಿರುವುದರಿಂದ ಸರ್ಕಾರಿ ಶಾಲೆಗಳನ್ನು ಮುಚ್ಚುವ ಪರಿಸ್ಥಿತಿ ಎದುರಾಗಿದೆಯೇ ; ಹಾಗಿದ್ದಲ್ಲಿ, ಕಳೆದ ಐದು ವರ್ಷಗಳಿಂದ ಎಷ್ಟು ಸರ್ಕಾರಿ ಶಾಲೆಗಳನ್ನು ಮುಚ್ಚಲಾಗಿದೆ ;

(ಈ) ಕಳೆದ ಐದು ವರ್ಷದಲ್ಲಿ ಎಷ್ಟು ಖಾಸಗಿ ಶಾಲೆಗಳ ಪ್ರಾರಂಭಕ್ಕೆ ಅನುಮತಿ ನೀಡಲಾಗಿದೆ ; ಅದೇ ರೀತಿ ಎಷ್ಟು ಖಾಸಗಿ ಶಾಲೆಗಳನ್ನು ಮುಚ್ಚಲಾಗಿದೆ ; (ವಿವರ ನೀಡುವುದು)

(ಉ) ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ದಾಖಲಾತಿ ಕಡಿಮೆ ಆಗಲು ಕಾರಣ ಏನೆಂಬುದನ್ನು ಕಂಡು ಹಿಡಿಯಲು ಯಾವುದಾದರೂ ಸಮಿತಿಯನ್ನು ರಚಿಸಲಾಗಿದೆಯೇ ? (ವಿವರಗಳನ್ನು ಒದಗಿಸುವುದು)

## ಶಾಲೆಗಳಲ್ಲಿ ಯೋಗ ಶಿಕ್ಷಕರನ್ನು ನೇಮಕ ಮಾಡಿಕೊಳ್ಳುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯ (೧೪೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಶಾಲೆಗಳ ಪೈಕಿ ಎಷ್ಟು ಶಾಲೆಗಳಲ್ಲಿ ಯೋಗ ತರಬೇತಿಯ ತರಗತಿಗಳು ನಡೆಯುತ್ತಿದೆ ;

(ಆ) ಇಲಾಖೆಯಲ್ಲಿ ಯೋಗ ತರಬೇತಿದಾರರನ್ನು ನೇಮಿಸಿಕೊಳ್ಳಲಾಗಿದೆಯೇ ; ಹಾಗಿದ್ದಲ್ಲಿ, ಖಾಯಂ ಮತ್ತು ಗುತ್ತಿಗೆ ತರಬೇತಿದಾರರ ಸಂಖ್ಯೆಯೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಸರ್ಕಾರಿ ಶಾಲೆಗಳಲ್ಲಿ ಮಕ್ಕಳಿಗೆ ಮತ್ತು ಸ್ಥಳೀಯರಿಗೆ ಉಚಿತವಾಗಿ ಯೋಗ ತರಬೇತಿಯನ್ನು ನೀಡಲು ಮುಂದೆ ಬರುವ ಯೋಗ ತರಬೇತಿದಾರರಿಗೆ ಉಚಿತವಾಗಿ ಶಾಲಾ ಕೊಠಡಿಗಳಲ್ಲಿ ಸ್ಥಳಾವಕಾಶ ನೀಡಲು ಅವಕಾಶವಿದೆಯೇ: ;

(ಈ) ಹಾಗಿದ್ದಲ್ಲಿ, ರಾಜ್ಯದಲ್ಲಿ ಎಷ್ಟು ಶಾಲೆಗಳಲ್ಲಿ ಉಚಿತ ಯೋಗ ತರಬೇತಿ ಅಭ್ಯಾಸ ನಡೆಯುತ್ತಿದೆ. ಹಾಗೂ ಶಾಲಾ ಕೊಠಡಿಗಳಲ್ಲಿ ಮುಂಜಾನೆ ಮತ್ತು ಸಂಜೆಯ ಹೊತ್ತಿನಲ್ಲಿ ಅವಕಾಶ ನೀಡಿದರೆ ಮಕ್ಕಳಿಗೆ ಮತ್ತು ಸ್ಥಳೀಯ ನಿವಾಸಿಗಳಿಗೆ ಅನುಕೂಲವಾಗುವುದಿಲ್ಲವೆ ?

## ಆಯುಷ್ ಇಲಾಖೆಯ ಸೇವೆಗಳ ಕುರಿತು

**ಶ್ರೀ ಹೆಚ್.ಎಸ್.ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೦ (೭೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳ ತಾಲ್ಲೂಕು ಮತ್ತು ಜಿಲ್ಲಾ ಮಟ್ಟದ ಆಸ್ಪತ್ರೆಗಳನ್ನು ಅಭಿವೃದ್ಧಿಪಡಿಸಿ ಆಯುಷ್ ಇಲಾಖೆ ವಾಸ್ತವವಾಗಿ ಸಾರ್ವಜನಿಕರಿಗೆ ಉಪಯೋಗವಾಗುತ್ತಿರುವ ವಿಭಾಗಗಳು ಯಾವುವು ; (ತಜ್ಞ ವೈದ್ಯರ ಸಂಪೂರ್ಣ ಮಾಹಿತಿ ನೀಡುವುದು)

(ಆ) ಆಯುಷ್ ಇಲಾಖೆಯ ಸೇವೆಗಳನ್ನು ಸಾರ್ವಜನಿಕರು ಸದುಪಯೋಗ ಮಾಡಿಕೊಳ್ಳಲು ಇಲಾಖೆ ಕೈಗೊಂಡಿರುವ ಕ್ರಮಗಳೇನು ಮತ್ತು ಯಾವ ಯಾವ ವಿಭಾಗಗಳು ಚಿಕಿತ್ಸೆ ಲಭ್ಯವಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ಆಯುಷ್ ಇಲಾಖೆಯಲ್ಲಿ ಕ್ರಿಮಿನಲ್ ಮತ್ತು ಭ್ರಷ್ಟಾಚಾರದ ಗುರುತರ ಆರೋಪ ಹೊಂದಿರುವ ಹಿರಿಯ ವೈದ್ಯಾಧಿಕಾರಿಗಳನ್ನು ಉನ್ನತ ಮಟ್ಟದ (doo, dd) ಸ್ಥಾನಕ್ಕೆ ನೇಮಿಸಲಾಗಿದೆಯೇ ; ಹಾಗಿದ್ದಲ್ಲಿ, ಈಗಾಗಲೇ ಆರೋಪ ಹೊಂದಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿಗಳು ಯಾರು ? (ಮಾಹಿತಿ ನೀಡುವುದು)

## ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ವತಿಯಿಂದ ನೀಡಿರುವ ಎ.ಪಿ.ಎಲ್ ಮತ್ತು ಬಿ.ಪಿ.ಎಲ್. ಕಾರ್ಡ್‌ಗಳ ಕುರಿತು

**ಶ್ರೀ ಹೆಚ್.ಎಸ್.ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೧ (೮೦) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಎ.ಪಿ.ಎಲ್. ಮತ್ತು ಬಿ.ಪಿ.ಎಲ್. ಕಾರ್ಡ್‌ಗಳು ಚಾಲ್ತಿಯಲ್ಲಿವೆ ; (ಬೆಂಗಳೂರು ಜಿಲ್ಲೆಯ ವಿವರ ನೀಡುವುದು)

(ಆ) ರಾಜ್ಯದ ಗ್ರಾಹಕರಿಗೆ ಹೊಸದಾಗಿ ಎಷ್ಟು ; ಎ.ಪಿ.ಎಲ್. ಮತ್ತು ಬಿ.ಪಿ.ಎಲ್. ಕಾರ್ಡ್‌ಗಳನ್ನು ನೀಡುವ ಗುರಿ ಸರ್ಕಾರದ ಮುಂದಿದೆಯೇ ; (ಸಂಪೂರ್ಣ ವಿವರ ನೀಡುವುದು)

(ಇ) ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಹೊರತುಪಡಿಸಿ ಬೇರೆ ಬೇರೆ ಯಾವ ಸಂಸ್ಥೆಗಳಿಗೆ ಆಹಾರ ಸರಬರಾಜು ಮಾಡಲಾಗುತ್ತಿದೆ ; (ಸಂಸ್ಥೆವಾರು ವಿವರ ನೀಡುವುದು)

(ಈ) ಕಳೆದ ೨ ವರ್ಷಗಳಿಂದ ಎ.ಪಿ.ಎಲ್. ಮತ್ತು ಬಿ.ಪಿ.ಎಲ್. ಕಾರ್ಡ್ ವಿತರಣೆಯನ್ನು ನಿಲ್ಲಿಸಲಾಗಿದೆಯೇ ; (ಮಾಹಿತಿ ನೀಡುವುದು)

(ಉ) ಎ.ಪಿ.ಎಲ್. ಮತ್ತು ಬಿ.ಪಿ.ಎಲ್. ಕಾರ್ಡ್‌ಗಳನ್ನು ವಿತರಿಸಬೇಕಾದಲ್ಲಿ ಅನುಸರಿಸಲಾಗುತ್ತಿರುವ ಮಾನದಂಡಗಳು ಯಾವುವು ? (ವಿವರ ನೀಡುವುದು)

## ರಾಷ್ಟ್ರೀಯ ಶಿಕ್ಷಣ ನೀತಿಯನ್ನು ರದ್ದುಪಡಿಸಿ ರಾಜ್ಯ ಶಿಕ್ಷಣ ನೀತಿಯನ್ನು ಜಾರಿಗೆ ತಂದಿರುವ ಕುರಿತು

**ಶ್ರೀ ಹೆಚ್.ಎಸ್.ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೨ (೮೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ರದ್ದುಪಡಿಸಿ ರಾಜ್ಯ ಶಿಕ್ಷಣ ನೀತಿ ಜಾರಿಗೆ ತರಲು ಕಾರಣವೇನು ; ಯಾವ ವರ್ಷಗಳಿಂದ ಜಾರಿಗೆ ತರಲು ಉದ್ದೇಶಿಸಲಾಗಿದೆ ; (ವಿವರ ನೀಡುವುದು)

(ಆ) ರಾಜ್ಯದ ಸರ್ಕಾರಿ ಮತ್ತು ರಾಜ್ಯ ಸರ್ಕಾರದ ಮಂಡಳಿಗಳ ಅಧೀನಕ್ಕೆ ಒಳಪಟ್ಟ ಶಾಲೆಗಳಿಗೆ ಮಾತ್ರವೇ ಶಿಕ್ಷಣ ನೀತಿಯನ್ನು ಜಾರಿಗೊಳಿಸಲು ಯೋಚಿಸಲಾಗಿದೆಯೇ ; ಹಾಗಿದ್ದಲ್ಲಿ, ರಾಜ್ಯದಲ್ಲಿ ಸಿ.ಬಿ.ಎಸ್.ಇ. ಮತ್ತು ಎಸ್.ಇ.ಬಿ. ಪಠ್ಯ ಕ್ರಮ ಅಭ್ಯಾಸ ಮಾಡಿದ ಮಕ್ಕಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ತೊಂದರೆಯಾಗದಿರಲು ಯಾವ ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಇ) ರಾಜ್ಯ ಶಿಕ್ಷಣ ನೀತಿ ಜಾರಿಗೆ ತರಲು ಯಾವ್ಯಾವ ಶಿಕ್ಷಣ ತಜ್ಞರಿಂದ (ರಾಜ್ಯ ಹೊರರಾಜ್ಯ) ಸಲಹೆ ಸೂಚನೆ ಪಡೆಯಲಾಗಿದೆ ಮತ್ತು ಇದುವರೆಗೂ ಎಸ್.ಇ.ಪಿ. ಜಾರಿಗಾಗಿ ಶಿಕ್ಷಣ ತಜ್ಞರು / ಇಲಾಖೆ ನಡೆಸಿರುವ ಸಭಾ ನಡವಳಿಗಳ ಮಾಹಿತಿಯನ್ನು ನೀಡುವುದು ;

(ಈ) ರಾಜ್ಯ ಶಿಕ್ಷಣ ನೀತಿ ಜಾರಿಗೆ ತರಲು ಯಾವ ಯಾವ ಮೂಲಸೌಕರ್ಯಗಳ ಕ್ರೋಢೀಕರಣ ಯಾವ ಹಂತದಲ್ಲಿದೆ ? (ವಿವರ ನೀಡುವುದು)

## KREDL ವತಿಯಿಂದ ಪವನ ಮತ್ತು ಸೋಲಾರ್ ಹಂಚಿಕೆಯ ಕುರಿತು

**ಶ್ರೀ ಹೆಚ್.ಎಸ್.ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೩ (೮೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೆ.ಆರ್.ಇ.ಡಿ.ಎಲ್. ವತಿಯಿಂದ ೨೦೧೩ರಿಂದ ೨೦೧೮ ಮತ್ತು ೨೦೧೯ರಿಂದ ೨೦೨೩ರವರೆಗೆ ಪವನ ಮತ್ತು ಸೋಲಾರ್ ವಿಭಾಗದಲ್ಲಿ ಹಂಚಿಕೆಯಾದ ಮತ್ತು ಅನುಷ್ಠಾನಗೊಳಿಸಿದ ಯೋಜನೆಗಳಾವುವು ; (ಈ ಸಾಲಿನ ವಹಿವಾಟು, ಲಾಭಾಂಶ, ವೆಚ್ಚಗಳ-ಹೂಡಿಗಳ ವಿವರ ನೀಡುವುದು)

(ಆ) ಕೆ.ಆರ್.ಇ.ಡಿ.ಎಲ್. ವತಿಯಿಂದ ಸ್ಥಳೀಯ ಪ್ರದೇಶಾಭಿವೃದ್ಧಿಗೆ ಲಭ್ಯವಿರುವ ಹಣ, ಅರ್ಹತೆ, ಕೈಗೊಂಡ ಕಾಮಗಾರಿಗಳ ವಿವರ ನೀಡುವುದು ;

(ಇ) ರಾಜ್ಯದಲ್ಲಿ ಈವಿ ಚಾರ್ಜಿಂಗ್ ನೀತಿ ಅನುಷ್ಠಾನದಲ್ಲಿದೆಯೇ ? (ವಿವರ ನೀಡುವುದು)

## ಬೆಂಗಳೂರು ನಗರ ಜಿಲ್ಲೆಗೆ ಪ್ರತಿನಿತ್ಯ ಅಗತ್ಯವಿರುವ ವಿದ್ಯುತ್ ಕುರಿತು

**ಶ್ರೀ ಹೆಚ್.ಎಸ್.ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೪ (೧೧೦) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ಜಿಲ್ಲೆಗೆ ಪ್ರತಿನಿತ್ಯ ಅಗತ್ಯವಿರುವ ವಿದ್ಯುತ್ ಪ್ರಮಾಣ ಎಷ್ಟು ; ಹಾಲಿ ವಿವಿಧ ಮೂಲಗಳಿಂದ ದೊರೆಯುತ್ತಿರುವ ಖಾಸಗಿಂಯುವರಿಂದ ಹಾಗೂ ಇತರೆ ಮೂಲಗಳಿಂದ ಖರೀದಿಸುತ್ತಿರುವ ವಿದ್ಯುತ್ ಪ್ರಮಾಣ ಎಷ್ಟು ;

(ಆ) ಖಾಸಗಿಂಯುವರಿಂದ ಹಾಗೂ ಇತರೆ ಮೂಲಗಳಿಂದ ಖರೀದಿಸುತ್ತಿರುವ ವಿದ್ಯುತ್‌ಗೆ ಪ್ರತೀ ಯೂನಿಟ್‌ಗೆ ಪಾವತಿಸುತ್ತಿರುವ ಹಣವೆಷ್ಟು ; ಎಷ್ಟು ವರ್ಷಗಳವರೆಗೆ ವಿದ್ಯುತ್ ಖರೀದಿಸಲು ಒಪ್ಪಂದವಾಗಿದೆ ; ಸರ್ಕಾರ ತನ್ನ ಸ್ವಂತ ಮೂಲದಿಂದ ಉತ್ಪಾದಿಸುತ್ತಿರುವ ವಿದ್ಯುತ್‌ಗೆ ಪ್ರತೀ ಯೂನಿಟ್‌ಗೆ ತಗಲುತ್ತಿರುವ ವೆಚ್ಚವೆಷ್ಟು ; (ಸಂಪೂರ್ಣ ವಿವರ ನೀಡುವುದು)

(ಇ) ಗ್ರಾಹಕರಿಗೆ ಪ್ರತೀ ಯೂನಿಟ್‌ಗೆ ಬೆಸ್ಕಾಂಗಳು ವಿಧಿಸುತ್ತಿರುವ ದರ ಎಷ್ಟು ; ಈ ದರದ ಜೊತೆಗೆ ಸ್ಥಿರ ಠೇವಣಿ ಸೇರಿದಂತೆ ಗ್ರಾಹಕರ ಬಿಲ್‌ನಲ್ಲಿ ಬೇರೆ ಯಾವ ಉದ್ದೇಶಕ್ಕೆ ಎಷ್ಟು ಹಣವನ್ನು ವಿಧಿಸಲಾಗುತ್ತಿದೆ ; (ಬೆಸ್ಕಾಂವಾರು ಸಂಪೂರ್ಣ ವಿವರ ನೀಡುವುದು)

(ಈ) ಇಂಧನ ಹೊಂದಾಣಿಕೆ ವೆಚ್ಚ ಎಂದರೇನು ; ಸರ್ಕಾರದ ಉತ್ಪಾದನೆ ಮಾಡುವ ಮತ್ತು ಖರೀದಿ ಮಾಡುವ ವಿದ್ಯುತ್‌ಗೆ ಪಾವತಿಸುತ್ತಿರುವ ಹಣದ ಜೊತೆಗೆ ಹೆಚ್ಚುವರಿಯಾಗಿ ಹೊಂದಾಣಿಕ ವೆಚ್ಚ ವಸೂಲಿ ಮಾಡಲು ಕಾರಣಗಳೇನು ; ಇಂಧನ ಹೊಂದಾಣಿಕೆ ವೆಚ್ಚ ವಿಧಿಸುವುದರಿಂದ ತಿಂಗಳಿಗೆ ಸಂಗ್ರಹ ಆಗುವ ಹಣ ಎಷ್ಟು ; ಈವರೆಗೆ ಸಂಗ್ರಹಿಸಿರುವ ಹಣ ಎಷ್ಟು ?

## ಅನುದಾನಿತ ಶಿಕ್ಷಣ ಸಂಸ್ಥೆಗಳ ನಿವೃತ್ತಿ ನೌಕರರ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-**

೩೫ (೧೦೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಾದ ನಿವೃತ್ತಿ, ನಿಧನ ಹಾಗೂ ರಾಜೀನಾಮೆಯಿಂದ ತೆರವಾಗಿರುವ ಶಿಕ್ಷಕರ/ ಉಪನ್ಯಾಸಕರ ಹುದ್ದೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಪ್ರಸ್ತುತ ಸರ್ಕಾರವು ನಿವೃತ್ತಿ ಕಾರಣಗಳಿಂದ ತೆರವಾಗಿರುವ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಯಾವ ವರ್ಷದವರೆಗೆ ಅನುಮತಿ ನೀಡಲಾಗಿದೆ ; (ಈ ಕುರಿತು ಸಂಪೂರ್ಣ ಮಾಹಿತಿ ನೀಡುವುದು)

(ಇ) ಸರ್ಕಾರ ನಿವೃತ್ತಿ, ಇತ್ಯಾದಿ ಕಾರಣಗಳಿಂದ ತೆರವಾಗಿರುವ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಈಗಾಗಲೇ ನಿಗದಿಪಡಿಸಿರುವ ಕಾಲಾವಧಿಯನ್ನು ೨೦೨೪ರವರೆಗೆ ವಿಸ್ತರಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ? (ಮಾಹಿತಿ ನೀಡುವುದು)

## ಅತಿಥಿ ಶಿಕ್ಷಕರ ನೇಮಕಾತಿಯಲ್ಲಿ ಸರ್ಕಾರದ ನಿಯಮಗಳನ್ನು ಪಾಲಿಸದೇ ಇರುವ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-**

೩೬ (೧೦೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಅತಿಥಿ ಶಿಕ್ಷಕರನ್ನು ನೇಮಕ ಮಾಡಲು ಇರುವ ನಿಯಮ ಹಾಗೂ ಮಾನದಂಡಗಳೇನು ; ಈ ಕುರಿತು ಸರ್ಕಾರವು ನೂತನ ನಿಯಮಾವಳಿಗಳನ್ನು ರಚಿಸಿದೆಯೇ ; ರಚಿಸಿದ್ದಲ್ಲಿ ಯಾವ ಯಾವ ನಿಯಮಗಳನ್ನು ಸೇರಿಸಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಬೆಳಗಾವಿ, ಚಿಕ್ಕೋಡಿ, ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ಎಷ್ಟು ಅತಿಥಿ ಶಿಕ್ಷಕರನ್ನು ನೇಮಕ ಮಾಡಲಾಗಿದೆ ; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಅತಿಥಿ ಶಿಕ್ಷಕರ ನೇಮಕದಲ್ಲಿ ಸರ್ಕಾರ ನಿಯಮಗಳನ್ನು ಪಾಲಿಸದೇ ಶಿಕ್ಷಕರ ನೇಮಕಾತಿ ಮಾಡಿಕೊಂಡಿರುವ ಆರೋಪಗಳು ಸರ್ಕಾರಕ್ಕೆ ಸಲ್ಲಿಕೆಯಾಗಿವೆಯೇ ; ಹಾಗಿದ್ದಲ್ಲಿ ಈ ಕುರಿತು ಸರ್ಕಾರದ ಕ್ರಮವೇನು ; (ವಿವರ ನೀಡುವುದು)

(ಈ) ಬಾಗಲಕೋಟೆ ಜಿಲ್ಲೆಯಲ್ಲಿ ಸರ್ಕಾರ ನಿಯಮಗಳನ್ನು ಪಾಲಿಸದೇ ಅತಿಥಿ ಶಿಕ್ಷಕರ ನೇಮಕಾತಿಯನ್ನು ಮಾಡಿಕೊಂಡಿರುವುದಾಗಿ ಸಾಕಷ್ಟು ಆರೋಪಗಳು ಸಾರ್ವಜನಿಕರಿಂದ ಕೇಳಿ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿರುವುದು ನಿಜವೇ ; ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮವೇನು ;

(ಉ) ಬಾಗಲಕೋಟೆ ಜಿಲ್ಲೆಯಲ್ಲಿ ಸರ್ಕಾರ ನಿಯಮಗಳನ್ನು ಪಾಲಿಸದೇ ಅತಿಥಿ ಶಿಕ್ಷಕರ ನೇಮಕಾತಿಯನ್ನು ಮಾಡಿಕೊಂಡಿರುವ ಕುರಿತು ಸರ್ಕಾರವು ಮತ್ತೊಮ್ಮೆ ಪರಿಶೀಲಿಸಲು ಆದೇಶಿಸುವುದೇ ; ಇದ್ದಲ್ಲಿ, ಯಾವ ಕಾಲಮಿತಿಯೊಳಗೆ ಪರಿಶೀಲಿಸಲಾಗುವುದು ?

## ಪಡಿತರ ಚೀಟಿಯ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-**

೩೭ (೧೦೭) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಒಂದು ಕುಟುಂಬದಲ್ಲಿ ಒಬ್ಬ ಸದಸ್ಯ ಮಾತ್ರ ವಾಸಿಸುತ್ತಿದ್ದರೆ, ಅವರಿಗೆ ಪಡಿತರ ಚೀಟಿಯನ್ನು ನೀಡದಿರಲು ಕಾರಣವೇನು ; ಇದರಿಂದ ಆ ವ್ಯಕ್ತಿ ಪಡಿತರ ಸೇವೆಯಿಂದ ವಂಚಿತರಾಗುವುದಿಲ್ಲವೇ ;

(ಆ) ಇತ್ತೀಚೆಗೆ ಪಡಿತರ ಚೀಟಿ ತಿದ್ದುಪಡಿಗೆ ಕೇವಲ ಏಳು ದಿನಗಳ ಕಾಲಾವಕಾಶ ನೀಡಿರುವುದು ನಿಜವೇ ; ನಿಜವಿದ್ದಲ್ಲಿ, ಕೇವಲ ಏಳು ದಿನಗಳಲ್ಲಿ ರಾಜ್ಯಾದ್ಯಂತ ಅರ್ಜಿ ಸಲ್ಲಿಸುವಾಗ ಸರ್ವರ್ ಸಮಸ್ಯೆ ಎದಿರಿಸುತ್ತಿರುವುದರಿಂದ ಸಮಸ್ಯೆ ಬಗ್ಗೆ ಹರಿಸುವಂತೆ ಸಾರ್ವಜನಿಕರು ಸಹಾಯವಾಣಿ ಹಾಗೂ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಿಗೆ ಕರೆ ಮಾಡಿದರೂ ಸಹ ಸೂಕ್ತ ರೀತಿಯಲ್ಲಿ ಸಾರ್ವಜನಿಕರಿಗೆ ಸ್ಪಂದಿಸುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಕೈಗೊಂಡ ಕ್ರಮ ಮತ್ತು ಸರ್ವರ್ ಸಮಸ್ಯೆಯನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮವೇನು ;

(ಇ) ಪಡಿತರ ತಿದ್ದುಪಡಿಯ ಪೋರ್ಟಲ್‌ನ್ನು ಯಾವ ಕಂಪನಿಯು ನಿರ್ವಹಿಸುತ್ತಿದೆ ; ಪ್ರತಿ ಬಾರಿಯು ಇಲಾಖೆಯು ಸರ್ವರ್ ಸಮಸ್ಯೆಯನ್ನು ಎದಿರಿಸುತ್ತಿರುವುದರಿಂದ ಸದರಿ ಕಂಪನಿಯನ್ನು

ಬದಲಾಯಿಸಬಹುದಲ್ಲವೇ ; ತಿದ್ದುಪಡಿ ಪೋರ್ಟಲ್‌ನ್ನು ನಿರ್ವಹಿಸಲು ಈ ಕಂಪನಿಗೆ ನಿಗದಿಪಡಿಸಿರುವ ಮೊತ್ತವೆಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಸರ್ವರ್ ಸಮಸ್ಯೆ ಹೆಚ್ಚಾಗಿರುವುದರಿಂದ ತಿದ್ದುಪಡಿಯ ಸಮಯವನ್ನು ೧೫-೨೦ ದಿನಗಳ ಕಾಲ ವಿಸ್ತರಿಸಲಾಗುವುದೇ ?

## ೧ ರಿಂದ ೫ನೇ ತರಗತಿಗೆ ಡಿ.ಎಡ್. ಕಲಿತ ಟಿಇಟಿ ಪಾಸಾದ ಅಭ್ಯರ್ಥಿಗಳ ನೇಮಕಾತಿ ಮಾಡುವ ಬಗ್ಗೆ

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-**

೩೮ (೧೦೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ೧ ರಿಂದ ೫ನೇ ತರಗತಿಗೆ ಡಿ.ಎಡ್ ಕಲಿತ ಟಿಇಟಿ ಪಾಸಾದ ಅಭ್ಯರ್ಥಿಗಳ ನೇಮಕಾತಿಯನ್ನು ಕಳೆದ ೧೦ ವರ್ಷಗಳಿಂದ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಕುರಿತು ಸರ್ಕಾರದ ನಿಲುವೇನು ; (ಮಾಹಿತಿ ನೀಡುವುದು)

(ಆ) ಮುಂಬರುವ ದಿನಗಳಲ್ಲಿ ಅಂತಹ ಅಭ್ಯರ್ಥಿಗಳಿಗೆ ವಯೋಮಿತಿ ಸಡಿಲಿಕೆ ಮಾಡಿ ಅವಕಾಶ ನೀಡಲಾಗುವುದೇ ; (ಈ ಕುರಿತು ಸಂಪೂರ್ಣ ಮಾಹಿತಿ ನೀಡುವುದು)

(ಇ) ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಒಟ್ಟು ಎಷ್ಟು ಶಿಕ್ಷಕರ ಹುದ್ದೆ ಖಾಲಿ ಇವೆ ; (೧ ರಿಂದ ೫ನೇ ತರಗತಿ) ಖಾಲಿ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು ; (ಮಾಹಿತಿ ನೀಡುವುದು)

(ಈ) ಸದರಿ ಶಿಕ್ಷಕರ ಹುದ್ದೆಗಳ ಭರ್ತಿಗಾಗಿ ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಯುವ ನಿಧಿ ಯೋಜನೆಯ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-**

೩೯ (೧೦೯) ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಜಾರಿಯಾಗಿರುವ "ಯುವನಿಧಿ" ಯೋಜನೆಗೆ ಇದುವರೆಗೂ ಎಷ್ಟು ನಿರುದ್ಯೋಗಿಗಳು ತಮ್ಮ ಹೆಸರನ್ನು ನೋಂದಾಯಿಸಿಕೊಂಡಿದ್ದಾರೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಒಟ್ಟು ನೋಂದಾಯಿಸಿಕೊಂಡಿರುವ ಸಂಖ್ಯೆ ಮತ್ತು ತಿರಸ್ಕೃತವಾಗಿರುವ ಸಂಖ್ಯೆ ಎಷ್ಟು ; ಯಾವ ಕಾರಣಕ್ಕಾಗಿ ತಿರಸ್ಕೃತವಾಗಿವೆ ; (ಸಂಪೂರ್ಣ ಮಾಹಿತಿ ನೀಡವುದು)

(ಇ) ರಾಜ್ಯದಲ್ಲಿನ ನೋಂದಾಯಿತ ಎಷ್ಟು ನಿರುದ್ಯೋಗಿಗಳಿಗೆ ನಿರುದ್ಯೋಗ ಭತ್ಯೆ ನೀಡಲಾಗುತ್ತಿದೆ ; ಬಾಕಿ ಇರುವ ನಿರುದ್ಯೋಗಗಳ ಸಂಖ್ಯೆ ಎಷ್ಟು ; ಯಾವಾಗ ನಿರುದ್ಯೋಗ ಭತ್ಯೆ ನೀಡಲು ಪ್ರಾರಂಭಿಸಲಾಗಿದೆ ಮತ್ತು ಪ್ರತಿ ತಿಂಗಳು ಯಾವ ದಿನಾಂಕದಿಂದ ಪಾವತಿ ಮಾಡಲಾಗುತ್ತಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಈ ಯೋಜನೆಗೆ ಸರ್ಕಾರವು ಮೀಸಲಿಟ್ಟ ಒಟ್ಟು ಅನುದಾನ ಎಷ್ಟು ಹಾಗೂ ಇಲ್ಲಿಯವರೆಗೆ ಖರ್ಚಾದ ಮೊತ್ತ ಎಷ್ಟು ?

## ಕೊಪ್ಪಳ ಜಿಲ್ಲೆಯಲ್ಲಿರುವ ಪಿಯುಸಿ ಕಾಲೇಜುಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು):-**

೪೦ (೧೨೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೊಪ್ಪಳ ಜಿಲ್ಲೆಯಲ್ಲಿರುವ ಪಿಯುಸಿ ಕಾಲೇಜುಗಳ ಕಟ್ಟಡ ಉದ್ಘಾಟನೆಗೆ ಸಿದ್ಧವಾಗಿರುವ ಕಾಲೇಜುಗಳು ಯಾವುವು ; ಹಾಗಿದ್ದಲ್ಲಿ, ಕಟ್ಟಡ ಉದ್ಘಾಟನೆ ಮಾಡದೆ ಇರುವುದಕ್ಕೆ ಕಾರಣವೇನು ;

(ಆ) ಕೊಪ್ಪಳ ಜಿಲ್ಲೆಯಾದ್ಯಂತ ಇರುವ ಕಾಲೇಜುಗಳ ಕಟ್ಟಡಗಳು ಶಿಥಿಲಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಯಾವ ಕಾಲೇಜುಗಳಲ್ಲಿ ದುರಸ್ಥಿ ಕಾರ್ಯಗಳನ್ನು ಕೈಗೊಳ್ಳಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಪಿಯುಸಿ ಕಾಲೇಜುಗಳಲ್ಲಿ ಉಪನ್ಯಾಸಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಈ) ಶಕ್ತಿಯೋಜನೆ ಬಂದಾಗಿನಿಂದ ಬಸ್ ನಿಲ್ದಾಣದ ಬಳಿ ಬಸ್‌ಗಳು ನಿಲ್ಲದೆ ಹೋಗುವುದರಿಂದ ವಿದ್ಯಾರ್ಥಿಗಳಿಗೆ ಕಾಲೇಜುಗಳಿಗೆ ತೆರಳಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು ; (ವಿವರ ನೀಡುವುದು)

(ಉ) ಸರ್ಕಾರಿ ಪ್ರೌಢಶಾಲೆಗಳಲ್ಲಿಯೇ ಪ್ರಾರಂಭವಾದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಬಗ್ಗೆ ಸರ್ಕಾರಕ್ಕೆ ಮಾಹಿತಿ ಇದೆಯೇ ; ಇದ್ದಲ್ಲಿ, ಈ ಬಗ್ಗೆ ಸರ್ಕಾರ ಯಾವ ನಿರ್ಧಾರ ಕೈಗೆತ್ತಿಕೊಂಡಿದೆ ? (ವಿವರ ನೀಡುವುದು)

## ಕೊಪ್ಪಳ ಜಿಲ್ಲೆ ಕನಕಗಿರಿ ತಾಲ್ಲೂಕಿನ ಹಳ್ಳಿಗಳಲ್ಲಿ ಕರಡಿ ಮತ್ತು ಚಿರತೆಯಿಂದ ಪ್ರಾಣಹಾನಿ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೧ (೧೨೨) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಪ್ಪಳ ಜಿಲ್ಲೆಯ ಕನಕಗಿರಿ ತಾಲ್ಲೂಕಿನ ಸುತ್ತಮುತ್ತ ಹಳ್ಳಿಗಳಲ್ಲಿ ಕರಡಿ ಮತ್ತು ಚಿರತೆಗಳು ಜನರಿಗೆ ಪ್ರಾಣ ಹಾನಿ ಉಂಟು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಜನರ ರಕ್ಷಣೆ ಹಾಗೂ ಪರಿಹಾರಕ್ಕೆ ಸರ್ಕಾರ ತೆಗೆದುಕೊಂಡ ಕ್ರಮವೇನು ; (ವಿವರ ನೀಡುವುದು)

(ಆ) ರೈತರು ಬೆಳೆದ ಬೆಳೆಗಳನ್ನು ಕರಡಿಗಳು ನಾಶ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ರೈತರಿಗೆ ಬೆಳೆ ನಷ್ಟ ತುಂಬಲು ಕೈಗೊಂಡ ಕ್ರಮವೇನು ;

(ಇ) ಕನಕಗಿರಿ ತಾಲ್ಲೂಕಿನ ಗ್ರಾಮಗಳ ಸುತ್ತ ಮುತ್ತ ರೈತರು ಹೊಲಗಳಲ್ಲಿ ಜೀವನೋಪಾಯಕ್ಕಾಗಿ ವಾಸ್ತವ್ಯವಿದ್ದು, ಕಾಡು ಪ್ರಾಣಿಗಳಿಗೆ ಬಲಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ರೈತರ ರಕ್ಷಣೆಗೆ ಸರ್ಕಾರ ಕೈಗೊಂಡ ಕ್ರಮವೇನು ;

(ಈ) ಕನಕಗಿರಿ ತಾಲ್ಲೂಕಿನ ಸುತ್ತಲೂ ಗುಡ್ಡಗಾಡುಗಳಲ್ಲಿ ಕರಡಿ ಸಂಖ್ಯೆ ಹೆಚ್ಚಾಗಿದ್ದು ಕರಡಿ ಧಾಮ ಮಾಡುವ ಚಿಂತನೆ ಇದೆಯೇ ; ಇದ್ದಲ್ಲಿ, ಯಾವ ವರ್ಷದಿಂದ ಚಾಲನೆ ಮಾಡಲಾಗುವುದು ? (ವಿವರ ನೀಡುವುದು)

## ಹೊಸ ಬಿಪಿಎಲ್ ಕಾರ್ಡ್‌ಗಳಿಗೆ ಬಂದಿರುವ ಅರ್ಜಿಯ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೨ (೫೫) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಹೊಸ ಬಿಪಿಎಲ್ ಕಾರ್ಡ್‌ಗಾಗಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಹೊಸ ಬಿಪಿಎಲ್ ಕಾರ್ಡ್‌ದಾರರಿಗೆ ಕಾರ್ಡ್‌ಗಳನ್ನು ನೀಡುವ ಪ್ರಕ್ರಿಯೆ ಪ್ರಾರಂಭಿಸಲಾಗಿದೆಯೇ ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಅನರ್ಹ ಕಾರ್ಡ್‌ಗಳನ್ನು ಗುರುತಿಸಲಾಗಿದೆಯೇ ; ಗುರುತಿಸಿದ್ದಲ್ಲಿ ಅವುಗಳನ್ನು ರದ್ದುಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು : (ವಿವರ ನೀಡುವುದು)

(ಈ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಬಿಪಿಎಲ್ ಕಾರ್ಡ್‌ಗಾಗಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು ; ಈ ಅರ್ಜಿಗಳ ವಿಲೇವಾರಿ ಮಾಡಲು ಇಲಾಖೆ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಉ) ಅನಾರೋಗ್ಯ ಪೀಡಿತರಿಗೆ ಬಿಪಿಎಲ್ ಕಾರ್ಡ್ ನೀಡದೇ ಚಿಕಿತ್ಸೆ ಪಡೆಯಲು ಉಂಟಾಗಿರುವ ತೊಂದರೆಗಳ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು ?

## ಗೃಹ ಜ್ಯೋತಿ ಗ್ಯಾರಂಟಿಯ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೩ (೫೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಗೃಹ ಬಳಕೆ ಮಾಡುವ ಗ್ರಾಹಕರ ಸಂಖ್ಯೆ ಎಷ್ಟು; (ಜಿಲ್ಲಾವಾರು ಗೃಹ ಜ್ಯೋತಿ ಬಳಕೆದಾರರ ವಿವರ ನೀಡುವುದು)

(ಆ) ಗೃಹ ಜ್ಯೋತಿ ಗ್ಯಾರಂಟಿ ಯೋಜನೆಯಡಿ ಎಷ್ಟು ಮಂದಿ ಫಲಾನುಭವಿಗಳಿದ್ದಾರೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಈ ಯೋಜನೆಗೆ ಪ್ರತಿ ತಿಂಗಳು ಸರ್ಕಾರದಿಂದ ಎಷ್ಟು ಅನುದಾನ ನೀಡಲಾಗುತ್ತಿದೆ ; (ವಿವರ ನೀಡುವುದು)

(ಈ) ಗೃಹ ಬಳಕೆ ಗೃಹ ಜ್ಯೋತಿ ಗ್ಯಾರಂಟಿಗೆ ಒಳಪಡದೆ ಇರುವ ಫಲಾನುಭವಿಗಳ ಸಮೀಕ್ಷೆ ನಡೆಸಲಾಗಿದೆಯೇ ; (ವಿವರ ನೀಡುವುದು)

(ಉ) ಗೃಹ ಜ್ಯೋತಿ ಯೋಜನೆಯಡಿಯಲ್ಲಿ ೨೦೦ ಯುನಿಟ್ ಗಿಂತ ಕಡಿಮೆ ಬಳಕೆ ಮಾಡುವ ಗ್ರಾಹಕರಿಗೆ ಹೊಸದಾಗಿ ಯಾವುದಾದರೂ ಯೋಜನೆಯನ್ನು ಸರ್ಕಾರದಿಂದ ಹಮ್ಮಿಕೊಳ್ಳಲಾಗುವುದೇ ?

## ಕೋವಿಡ್ ಸಂದರ್ಭದಲ್ಲಿ ಉಂಟಾದ ಭ್ರಷ್ಟಾಚಾರದ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

ಳಳ (೫೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೋವಿಡ್ ಸಂದರ್ಭದಲ್ಲಿ ೨೦೧೯ರಿಂದ ೨೦೨೧ನೇ ಸಾಲಿನಲ್ಲಿ ಖರೀದಿಸಿದ ಸಾಮಗ್ರಿಗಳಲ್ಲಿ ಉಂಟಾದ ಭ್ರಷ್ಟಾಚಾರದ ಬಗ್ಗೆ ತನಿಖೆಗೆ ಆದೇಶಿಸಿದ್ದು, ತನಿಖೆಯು ಯಾವ ಹಂತದಲ್ಲಿವೇ ;

(ಆ) ಈ ತನಿಖೆಯ ಮಧ್ಯಂತರ ವರದಿ ನೀಡಲಾಗಿದೆಯೇ ; ಈ ತನಿಖೆಯನ್ನು ಯಾವಾಗ ಕೊನೆಗೊಳ್ಳಲಾಗುವುದು ; (ವಿವರ ನೀಡುವುದು)

(ಇ) ಕೋವಿಡ್ ಸಾಂಕ್ರಮಿಕ ಸಂದರ್ಭದಲ್ಲಿ ಚಾಮರಾಜನಗರ ಜಿಲ್ಲೆಯಲ್ಲಿ ಗ್ಯಾಸ್ ಅಭಾವ ಹಗರಣದಲ್ಲಿ ಆಸ್ಪತ್ರೆಯಲ್ಲಿ ಮೃತಪಟ್ಟ ಬಗ್ಗೆ ವಿಚಾರಣೆಯ ವರದಿ ಸರ್ಕಾರಕ್ಕೆ ಬಂದಿದೆಯೇ ; ಈ ಬಗ್ಗೆ ಕೈಗೊಂಡ ಕ್ರಮಗಳೇನು ;

(ಈ) ಕೋವಿಡ್ ಸಂದರ್ಭದಲ್ಲಿ ಉಂಟಾದ ಭ್ರಷ್ಟಾಚಾರವನ್ನು ಉದ್ದೇಶ ಪೂರ್ವಕವಾಗಿ ಮುಚ್ಚಿಡಲಾಗುತ್ತಿದೆ ಎಂದು ಆರೋಪಗಳಿದ್ದು, ಈ ಬಗ್ಗೆ ಸರ್ಕಾರದ ನಿಲುವೇನು ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಮಂಗಳೂರು ವಿಶ್ವವಿದ್ಯಾನಿಲಯ ಅಧೀನಕ್ಕೆ ಒಳಪಡುವ ಕಾಲೇಜುಗಳ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೫ (೫೮) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಗಳೂರು ವಿಶ್ವವಿದ್ಯಾನಿಲಯದ ಅಧೀನಕ್ಕೆ ಒಳಪಡುವ ಕಾಲೇಜುಗಳನ್ನು ಆರ್ಥಿಕ ಅಡಚಣೆಯಿಂದ ಮುಚ್ಚಲು ತೀರ್ಮಾನಿಸಲಾಗಿದೆ ಎಂಬ ವರದಿ ನಿಜವೇ ; ಆರ್ಥಿಕ ಅಡಚಣೆಗೆ ಕಾರಣಗಳೇನು ;

(ಆ) ಮಂಗಳೂರು ವಿಶ್ವವಿದ್ಯಾನಿಲಯದ ಅಧೀನದಲ್ಲಿ ಎಷ್ಟು ಕಾಲೇಜುಗಳಿವೆ ; ಅದರಲ್ಲಿ ಓದುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಮಂಗಳೂರು ವಿಶ್ವವಿದ್ಯಾನಿಲಯದ ನಿವೃತ್ತ ಪ್ರಾಧ್ಯಾಪಕರುಗಳಿಗೆ ನಿವೃತ್ತ ಸೌಲಭ್ಯಗಳನ್ನು ನೀಡದೇ ಬಾಕಿ ಇರುವುದು ನಿಜವೇ ; ಈ ಬಗ್ಗೆ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಈ) ಮಂಗಳೂರು ವಿಶ್ವವಿದ್ಯಾನಿಲಯಕ್ಕೆ ಸರ್ಕಾರದಿಂದ ೨೦೨೧ ರಿಂದ ೨೦೨೪ರ ಸಾಲಿನಲ್ಲಿ ಬಿಡುಗಡೆ ಮಾಡಿದ ಅನುದಾನ ಎಷ್ಟು ; ಕೇಂದ್ರದಿಂದ ಪಡೆದ ಅನುದಾನ ಎಷ್ಟು ? (ವಿವರ ನೀಡುವುದು)

## ಬಿಪಿಎಲ್, ಎಪಿಎಲ್, ಅಂತ್ಯೋದಯ ಕಾರ್ಡ್‌ಗಳ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೬ (೧೨೪) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಳೆದ ಒಂದು ವರ್ಷದಲ್ಲಿ ಹೊಸದಾಗಿ ವಿತರಿಸಿದ ಬಿಪಿಎಲ್, ಎಪಿಎಲ್ ಮತ್ತು ಅಂತ್ಯೋದಯ ಕಾರ್ಡ್‌ಗಳ ಸಂಖ್ಯೆ ಎಷ್ಟು ; ಇರುವ ಮಾನದಂಡಗಳೇನು ; ಇನ್ನೂ ಎಷ್ಟು ಕುಟುಂಬಗಳಿಗೆ ವಿತರಣೆ ಬಾಕಿ ಇದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಅನ್ನಭಾಗ್ಯ ಯೋಜನೆಯಲ್ಲಿ ಕಳೆದ ೬ ತಿಂಗಳಿನಲ್ಲಿ ಬಿಪಿಎಲ್, ಎಪಿಎಲ್ ಮತ್ತು ಅಂತ್ಯೋದಯ ಕಾರ್ಡುದಾರರಿಗೆ ವಿತರಿಸಿದ ಅಕ್ಕಿಯ ಪ್ರಮಾಣ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಎಪಿಎಲ್, ಬಿಪಿಎಲ್ ಮತ್ತು ಅಂತ್ಯೋದಯ ಕಾರ್ಡ್ ಹೊಂದಿದವರಿಗೆ ವಿತರಿಸಲಾಗುವ ತಲಾ ಅಕ್ಕಿಯ ಪ್ರಮಾಣವೆಷ್ಟು; ರಾಜ್ಯದಲ್ಲಿರುವ ಒಟ್ಟು ಕುಟುಂಬಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಪ್ರತಿ ತಿಂಗಳು ವಿತರಿಸದಿರುವ ಅಕ್ಕಿಯನ್ನು ಯಾವ ರೀತಿಯಾಗಿ ಬಳಸಿಕೊಳ್ಳಲಾಗುತ್ತದೆ ; ಬಡವರಿಗೆ ಸರ್ಕಾರವು ನೀಡುವ ಅಕ್ಕಿಯನ್ನು ನ್ಯಾಯಬೆಲೆ ಅಂಗಡಿಯ ಮಾಲೀಕರು ವಿತರಿಸದೆ ಸರ್ಕಾರಕ್ಕೆ ತಪ್ಪು ಲೆಕ್ಕ ತೋರಿಸುವ ಮೂಲಕ ವಂಚಿಸುತ್ತಿರುವುದು ಸರ್ಕಾರದ

ಗಮನಕ್ಕೆ ಬಂದಿದೆಯೇ ; ಈ ರೀತಿಯಾಗಿ ವಂಚಿಸುತ್ತಿರುವ ನ್ಯಾಯಬೆಲೆ ಅಂಗಡಿಯ ಮಾಲೀಕರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ; ಕಳೆದ ೬ ತಿಂಗಳಿನಲ್ಲಿ ಇಂತಹ ಎಷ್ಟು ಪ್ರಕರಣಗಳು ದಾಖಲಾಗಿವೆ ;

(ಉ) ಬಡವರಿಗೆ ಕಡಿಮೆ ದರದಲ್ಲಿ ಅಥವಾ ಉಚಿತವಾಗಿ ಅಕ್ಕಿಯನ್ನು ವಿತರಿಸಲು ಸರ್ಕಾರವು ಕಳೆದ ೬ ತಿಂಗಳಿನಲ್ಲಿ ಎಷ್ಟು ವೆಚ್ಚ ಮಾಡಿದೆ ? (ತಿಂಗಳವಾರು ವಿವರ ನೀಡುವುದು)

## ಹೊಸದಾಗಿ ಪ್ರಾರಂಭಿಸಲಾದ ಸರ್ಕಾರಿ ಪ್ರಾಥಮಿಕ, ಪ್ರೌಢ ಮತ್ತು ಪದವಿ ಪೂರ್ವ ಕಾಲೇಜುಗಳ ಬಗ್ಗೆ

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೭ (೧೨೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಎರಡು ವರ್ಷಗಳಲ್ಲಿ ಹೊಸದಾಗಿ ಎಷ್ಟು ಪ್ರಾಥಮಿಕ, ಪ್ರೌಢ ಮತ್ತು ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲಾಗಿದೆ ; ಇದರಲ್ಲಿ ಕನ್ನಡ ಮಾಧ್ಯಮ ಮತ್ತು ಆಂಗ್ಲ ಮಾಧ್ಯಮ ಶಿಕ್ಷಣ ಸಂಸ್ಥೆಗಳ ಸಂಖ್ಯೆ ಎಷ್ಟು ; ಸರ್ಕಾರಿ ಮತ್ತು ಖಾಸಗಿ ಶಿಕ್ಷಣ ಸಂಸ್ಥೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಹೊಸದಾಗಿ ಪ್ರಾರಂಭಿಸಲಾದ ಸರ್ಕಾರಿ ಪ್ರಾಥಮಿಕ ಪ್ರೌಢ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಇರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ದಾಖಲಾದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಕಳೆದ ಎರಡು ವರ್ಷಗಳಲ್ಲಿ ವಿದ್ಯಾರ್ಥಿಗಳ ಕೊರತೆಯ ಕಾರಣ ನೀಡಿ ಮುಚ್ಚಲಾದ ಪ್ರಾಥಮಿಕ, ಪ್ರೌಢ ಮತ್ತು ಪದವಿ ಪೂರ್ವ

ಕಾಲೇಜುಗಳ ಸಂಖ್ಯೆ ಎಷ್ಟು ; ಇದರಲ್ಲಿ ಸರ್ಕಾರಿ ಸಂಸ್ಥೆಗಳ ಸಂಖ್ಯೆ, ಖಾಸಗಿ ಸಂಸ್ಥೆಗಳ ಸಂಖ್ಯೆ ಮತ್ತು ಆಂಗ್ಲ ಮಾಧ್ಯಮ ಶಿಕ್ಷಣ ಸಂಸ್ಥೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಕಳೆದ ಎರಡು ವರ್ಷಗಳಲ್ಲಿ ವಿದ್ಯಾರ್ಥಿಗಳ ಕೊರತೆಯ ಕಾರಣ ನೀಡಿ ಮುಚ್ಚಲಾದ ಪ್ರಾಥಮಿಕ, ಪ್ರೌಢ ಮತ್ತು ಪದವಿ ಪೂರ್ವ ಕಾಲೇಜುಗಳ ಐದು ಕಿ.ಮೀ ವ್ಯಾಪ್ತಿಯಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಗಳ ವತಿಯಿಂದ ಎಷ್ಟು ಹೊಸ ಪ್ರಾಥಮಿಕ ಪ್ರೌಢ ಮತ್ತು ಪದವಿ ಪೂರ್ವ ಕಾಲೇಜುಗಳನ್ನು ತೆರೆಯಲಾಗಿದೆ ? (ವಿವರ ನೀಡುವುದು)

## ರಾಜ್ಯದ ಪದವಿ ಪೂರ್ವ ಕಾಲೇಜುಗಳ ಅವ್ಯವಸ್ಥೆ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೮ (೧೨೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಪದವಿ ಪೂರ್ವ ಕಾಲೇಜುಗಳಲ್ಲಿ ಉಪನ್ಯಾಸಕರು ಹಾಗೂ ಮೂಲಭೂತ ಸೌಕರ್ಯಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದಲ್ಲಿ ಉಪನ್ಯಾಸಕರ ಕೊರತೆ ಇರುವ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು ; (ಕಾಲೇಜುವಾರು ವಿವರ ಒದಗಿಸುವುದು)

(ಇ) ಪದವಿ ಪೂರ್ವ ಕಾಲೇಜುಗಳಲ್ಲಿ ಕೊರತೆಯಿರುವ ಉಪನ್ಯಾಸಕರ ಸಂಖ್ಯೆ ಎಷ್ಟು ; ಕೊರತೆಯಿರುವ ಉಪನ್ಯಾಸಕರನ್ನು ನೇಮಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; (ವಿಷಯವಾರು ವಿವರ ಒದಗಿಸುವುದು)

(ಈ) ಪೂರ್ಣ ಪ್ರಮಾಣದಲ್ಲಿ ಉಪನ್ಯಾಸಕರು ಹಾಗೂ ಮೂಲಭೂತ ಸೌಕರ್ಯ ಇರುವ ಕಾಲೇಜುಗಳ ಸಂಖ್ಯೆ ಎಷ್ಟು ; ಕಳೆದ ಒಂದು ವರ್ಷದಲ್ಲಿ ಮೂಲಭೂತ ಸೌಕರ್ಯ ಒದಗಿಸಿರುವ ಕಾಲೇಜುಗಳ ಸಂಖ್ಯೆ ಎಷ್ಟು ? (ಕಾಲೇಜುವಾರು ಸಂಪೂರ್ಣ ವಿವರ ನೀಡುವುದು)

## ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವ ವಿದ್ಯಾಲಯದ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್(ವಿಧಾನಸಭೆಯಿಂದ ಚುನಾಯಿತರಾದವರು) :-**

೪೯ (೧೨೭) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದೊಂದಿಗೆ ಸಂಯೋಜನೆ ಹೊಂದಿರುವ ಕಾಲೇಜುಗಳ ಸಂಖ್ಯೆ ಎಷ್ಟು ; ಈ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

(ಆ) ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯವು ಅಂಕ ಪಟ್ಟಿಯನ್ನು ವಿದ್ಯಾರ್ಥಿಗಳಿಗೆ ಸಮರ್ಪಕವಾಗಿ ಕಾಲಮಿತಿಯಲ್ಲಿ ವಿತರಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಅಂಕಪಟ್ಟಿಯನ್ನು ವಿದ್ಯಾರ್ಥಿಗಳಿಗೆ ಸಮರ್ಪಕವಾಗಿ ವಿತರಿಸದಿರುವುದರಿಂದ ವಿದ್ಯಾರ್ಥಿಗಳು ಉನ್ನತ ಶಿಕ್ಷಣ ಮತ್ತು ಉದ್ಯೋಗದಿಂದ ವಂಚಿತರಾಗುತ್ತಿದ್ದು, ಈ ವಿಳಂಬಕ್ಕೆ ಹೊಣೆಗಾರರಾದ ವಿಶ್ವವಿದ್ಯಾಲಯದ ಅಧಿಕಾರಿಗಳ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯವು ತಾಂತ್ರಿಕ ಶಿಕ್ಷಣ ಪೂರೈಸಿದ ಯಾವ ಶೈಕ್ಷಣಿಕ ವರ್ಷದ ವಿದ್ಯಾರ್ಥಿಗಳಿಗೆ ಅಂಕ ಪಟ್ಟಿಯನ್ನು ವಿತರಿಸಲಾಗಿದೆ, ವಿಳಂಬಕ್ಕೆ ಕಾರಣಗಳೇನು ?

## ರಾಜ್ಯದಲ್ಲಿ ಆನೆಗಳ ಸಾವಿನ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್(ವಿಧಾನಸಭೆಯಿಂದ ಚುನಾಯಿತರಾದವರು) :-**

೫೦ (೧೨೮) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಇತ್ತೀಚೆಗೆ ಆನೆಗಳ ಸಾವಿನ ಪ್ರಕರಣಗಳು ಹೆಚ್ಚಾಗುತ್ತಿದ್ದು, ಅದನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಇತ್ತೀಚೆಗೆ ಸಾವಿಗೀಡಾದ ಅಂಬಾರಿ ಆನೆಗಳಾದ ಅರ್ಜುನ, ಅಶ್ವತ್ಥಾಮ ಹಾಗೂ ಇತರೆ ಕಾಡಾನೆಗಳ ತನಿಖೆ ಯಾವ ಹಂತದಲ್ಲಿ ಇದೆ ; (ಪ್ರಕರಣವಾರು ವಿವರ ನೀಡುವುದು) ;

(ಇ) ಇತ್ತೀಚೆಗೆ ಸಾವಿಗೀಡಾದ ಆನೆಗಳ ಸಾವಿನ ಪ್ರಕರಣಗಳೆಷ್ಟು ; (ಸಹಜ ಹಾಗೂ ಅಸಹಜ ಸಾವಿನ ಪ್ರಕರಣವಾರು ವಿವರ ನೀಡುವುದು) ;

(ಈ) ಕಾಡು ಪ್ರಾಣಿಗಳು ಹಾಗೂ ಜನರ ಸಹ ಬಾಳ್ವೆಗೆ ಸರ್ಕಾರ ರೂಪಿಸಿರುವ ಕಾರ್ಯಕ್ರಮಗಳೇನು ; ಕಾಡು ಪ್ರಾಣಿಗಳು ಹಾಗೂ ಜನರ ನಡುವಿನ ಸಂಘರ್ಷಣೆ ತಪ್ಪಿಸಲು ಸರ್ಕಾರ ಕೈಗೊಂಡ ಶಾಶ್ವತ ಪರಿಹಾರಗಳೇನು ;

(ಉ) ಕಾಡು ಪ್ರಾಣಿಗಳ ಸಾವಿಗೆ ಕಾರಣರಾದವರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ? (ಪ್ರಕರಣವಾರು ವಿವರ ನೀಡುವುದು)

## ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಕುಸಿಯುತ್ತಿರುವ ಬಗ್ಗೆ

**ಶ್ರೀ ಮಧು ಜಿ.ಮಾದೇಗೌಡ (ಪದವೀಧರರ ಕ್ಷೇತ್ರ) :-**

೫೧ (೬೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ೧೦, ೨೦ ಮತ್ತು ೩೦ ಕ್ಕಿಂತ ಕಡಿಮೆ ಸಂಖ್ಯೆಯ ವಿದ್ಯಾರ್ಥಿಗಳ ದಾಖಲಾತಿ ಹೊಂದಿರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸರ್ಕಾರದ ಬಹುತೇಕ ಶಾಲೆಗಳಲ್ಲಿ ಪ್ರತಿ ವರ್ಷ ವಿದ್ಯಾರ್ಥಿಗಳ ದಾಖಲಾತಿಯಲ್ಲಿ ಕುಸಿತವಾಗುತ್ತಿರುವುದಕ್ಕೆ ಕಾರಣಗಳೇನು ; ವಿದ್ಯಾರ್ಥಿಗಳ ದಾಖಲಾತಿ ಹೆಚ್ಚಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಕಡಿಮೆ ಸಂಖ್ಯೆಯ ದಾಖಲಾತಿ ಹೊಂದಿರುವ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ವಿಷಯವಾರು ಗುಣಮಟ್ಟದ ಶಿಕ್ಷಣ ಸಿಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಗುಣಮಟ್ಟದ ಶಿಕ್ಷಣ ಒದಗಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಈ) ಕಡಿಮೆ ದಾಖಲಾತಿ ಹೊಂದಿರುವ ಶಾಲೆಗಳ ವಿದ್ಯಾರ್ಥಿಗಳನ್ನು ಸಮೀಪದ ಶಾಲೆಗಳಿಗೆ ಸಂಯೋಜನೆ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಸಂಪೂರ್ಣ ಮಾಹಿತಿ ನೀಡುವುದು ;

(ಉ) ಪ್ರಸಕ್ತ ಶೈಕ್ಷಣಿಕ ಸಾಲಿನಲ್ಲಿ ವಿದ್ಯಾರ್ಥಿಗಳ ಶೂನ್ಯ ದಾಖಲಾತಿ ಇರುವ ಹಾಗೂ ಶೂನ್ಯ ಶಿಕ್ಷಕರಿರುವ ಶಾಲೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಊ) ರಾಜ್ಯದಾದ್ಯಂತ ಕಳೆದ ನಾಲ್ಕು ವರ್ಷಗಳಲ್ಲಿ ವಿದ್ಯಾರ್ಥಿಗಳ ಕೊರತೆಯಿಂದ ಬಾಗಿಲು ಮುಚ್ಚಿರುವ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು)

# ಸರ್ಕಾರಕ್ಕೆ ವನ್ಯಜೀವಿ/ಪ್ರಾಣಿಗಳ ಅಂಗಾಂಗಗಳ ಪದಾರ್ಥಗಳನ್ನು ಹಸ್ತಾಂತರಿಸಿರುವ ಬಗ್ಗೆ

**ಶ್ರೀ ಮಧು ಜಿ.ಮಾದೇಗೌಡ (ಪದವೀಧರರ ಕ್ಷೇತ್ರ) :-**

೫೨ (೬೬) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಾಲೀಕತ್ವದ ಪ್ರಮಾಣಪತ್ರವಿಲ್ಲದೆ ಸಾರ್ವಜನಿಕರು ತಮ್ಮ ಬಳಿ ಇರಿಸಿಕೊಂಡಿದ್ದ ಹುಲಿ ಉಗುರು, ಆನೆ ದಂತ ಸೇರಿದಂತೆ ವನ್ಯಜೀವಿ/ ಪ್ರಾಣಿಗಳ ಅಂಗಾಂಗಗಳ ಪದಾರ್ಥಗಳನ್ನು ನಿಗದಿಪಡಿಸಿದ ಕಾಲಮಿತಿಯೊಳಗೆ ಎಷ್ಟು ಜನರು, ಯಾವ ಯಾವ ರೀತಿಯ ಎಷ್ಟು ಪದಾರ್ಥಗಳನ್ನು ಸರ್ಕಾರಕ್ಕೆ ಹಸ್ತಾಂತರಿಸಿದ್ದಾರೆ ; ಈ ಪದಾರ್ಥಗಳ ಮಾರುಕಟ್ಟೆಯ ಮೌಲ್ಯ ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಆ) ವನ್ಯಜೀವಿ/ಪ್ರಾಣಿಗಳ ಅಂಗಾಂಗಗಳ ಪದಾರ್ಥಗಳನ್ನು ತಮ್ಮ ಬಳಿ ಇರಿಸಿಕೊಂಡ ಕಾನೂನುಬಾಹಿರ ಕೃತ್ಯಕ್ಕೆ ದಾಖಲಾದ ಪ್ರಕರಣಗಳ ಸಂಖ್ಯೆ ಎಷ್ಟು ; ಯಾವ ರೀತಿಯ ಕಾನೂನು ಕ್ರಮಗಳನ್ನು ಜರುಗಿಸಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಅರಣ್ಯ ಇಲಾಖೆಯ ಸ್ವಾಧೀನದಲ್ಲಿರುವ/ಸಂಗ್ರಹಾರಗಾರದಲ್ಲಿ ದಾಸ್ತಾನು ಮಾಡಲಾಗಿರುವ ವನ್ಯಜೀವಿ ಅಂಗಾಂಗಗಳನ್ನು ನಾಶಪಡಿಸಲು ಸರ್ಕಾರ ಉದ್ದೇಶಿಸಿದೆಯೇ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಸರ್ಕಾರಕ್ಕೆ ವನ್ಯಜೀವಿ/ಪ್ರಾಣಿಗಳ ಅಂಗಾಂಗಗಳ ಪದಾರ್ಥಗಳನ್ನು ಅಧ್ಯರ್ಪಿಸಲು ನಿಗದಿಪಡಿಸಿದ್ದ ಗಡುವು ೧೦ನೇ ಏಪ್ರಿಲ್ ೨೦೨೪ಕ್ಕೆ ಮುಕ್ತಾಯಗೊಂಡಿರುವುದರಿಂದ ಗಡುವನ್ನು ವಿಸ್ತರಿಸಲು ಸರ್ಕಾರ ಉದ್ದೇಶಿಸಿದೆಯೇ ;

(ಉ) ಮಾಲೀಕತ್ವದ ಪ್ರಮಾಣಪತ್ರವಿಲ್ಲದೆ ಕಾನೂನುಬಾಹಿರವಾಗಿ ವನ್ಯಜೀವಿ/ಪ್ರಾಣಿಗಳ ಅಂಗಾಂಗಗಳ ಪದಾರ್ಥಗಳನ್ನು ಸಾರ್ವಜನಿಕರು ಇರಿಸಿಕೊಂಡರೆ ತೆಗೆದುಕೊಳ್ಳಬಹುದಾದ ಕಾನೂನು ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## ಪಿ.ಎಚ್.ಡಿ ಪ್ರವೇಶದಲ್ಲಿ ಏಕರೂಪತೆ ತರಲು ಉದ್ದೇಶಿಸಿರುವ ಬಗ್ಗೆ

**ಶ್ರೀ ಮಧು ಜಿ.ಮಾದೇಗೌಡ (ಪದವೀಧರರ ಕ್ಷೇತ್ರ) :-**

೫೩ (೬೭) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ರಾಜ್ಯದ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ ಪಿ.ಎಚ್.ಡಿ. ಸೀಟುಗಳನ್ನು ಭರ್ತಿ ಮಾಡುವ ವಿಧಾನದಲ್ಲಿ ಏಕರೂಪತೆಯನ್ನು ತರಲು ಪ್ರೊ. ಎಂ.ಎಸ್.ಸುಭಾಷ್, ವಿಶ್ರಾಂತ ಕುಲಪತಿಗಳು ಇವರ ಅಧ್ಯಕ್ಷತೆಯಲ್ಲಿ ರಚಿಸಿರುವ ತಜ್ಞರ ಸಮಿತಿ ಸರ್ಕಾರಕ್ಕೆ ವಿಸ್ತೃತವಾದ ವರದಿ ಸಲ್ಲಿಸಿದೆಯೇ ;

(ಆ) ಸಲ್ಲಿಸಿದ್ದಲ್ಲಿ, ಸದರಿ ತಜ್ಞರ ಸಮಿತಿಯು ವರದಿಯಲ್ಲಿನ ಪ್ರಮುಖಾಂಶಗಳೇನು ; ಸರ್ಕಾರ ವರದಿಯಲ್ಲಿನ ಅಂಶಗಳನ್ನು ಯಾವ ಶೈಕ್ಷಣಿಕ ಸಾಲಿನಿಂದ ಜಾರಿಗೆ ತರಲಿದೆ ; (ಈ ಬಗ್ಗೆ ಸಂಪೂರ್ಣ ವಿವರ ನೀಡುವುದು)

(ಇ) ವಿಶ್ವವಿದ್ಯಾಲಯಗಳಲ್ಲಿ ಪಿ.ಎಚ್.ಡಿ. ಸೀಟುಗಳನ್ನು ಭರ್ತಿ ಮಾಡುವ ವಿಧಾನದಲ್ಲಿ ಏಕರೂಪತೆ ತರುವುದರಿಂದ ವಿದ್ಯಾರ್ಥಿಗಳಿಗೆ ಆಗಲಿರುವ ಉಪಯೋಗಗಳೇನು ; (ವಿವರ ನೀಡುವುದು)

(ಈ) ಸಂಶೋಧನಾ ವಿದ್ಯಾರ್ಥಿಗಳು ಪಿ.ಎಚ್.ಡಿ. ಪೂರೈಸಲು ನಿಗದಿಪಡಿಸಿರುವ ಗಡುವು ಏನು ; ಮಹಿಳಾ ಸಂಶೋಧನಾ ವಿದ್ಯಾರ್ಥಿಗಳಿಗೆ ಪ್ರೌಢ ಪ್ರಬಂಧ ಸಲ್ಲಿಸಲು ಕಾಲಮಿತಿಯಲ್ಲಿ ವಿನಾಯಿತಿ ಇದೆಯೇ ? (ಸಂಪೂರ್ಣ ವಿವರ ನೀಡುವುದು)

# ಅತಿಥಿ ಶಿಕ್ಷಕರು/ಉಪನ್ಯಾಸಕರ ಮಾಸಿಕ ಗೌರವ ಸಂಭಾವನೆ ಪರಿಷ್ಕರಿಸುವ ಬಗ್ಗೆ

**ಶ್ರೀ ಮಧು ಜಿ.ಮಾದೇಗೌಡ (ಪದವೀಧರರ ಕ್ಷೇತ್ರ) :-**

೫೪ (೬೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಸರಕಾರಿ ಪ್ರಾಥಮಿಕ, ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಹಾಗೂ ಮಂಜೂರಾದ ಮತ್ತು ಖಾಲಿ ಇರುವ ಬೋಧಕ ಹುದ್ದೆಗಳ ಸಂಖ್ಯೆ ಎಷ್ಟು ; ( ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಆ) ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಸರ್ಕಾರಿ ಪ್ರಾಥಮಿಕ, ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ಬೋಧಕ ಹುದ್ದೆಗಳ ಎದುರಾಗಿ ನೇಮಕ ಮಾಡಿಕೊಳ್ಳಲಾದ ಅತಿಥಿ/ಶಿಕ್ಷಕರು ಉಪನ್ಯಾಸಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಅತಿಥಿ ಶಿಕ್ಷಕರು/ಉಪನ್ಯಾಸಕರಿಗೆ ಮಾಹೆಯಾನ ಪಾವತಿಸುತ್ತಿರುವ ಗೌರವಧನ ಎಷ್ಟು ; (ವಿವರ ನೀಡುವುದು)

(ಈ) ಹೆಚ್ಚಿನ ಸೇವಾ ಅನುಭವ ಹೊಂದಿರುವ ಹಾಗೂ ಶಾಲೆ/ ಕಾಲೇಜುಗಳಲ್ಲಿ ಪೂರ್ಣಾವಧಿ ಕಾರ್ಯ ನಿರ್ವಹಿಸುತ್ತಿರುವ ಅತಿಥಿ ಶಿಕ್ಷಕರು/ಉಪನ್ಯಾಸಕರಿಗೆ ಮಾಸಿಕ ಪಾವತಿಸುತ್ತಿರುವ ಗೌರವ ಸಂಭಾವನೆ ತೀರಾ ಕಡಿಮೆಯಿದ್ದು ಈ ಮೊತ್ತವನ್ನು ಪರಿಷ್ಕರಣೆ ಮಾಡಲು ಸರ್ಕಾರ ಕ್ರಮ ಕೈಗೊಂಡಿದೆಯೇ ;

(ಉ) ಪ್ರಸಕ್ತ ಸಾಲಿನಲ್ಲಿ ಪ್ರಾಥಮಿಕ, ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಉದ್ದೇಶಿಸಿದೆಯೇ ; ಒಂದು ವೇಳೆ ಭರ್ತಿಗೆ ನಿರ್ಧರಿಸಿದ್ದರಲ್ಲಿ ಆ ಹುದ್ದೆಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

# ಎಸ್.ಎಸ್.ಎಲ್.ಸಿ/ದ್ವಿತೀಯ ಪಿಯುಸಿಯಲ್ಲಿ 'ಕನ್ನಡ' ಭಾಷಾ ವಿಷಯದಲ್ಲಿ ಹೆಚ್ಚು ವಿದ್ಯಾರ್ಥಿಗಳು ಅನುತ್ತೀರ್ಣರಾಗುತ್ತಿರುವ ಬಗ್ಗೆ

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೫೫ (೬೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಇತ್ತೀಚೆಗೆ ಪ್ರಕಟಗೊಂಡ ಎಸ್.ಎಸ್.ಎಲ್.ಸಿ ಮತ್ತು ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗಳಲ್ಲಿ ಮಾತೃ ಭಾಷೆ 'ಕನ್ನಡ' ವಿಷಂರುದಲ್ಲೇ ಹೆಚ್ಚಿನ ವಿದ್ಯಾರ್ಥಿಗಳು ಅನುತ್ತೀರ್ಣರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಫಲಿತಾಂಶ ಸುಧಾರಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಎಸ್.ಎಸ್.ಎಲ್.ಸಿ ಮತ್ತು ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗಳಲ್ಲಿ ಭಾಷಾ ವಿಷಯಗಳಲ್ಲಿ (ಕನ್ನಡ, ಇಂಗ್ಲೀಷ್, ಉರ್ದು) ಅನುತ್ತೀರ್ಣಗೊಂಡ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; (ಪರೀಕ್ಷೆ ತೆಗೆದುಕೊಂಡವರು/ಪರೀಕ್ಷೆಗೆ ಹಾಜರಾದವರು/ಪರೀಕ್ಷೆಗೆ ಗೈರು ಹಾಜರಾದವರು/ಉತ್ತೀರ್ಣರಾದವರು/ಅನುತ್ತೀರ್ಣರಾದವರುಗಳ ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಶಾಲೆ/ಕಾಲೇಜುಗಳಲ್ಲಿ ಕನ್ನಡ ಭಾಷಾ ಶಿಕ್ಷಕರು/ಉಪನ್ಯಾಸಕರ ಕೊರತೆ ಇದೆಯೇ ; (ಮಂಜೂರಾದ ಹುದ್ದೆಗಳು/ಭರ್ತಿಯಾದ ಹುದ್ದೆಗಳು/ಖಾಲಿ ಹುದ್ದೆಗಳ ವಿವರ ನೀಡುವುದು)

(ಈ) ಖಾಲಿಯಿರುವ 'ಕನ್ನಡ ಭಾಷಾ' ಬೋಧಕರ ಹುದ್ದೆಗಳಿಗೆ ಎದುರಾಗಿ ನೇಮಕ ಮಾಡಿಕೊಂಡಿರುವ ಅತಿಥಿ ಉಪನ್ಯಾಸಕರ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ಮಾತೃಭಾಷೆ 'ಕನ್ನಡ' ವಿಷಯದಲ್ಲಿ ಶೇಕಡ ನೂರರಷ್ಟು ಫಲಿತಾಂಶ ಪಡೆಯಲು ಹಾಗೂ ಅನುತ್ತೀರ್ಣಗೊಂಡ ವಿದ್ಯಾರ್ಥಿಗಳು ಉತ್ತೀರ್ಣರಾಗಲು ಯಾವ ರೀತಿಯ ಬೋಧನಾ ತಂತ್ರಗಳನ್ನು ಅಳವಡಿಸಿಕೊಳ್ಳಲಾಗಿದೆ ? (ವಿವರ ನೀಡುವುದು)

## ಆಹಾರ ಸುರಕ್ಷತೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೬ (೭೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಜಾರಿಯಲ್ಲಿರುವ ಆಹಾರ ಸುರಕ್ಷತಾ ನಿಯಮಗಳು ಯಾವುವು ; ಅವುಗಳನ್ನು ಯಾವಾಗ ರಚಿಸಲಾಗಿತ್ತು. ಬದಲಾದ ಸನ್ನಿವೇಶದಲ್ಲಿ ಅವುಗಳನ್ನು ತಿದ್ದುಪಡಿ ಮಾಡುವ ಅಥವಾ ಸುಧಾರಿಸುವ ಬಗ್ಗೆ ಸರ್ಕಾರ ಆಲೋಚಿಸಿದೆಯೇ ; (ವಿವರ ನೀಡುವುದು)

(ಆ) ಆಹಾರ ಸುರಕ್ಷತಾ ನಿಯಮಗಳನ್ನು ಜಾರಿಗೊಳಿಸುವ ಅಥವಾ ಉಲ್ಲಂಘನೆಯಾಗದಂತೆ ನೋಡಿಕೊಳ್ಳುವ ಆರೋಗ್ಯ ಇಲಾಖೆಯ ಈ ವಿಭಾಗದಲ್ಲಿ ಅರ್ಧಕ್ಕಿಂತ ಹೆಚ್ಚು ಅಧಿಕಾರಿ, ಸಿಬ್ಬಂದಿಗಳ ಕೊರತೆಯಿದ್ದು ಹೆಚ್ಚಿನವರು ನಿಂಯೋಜನೆ ಮೇಲೆ ಕಾರ್ಯನಿರ್ವಹಿಸುತ್ತಿದ್ದು, ಪೂರ್ಣಕಾಲಿಕ ತಾಂತ್ರಿಕತೆ, ನೈಪುಣ್ಯತೆಯಿರುವ ಅಗತ್ಯ ಸಿಬ್ಬಂದಿ ಒದಗಿಸಲು ಸರ್ಕಾರ ಯಾವ ಕ್ರಮವಹಿಸಿದೆ ; (ವಿವರ ನೀಡುವುದು)

(ಇ) ಬದಲಾದ ಸನ್ನಿವೇಶದಲ್ಲಿ ಹೆಚ್ಚುತ್ತಿರುವ ಸಂಸ್ಕರಿಸಿದ ಆಹಾರ ಬಳಕೆಯ ಹಿನ್ನಲೆಯಲ್ಲಿ ಮತ್ತು ಪೊಟ್ಟಣಗಳ ಮೂಲಕ ಆಹಾರ ವಸ್ತು ಸರಬರಾಜು ಆಗುತ್ತಿರುವಾಗ ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಆಹಾರ ಸುರಕ್ಷತಾ ನಿಯುಮಗಳನ್ನು ಸಮಪರ್ಕವಾಗಿ ಜಾರಿಗೊಳಿಸಲು ರಾಜ್ಯದಲ್ಲಿ ಒಂದು ಪೂರ್ಣ ಪ್ರಮಾಣದ ತಪಾಸಣಾ ವ್ಯವಸ್ಥೆಯ ಅಗತ್ಯತೆಯ ಬಗ್ಗೆ ಸರ್ಕಾರ ಚಿಂತಿಸಿದೆಯೇ ; (ವಿವರ ನೀಡುವುದು)

(ಈ) ರಾಜ್ಯದಲ್ಲಿ ಯಾವುದೇ ಆಹಾರ ಪದಾರ್ಥ, ಖಾದ್ಯ, ತೈಲ, ವನಸ್ಪತಿ, ಹಣ್ಣು ಹಂಪಲು, ಮೀನು, ಮಾಂಸ (ಕೃತಕ ಬಣ್ಣ & ನಿಷೇಧಿತ ಸಂರಕ್ಷಕ) ಇತ್ಯಾದಿ ಕಲಬೆರಕೆಯ ಮಾದರಿಗಳನ್ನು ಪರೀಕ್ಷಿಸಲು ಇರುವ ಸರ್ಕಾರಿ ಪ್ರಯೋಗಾಲಯಗಳು ಎಷ್ಟು; ಸರ್ಕಾರದಿಂದ ಮಾನ್ಯತೆ ಹೊಂದಿದ ಖಾಸಗಿ ಪ್ರಯೋಗಾಲಯಗಳು ಎಷ್ಟು; ಅವು ಎಲ್ಲೆಲ್ಲಿ ಇವೆ ; (ವಿವರ ನೀಡುವುದು)

(ಉ) ಯಾವುದೇ ರೀತಿಯ ಕಲಬೆರಕೆಯನ್ನು ಸುಲಭವಾಗಿ ಗುರುತಿಸುವ ಸರಳ ವಿಧಾನಗಳನ್ನು ವಿವಿಧ ಮಾಧ್ಯಮಗಳ ಮೂಲಕ ಅಥವಾ ಸಾಮಾಜಿಕ ಜಾಲತಾಣಗಳ ಮೂಲಕ ಪ್ರಚಾರ ಪಡಿಸುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಉನ್ನತ ಶಿಕ್ಷಣ ಸಂಸ್ಥೆಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೭ (೭೨) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಉನ್ನತ ಶಿಕ್ಷಣ ಸಂಸ್ಥೆಗಳಾವುವು; ಅವುಗಳಲ್ಲಿ ವಾರ್ಷಿಕವಾಗಿ ದಾಖಲಾಗಿರುವ ವಿದ್ಯಾರ್ಥಿಗಳ ಸಂಖ್ಯೆಯೆಷ್ಟು; ಪಾಲಿಟೆಕ್ನಿಕ್, ಸರ್ಕಾರಿ ಮತ್ತು ಖಾಸಗಿ ಪದವಿ ಕಾಲೇಜು, ತಾಂತ್ರಿಕ ಕಾಲೇಜು, ಸ್ವಾಯತ್ತ ಸಂಸ್ಥೆಗಳು, ಅನುದಾನಿತ, ಅನುದಾನರಹಿತ ಕಾಲೇಜು, ವಿಶ್ವವಿದ್ಯಾಲಯ, ಪರಿಗಣಿತ ವಿಶ್ವವಿದ್ಯಾಲಯಗಳ ಸಹಿತ ಉನ್ನತ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ಶಿಕ್ಷಣ ಸಂಸ್ಥೆಗಳ ವಿವರ ನೀಡುವುದು;

(ಆ) ರಾಜ್ಯದ ಶಿಕ್ಷಣ ಸಂಸ್ಥೆಗಳಲ್ಲಿ ಅನುಮೋದಿತ ಶಿಕ್ಷಕರ, ಪ್ರಾಧ್ಯಾಪಕರ, ತರಬೇತುದಾರರ ಹಾಗೂ ಇನ್ನಿತರ ಅಗತ್ಯ ಸಿಬ್ಬಂದಿಗಳ ಸಂಖ್ಯೆಯೆಷ್ಟು; ಅವುಗಳಲ್ಲಿ ಖಾಯಂ ಮತ್ತು ಅತಿಥಿ ಶಿಕ್ಷಕರ ಹಾಗೂ ತಾತ್ಕಾಲಿಕ ಸಿಬ್ಬಂದಿಗಳ ಸಂಖ್ಯೆಯೆಷ್ಟು; (ಶಿಕ್ಷಣ ಸಂಸ್ಥೆವಾರು ವಿವರ ನೀಡುವುದು)

(ಇ) ರಾಜ್ಯ ಸರ್ಕಾರದ ಶಿಕ್ಷಣ ಸಂಸ್ಥೆಗಳೂ ಸೇರಿದಂತೆ ಹಲವಾರು ಶಿಕ್ಷಣ ಸಂಸ್ಥೆಗಳಲ್ಲಿ ಅನೇಕ ವೃತ್ತಿಪರ ಕೋರ್ಸುಗಳಿಗೆ, ಪದವಿ ಹಾಗೂ ಸ್ನಾತಕೋತ್ತರ ಪದವಿಗಳಿಗೆ ಬೇಡಿಕೆಯಿದ್ದರೂ ನಿವೃತ್ತಿಯಿಂದ ತೆರವಾಗುವ ಅನುಮೋದಿತ ಶಿಕ್ಷಕ ಹುದ್ದೆಗಳಿಗೆ ವೇತನಾನುದಾನ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ವೇತನಾನುದಾನವನ್ನು ಯಾವ ವರ್ಷದಿಂದ ಸ್ಥಗಿತಗೊಳಿಸಲಾಗಿದೆ; ಮತ್ತು ಅದಕ್ಕೆ ಕಾರಣಗಳೇನು; (ವಿವರ ನೀಡುವುದು)

(ಈ) ರಾಜ್ಯದ ಶಿಕ್ಷಣ ಸಂಸ್ಥೆಗಳಿಗೆ ಸರ್ಕಾರದಿಂದ ಅನುದಾನ ಮಂಜೂರು ಮತ್ತು ಬಿಡುಗಡೆ ಮಾಡಲು ಇರುವ ನಿಯಮಗಳಾವುವು; ಖಾಸಗಿ ಅನುದಾನಿತ ಸಂಸ್ಥೆಗಳು, ಸರ್ಕಾರಿ

ಪಾಲಿಟೆಕ್ನಿಕ್, ಸರ್ಕಾರಿ ಕಾಲೇಜು ಹಾಗೂ ವಿಶ್ವವಿದ್ಯಾಲಯಗಳಿಗೆ ಯಾವ ಮಾನದಂಡದ ಆಧಾರದಲ್ಲಿ ಅನುದಾನವನ್ನು ಬಿಡುಗಡೆ ಮಾಡಲಾಗಿದೆಯೇ ; ಅನುದಾನ ಬಿಡುಗಡೆಯಾಗದ ಕಾರಣ ಕೊರತೆಯಾಗುವ ಸಂಪನ್ಮೂಲಗಳನ್ನು ಮುಖ್ಯವಾಗಿ ಸರ್ಕಾರಿ ಶಿಕ್ಷಣ ಸಂಸ್ಥೆಗಳು ಹೇಗೆ ಹೊಂದಿಸುತ್ತಿವೆ ; ಕಳೆದ ಮೂರು ವರ್ಷಗಳಲ್ಲಿ ಸರ್ಕಾರ ಮಂಜೂರು ಮಾಡಿ ಬಿಡುಗಡೆ ಮಾಡಿದ ಅನುದಾನ ಎಷ್ಟು? (ಶಿಕ್ಷಣ ಸಂಸ್ಥೆವಾರು ವಿವರ ನೀಡುವುದು)

## ಕರ್ನಾಟಕ ರಾಜ್ಯದ ವಿದ್ಯುತ್ ಪ್ರಸರಣ ನಿಗಮಗಳ ವಿದ್ಯುತ್ ಜಾಲ ನಿರ್ವಹಣೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೮ (೭೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯದ ಎಲ್ಲಾ ವಿದ್ಯುತ್ ಪ್ರಸರಣ ನಿಗಮಗಳ ವಿದ್ಯುತ್ ಜಾಲ ನಿರ್ವಹಣೆಯ ನಿಯಮಗಳೇನು ; ವಿದ್ಯುತ್ ಜಾಲದ ಹಾಗೂ ಸಾರ್ವಜನಿಕರ ಸುರಕ್ಷತೆಗೆ ಇಲಾಖೆ ಕೈಗೊಂಡಿರುವ ಕ್ರಮಗಳು ಯಾವುವು ; ಕಳೆದ ೩ ವರ್ಷಗಳಲ್ಲಿ ವಿದ್ಯುತ್ ಸಂಬಂಧಿತ ಸಂಭವಿಸಿದ ದುರ್ಘಟನೆಗಳೆಷ್ಟು ಅವುಗಳಲ್ಲಿ ಮಾನವ ಪ್ರಾಣ ಹಾನಿ, ಆಸ್ತಿಹಾನಿ, ಜಾನುವಾರು ಪ್ರಾಣಹಾನಿ, ಇತ್ಯಾದಿ ಪ್ರಕರಣಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ವಿದ್ಯುತ್ ಜಾಲ ನಿರ್ವಹಣೆಯಲ್ಲಿರುವ ತೊಂದರೆಗಳಾದ ತಂತಿ ಹಳೆಯದಾಗಿರುವುದು, ವಿದ್ಯುತ್ ಕಂಬ ಹಳೆಯದಾಗಿರುವುದು, ತಂತಿ ಕೆಳಮಟ್ಟದಲ್ಲಿರುವುದು, ವಿದ್ಯುತ್ ಪರಿವರ್ತಕದ ಮತ್ತು

ತಂತಿಯ ಹತ್ತಿರ ಮರ ಪೊದೆ ಬೆಳೆದಿರುವುದು ಹಾಗೂ ಇತರ ಸಮಸ್ಯೆಗಳನ್ನು ಕಾಲ ಕಾಲಕ್ಕೆ ಪರಿಹರಿಸಲಾಗುತ್ತಿದೆಯೇ,ಈ ಕುರಿತು ಸಾರ್ವಜನಿಕರು ದೂರು ನೀಡಿದ ಪ್ರಕರಣಗಳೇಷ್ಟು, ಇಲಾಖೆ ಕ್ರಮವಹಿಸಿದ ಪ್ರಕರಣಗಳೆಷ್ಟು; (ವಿವರ ನೀಡುವುದು)

(ಇ) ಇತ್ತೀಚೆಗೆ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಅಪಾಯಕಾರಿ ಮರಗಳು ಬಿದ್ದು ವಿದ್ಯುತ್ ತಂತಿ ಹಾಗೂ ಇತರ ವ್ಯವಸ್ಥೆಗೆ ಹಾನಿಯಾದ ಪ್ರಕರಣಗಳು ಎಷ್ಟು; ಹೆಚ್ಚಿನ ಸಂದರ್ಭಗಳಲ್ಲಿ ವಿದ್ಯುತ್ ಲೈನಿನ ಮೇಲೆ ಮರಗಳು ಬಿದ್ದ ನಂತರವೇ ಇಲಾಖೆಯು ಕ್ರಮವಹಿಸುತ್ತಿದ್ದು ಅದನ್ನು ಗಮನಿಸಿ ಮೊದಲೇ ಮರಗಳನ್ನು ತೆರವು ಮಾಡಲು ಕ್ರಮವಹಿಸುತ್ತಿಲ್ಲದಿರುವುದಕ್ಕೆ ಕಾರಣಗಳೇನು; (ವಿವರ ನೀಡುವುದು)

(ಈ) ರಾಜ್ಯದ ಅರಣ್ಯದ ಮೂಲಕ ಖಾಸಗಿ ಜಾಗದ ಮೂಲಕ ಹಾಗೂ ಕೃಷಿ ಸ್ಥಳಗಳ ಮೂಲಕ ಹಾದು ಹೋಗಿರುವ ವಿದ್ಯುತ್ ತಂತಿಗಳ ಮೇಲೆ ಹತ್ತಿರ ಇರುವ ಮರ ಇತ್ಯಾದಿಗಳನ್ನು ತೆರವು ಮಾಡಲು ಅನುಸರಿಸುತ್ತಿರುವ ನಿಯಮಗಳು ಯಾವುವು; ಮರ ತೆರವು ಮಾಡುವಾಗ ಲೈನ್ ಡೌನ್ ಮಾಡಲು ಅಥವಾ ಕರೆಂಟ್ ವಿದ್ಯುತ್ ಸಂಪರ್ಕ ತಪ್ಪಿಸಿ ತಂತಿಯನ್ನು ಸುರಕ್ಷಿತವಾಗಿ ಕೆಳಗಿಳಿಸುವ ನಿಯಮಗಳು ಯಾವುವು; ಅದಕ್ಕೆ ಶುಲ್ಕಗಳು ಅನ್ವಯಿಸುತ್ತವೆಯೇ; ಶುಲ್ಕ ಅನ್ವಯಿಸುತ್ತಿದ್ದಲ್ಲಿ, ಎಷ್ಟು ಶುಲ್ಕವನ್ನು ಯಾರಿಂದ ವಸೂಲು ಮಾಡಲಾಗುತ್ತದೆ ? (ವಿವರ ನೀಡುವುದು)

## ನಾಗರಿಕ ಪ್ರದೇಶದಲ್ಲಿರುವ ಮರಗಳ ನಿರ್ವಹಣೆ ಬಗ್ಗೆ

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೯ (೭೪) ಮಾನ್ಯ ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ನಾಗರಿಕರ ಪ್ರದೇಶಗಳಲ್ಲಿರುವ ಮರಗಳ ನಿರ್ವಹಣೆ ಜವಾಬ್ದಾರಿ ಯಾರದ್ದು ; ಸ್ಥಳೀಯ ಸಂಸ್ಥೆಗಳೇ ಅಥವಾ ಲೋಕೋಪಯೋಗಿ ಇಲಾಖೆಯೇ ; ಇತ್ತೀಚಿನ ದಿನಗಳಲ್ಲಿ ಹೆಚ್ಚಿನ ರಸ್ತೆ ಬದಿ ಪ್ರದೇಶಗಳಲ್ಲಿ ಅಪಾಯಕಾರಿ ಮಟ್ಟದಲ್ಲಿರುವ ಮರಗಳನ್ನು ತೆರವು ಮಾಡದಿರುವುದರಿಂದ ಅವುಗಳು ವಿವಿಧ ಕಾರಣಗಳಿಗಾಗಿ ಮಳೆ, ಗಾಳಿ ಬಂದಾಗ ಸಾರ್ವಜನಿಕ ವಾಹನ ಜನರು ಹಾಗೂ ಕಟ್ಟಡಗಳ ಮೇಲೆ ಬಿದ್ದು ವ್ಯಾಪಕ ಹಾನಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಕುರಿತು ಸರ್ಕಾರ ವಹಿಸಿದ ಕ್ರಮಗಳೇನು ; (ಮಾಹಿತಿ ನೀಡುವುದು)

(ಆ) ನಾಗರಿಕ ಪ್ರದೇಶಗಳಲ್ಲಿ ಅಪಾಯಕಾರಿ ಮಟ್ಟದಲ್ಲಿರುವ ಹಾಗೂ ಅಪಾಯಕಾರಿಯಾಗಿರುವ ಮರಗಳನ್ನು ಗುರುತಿಸಲು ಹಾಗೂ ತೆರವುಗೊಳಿಸಲು ರಾಜ್ಯ ಅರಣ್ಯ ಇಲಾಖೆ ಯಾವ ರೀತಿ ನಿಯಮಗಳನ್ನು ಹಾಗೂ ಕ್ರಮಗಳನ್ನು ರೂಪಿಸಿದೆ ; (ವಿವರ ನೀಡುವುದು)

(ಇ) ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಗಳಲ್ಲಿ ಪ್ರತಿ ವರ್ಷ ಮಳೆಗಾಲದ ಸಂದರ್ಭದಲ್ಲಿ ಹಲವಾರು ( ಮರಗಳು ಕುಸಿದು ಉರುಳಿ ಬಿದ್ದು ಸಾರ್ವಜನಿಕರ ವಾಹನ ಆಸ್ತಿ ಪಾಸ್ತಿ ನಷ್ಟ, ಪ್ರಾಣ ಹಾನಿ ಆಗಿದ್ದಾಗ ಅರಣ್ಯ ಇಲಾಖೆ ಯಾವ ಕ್ರಮ ಕೈಗೊಂಡಿದೆ ; (ವಿವರ ನೀಡುವುದು)

(ಈ) ಸಾರ್ವಜನಿಕ ನಾಗರಿಕ ಪ್ರದೇಶದಲ್ಲಿ ಇರುವ ಮರಗಳನ್ನು ತೆರವು ಮಾಡಲು ಅರಣ್ಯ ಇಲಾಖೆ ಅನುಸರಿಸುತ್ತಿರುವ ನಿಯಮಗಳು, ಸುತ್ತೋಲೆಗಳು ಯಾವುವು ; ಅನೇಕ ಕಡೆಗಳಲ್ಲಿ ತೆರವು ಮಾಡಿದ ಮರಗಳ ಅವಶೇಷಗಳನ್ನು ಅಲ್ಲಿಯೇ ಬಿಟ್ಟು ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರ ಗಮನಿಸಿದೆಯೇ ; (ವಿವರ ನೀಡುವುದು)

(ಉ) ರಸ್ತೆ ಬದಿಗಳಲ್ಲಿ ಹಾಗೂ ನಾಗರಿಕ ಪ್ರದೇಶಗಳಲ್ಲಿ ಮರಗಳನ್ನು ವಾರ್ಷಿಕವಾಗಿ ಕತ್ತರಿಸುವ ಹಾಗೂ ವೈಜ್ಞಾನಿಕವಾಗಿ ಕತ್ತರಿಸುವ ಬಗ್ಗೆ ಸರ್ಕಾರ ಚಿಂತನೆ ನಡೆಸಿದೆಯೇ ; ಹಾಗೂ ವಿದ್ಯುತ್ ಲೈನ್‌ನ ಬುಡದಲ್ಲಿರುವ ಮರಗಳನ್ನು ವೈಜ್ಞಾನಿಕವಾಗಿ ಒಂದು ಹಂತದ ಎತ್ತರದವರೆಗೆ ಮಾತ್ರ ಬೆಳೆಸಲು ಸರ್ಕಾರ ಏನು ಕ್ರಮವಹಿಸಿದೆ ? (ವಿವರ ನೀಡುವುದು)

## ರಾಜ್ಯ ಸರ್ಕಾರವು ಇತ್ತೀಚೆಗೆ ಪೆಟ್ರೋಲ್ ಮತ್ತು ಡೀಸೆಲ್ ಮೇಲಿನ ದರಗಳನ್ನು ಹೆಚ್ಚಿಸಿರುವ ಬಗ್ಗೆ

**ಶ್ರೀ ಸಿ.ಎಸ್ ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೦ (೧೯೦) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರವು ಇತ್ತೀಚೆಗೆ ಪೆಟ್ರೋಲ್ ಮತ್ತು ಡೀಸೆಲ್ ಮೇಲಿನ ದರಗಳನ್ನು ಹೆಚ್ಚಿಸಿರುವುದು ನಿಜವಾಗಿದ್ದಲ್ಲಿ ಪ್ರತಿ ಲೀಟರ್‌ಗೆ ಎಷ್ಟು ದರವನ್ನು ಹೆಚ್ಚಿಸಲಾಗಿದೆ ;

(ಆ) ಮೇಲ್ಕಂಡ ಇಂಧನ ದರ ಹೆಚ್ಚಳದಿಂದ ವ್ಯಾಪಾರಸ್ಥರು, ಇತರೆ ಎಲ್ಲಾ ವಸ್ತುಗಳ ದರಗಳನ್ನು ಹೆಚ್ಚಿಸುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಇದನ್ನು ಕೂಡಲೇ ರದ್ದುಪಡಿಸಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ;

(ಇ) ಒಂದು ಲೀಟರ್ ಪೆಟ್ರೋಲ್ ದರಕ್ಕೆ ನೈಜವಾಗಿ ಸರ್ಕಾರಕ್ಕೆ ಬೀಳುವ ದರವೆಷ್ಟು ; ಇದರ ಮೇಲೆ ರಾಜ್ಯ ಸರ್ಕಾರ ಹಾಗೂ ಕೇಂದ್ರ ಸರ್ಕಾರದ ತೆರಿಗೆಗಳೆಷ್ಟು ;

(ಈ) ರಾಜ್ಯ ಸರ್ಕಾರ ಪೆಟ್ರೋಲ್ ದರದ ಮೇಲೆ ಸಾರ್ವಜನಿಕರಿಂದ ಅಧಿಕ ತೆರಿಗೆ ವಸೂಲಿ ಮಾಡುತ್ತಿದ್ದು, ಕೂಡಲೇ ಅದನ್ನು ಕಡಿಮೆ ಮಾಡಲು ಹಾಗೂ ಪೆಟ್ರೋಲ್ ಮತ್ತು ಡೀಸೆಲ್ ದರವನ್ನು ಜಿ.ಎಸ್.ಟಿ. ವ್ಯಾಪ್ತಿಗೆ ತರಲು ಕೈಗೊಳ್ಳುವ ಕ್ರಮಗಳೇನು ?

## ಬೃಹತ್ ಸಾರ್ವಜನಿಕ ಆಸ್ಪತ್ರೆಗಳ ನಿರ್ಮಾಣ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೧ (೧೯೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಹಾಗೂ ಗ್ರಾಮೀಣ ಪ್ರದೇಶದಿಂದ ಚಿಕಿತ್ಸೆಗೆ ಬರುವ ರೋಗಿಗಳಿಗೆ ಬ್ರಿಟಿಷ್ ಕಾಲದ ಸಾರ್ವಜನಿಕ ಆಸ್ಪತ್ರೆಗಳಾದ ವಿಕ್ಟೋರಿಯಾ, ಬೌರಿಂಗ್ ಹಾಗೂ ಕೆ.ಸಿ. ಜನರಲ್ ಆಸ್ಪತ್ರೆಗಳಲ್ಲಿ ರೋಗಿಗಳ ಒತ್ತಡದಿಂದಾಗಿ ಶೀಘ್ರ ಹಾಗೂ ಉತ್ತಮ ಚಿಕಿತ್ಸೆ ಪಡೆಯಲು ತುಂಬಾ ತೊಂದರೆಯಾಗಿರುವುದು ನಿಜವಲ್ಲವೇ ;

(ಆ) ಹಿಂದೆ ಈ ನಾಗರಿಕರಿಗೆ ಉತ್ತಮ ಹಾಗೂ ಶೀಘ್ರ ಚಿಕಿತ್ಸೆ ದೊರೆಯುವಂತಾಗಲು ಬೆಂಗಳೂರಿನ ನಾಲ್ಕು ದಿಕ್ಕುಗಳಲ್ಲಿ ಬೃಹತ್ ಸಾರ್ವಜನಿಕ ಆಸ್ಪತ್ರೆಗಳನ್ನು ನಿರ್ಮಿಸಬೇಕೆಂಬ ಯೋಜನೆ ಜಾರಿಗೊಳಿಸಲು ಸಿದ್ಧಪಡಿಸಿದ್ದು, ನಿಜವಲ್ಲವೇ ; (ಪೂರ್ಣ ಮಾಹಿತಿ ಒದಗಿಸುವುದು)

(ಇ) ಸದರಿ ಯೋಜನೆಯನ್ನು ಕೂಡಲೇ ಕಾರ್ಯಗತಗೊಳಿಸಲು ಸರ್ಕಾರ ಕೈಗೊಳ್ಳುವ ಕ್ರಮಗಳಾವುವು ? (ಪೂರ್ಣ ಮಾಹಿತಿ ಒದಗಿಸುವುದು)

## ಡೆಂಗ್ಯೂ ಜ್ವರ ನಿಯಂತ್ರಣ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೨ (೧೯೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಇತ್ತೀಚೆಗೆ ಡೆಂಗ್ಯೂ ಜ್ವರ ವ್ಯಾಪಕವಾಗಿದ್ದು, ಇದರ ನಿಯಂತ್ರಣಕ್ಕೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳಾವುವು ;

(ಆ) ಯಾವ ಯಾವ ಜಿಲ್ಲೆಗಳಲ್ಲಿ ಕಳೆದ ಆರು ತಿಂಗಳುಗಳಿಂದ ಎಷ್ಟೆಷ್ಟು ಡೆಂಗ್ಯೂ ಜ್ವರದ ಪ್ರಕರಣಗಳು ವರದಿಯಾಗಿರುತ್ತವೆ ;

(ಇ) ಬಿ.ಪಿ.ಎಲ್ ಕಾರ್ಡ್‌ದಾರರು ಹಾಗೂ ೬೦ ವರ್ಷ ಮೀರಿರುವ ಎಲ್ಲಾ ಹಿರಿಯ ನಾಗರೀಕರಿಗೆ ಇತರೆ ಉಚಿತ ಯೋಜನೆಗಳಂತೆ ಇವರುಗಳಿಗೂ ಸಹ ಖಾಸಗಿ ಹಾಗೂ ಸಾರ್ವಜನಿಕ ಆಸ್ಪತ್ರೆಗಳಲ್ಲಿ ಉಚಿತ ಚಿಕಿತ್ಸೆಯ ಭಾಗ್ಯ ನೀಡಲು ಸರ್ಕಾರ ಕೈಗೊಳ್ಳುವ ಕ್ರಮಗಳಾವುವು ? (ಪೂರ್ಣ ಮಾಹಿತಿ ಒದಗಿಸುವುದು)

## ರಾಜ್ಯ ಖಾಸಗಿ, ಅನುದಾನಿತ ಪ್ರೌಢ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುವ ಗ್ರೂಪ್ "ಡಿ" ನೌಕರರನ್ನು ಸಹಾಯಧನಕ್ಕೆ ಒಳಪಡಿಸುವ ಬಗ್ಗೆ

**ಶ್ರೀ ಮುಳೆ ಮಾರುತಿರಾವ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೬೩ (೧೩೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಖಾಸಗಿ ಅನುದಾನಿತ ಪ್ರೌಢ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಗ್ರೂಪ್ "ಡಿ" ನೌಕರರ ಸಂಖ್ಯೆ ಎಷ್ಟು; (ಜಿಲ್ಲಾವಾರು, ತಾಲ್ಲೂಕುವಾರು ನೌಕರರ ಹೆಸರು ಸಹಿತ ವಿವರ ನೀಡುವುದು)

(ಆ) ಇದರಲ್ಲಿ ಖಾಯಂ (ಸರ್ಕಾರಿ) ನೌಕರರ ಸಂಖ್ಯೆ ಎಷ್ಟು;
(ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ದಿನಾಂಕ:೨೬.೦೯.೨೦೧೭ರ ನಿಯಮ ಜಾರಿಗೆ ಬರುವ ಪೂರ್ವದಲ್ಲಿ ಅನುದಾನಿತ, ಪ್ರೌಢ ಶಾಲೆಗಳಲ್ಲಿ ನೇಮಕಗೊಂಡಿರುವ "ಡಿ" ಗ್ರೂಪ್ ನೌಕರರನ್ನು ಸಹಾಯಧನಕ್ಕೆ ಒಳಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಸಹಾಯಧನಕ್ಕೆ ಒಳಪಡಿಸುವಂತೆ ಕೋರಿ ಎಷ್ಟು ಗ್ರೂಪ್ "ಡಿ" ನೌಕರರ ಪ್ರಸ್ತಾವನೆ ಉಪ ನಿರ್ದೇಶಕರ ಕಛೇರಿ, ಅಪರ ಆಯುಕ್ತಾಲಯ ಹಾಗೂ ಆಯುಕ್ತಾಲಯದಲ್ಲಿ ಸ್ವೀಕೃತವಾಗಿರುತ್ತದೆ ; (ನೌಕರರವಾರು, ಶಾಲಾ ವಿಳಾಸ ಸಮೇತ ವಿವರ ನೀಡುವುದು)

(ಉ) ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ ೮ ಎಸ್‌ಇಪಿ ೨೦೧೮. ದಿನಾಂಕ:೨೬.೦೯.೨೦೧೭ರಲ್ಲಿ ಸದರಿ ಪ್ರಸ್ತಾವನೆಗಳನ್ನು ಸೇರ್ಪಡೆಗೊಳಿಸಲು ಆದೇಶಿಸಿದ್ದು, ವಿಧಾನ ಪರಿಷತ್ತಿನ ಭರವಸೆಗಳ ಸಮಿತಿಯಲ್ಲಿ ಚರ್ಚೆಯಾಗಿದ್ದು, ಇಲ್ಲಿಯವರೆಗೂ ಕ್ರಮ ಕೈಗೊಳ್ಳದಿರಲು ಕಾರಣವೇನು ?

## ಕರ್ನಾಟಕ ರಾಜ್ಯದಲ್ಲಿ ಉತ್ಪಾದಿಸುತ್ತಿರುವ ವಿದ್ಯುತ್ ಶಕ್ತಿಗಳ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೭೪ (೦೧) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕದಲ್ಲಿ ಉತ್ಪಾದಿಸಲಾಗುತ್ತಿರುವ ಸೌರಶಕ್ತಿ, ಪವನ ಶಕ್ತಿ, ಜಲ ವಿದ್ಯುತ್ ಶಕ್ತಿ, ಉಷ್ಣ ಶಕ್ತಿ ಇತ್ಯಾದಿಗಳ ವಾರ್ಷಿಕ ಉತ್ಪಾದನೆ ಎಷ್ಟು ;

(ಆ) ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಈ ಉತ್ಪಾದನೆ ಘಟಕಗಳು ಸ್ಥಾಪನೆಯಾಗಿವೆ ; ಇವುಗಳಲ್ಲಿ ಸರ್ಕಾರಿ ಘಟಕಗಳು ಎಷ್ಟು; ಹಾಗೂ ಖಾಸಗಿ ಘಟಕಗಳ ಸಂಖ್ಯೆ ಎಷ್ಟು;

(ಇ) ಇವುಗಳಿಂದ ಉತ್ಪಾದಿಸಲು ಖಾಸಗಿ ಕಂಪನಿಗಳು/ಸಂಸ್ಥೆಗಳೊಂದಿಗೆ ಮಾಡಿಕೊಳ್ಳಲಾದ ಒಪ್ಪಂದ ಕರಾರಿನಂತೆ ಸದರಿ ಖಾಸಗಿ ಸಂಸ್ಥೆಗಳು ಕಾರ್ಯನಿರ್ವಹಿಸಿ ಶಕ್ತಿ ಉತ್ಪಾದಿಸುತ್ತಿವೆಯೇ ;

(ಈ) ರಾಜ್ಯದಲ್ಲಿ ಇವುಗಳಿಂದ ಉತ್ಪಾದನೆಯಾಗುತ್ತಿರುವ ನಿಗಧಿತ ಶಕ್ತಿಯನ್ನು ಮೀರಿ ಉತ್ಪಾದನೆಯಾದಾಗ ಕರ್ನಾಟಕಕ್ಕೆ ಬೇಕಾಗುವ ಶಕ್ತಿಯನ್ನು ಹೊರತುಪಡಿಸಿ ಬಾಕಿ ಉಳಿದಿರುವ ಶಕ್ತಿಯನ್ನು ಬೇರೆ ರಾಜ್ಯಕ್ಕೆ ನೀಡಲಾಗುವುದೇ ಇದ್ದಲ್ಲಿ, ಇದಕ್ಕೆ ಇರುವ ಮಾನದಂಡಗಳೇನು ;

(ಉ) ರಾಜ್ಯದಲ್ಲಿ ಈ ಶಕ್ತಿಗಳಿಂದ ಉತ್ಪಾದನೆಯಾಗುತ್ತಿರುವ ನಿಗದಿತ ಶಕ್ತಿಯು ಕಡಿಮೆಯಾದಲ್ಲಿ, ಯಾವ ಯಾವ ರಾಜ್ಯಗಳಿಂದ ಖರೀದಿ ಮಾಡಲಾಗುತ್ತಿದೆ ಮತ್ತು ಅದಕ್ಕಿರುವ ಮಾನದಂಡಗಳೇನು ;

(ಊ) ಸರ್ಕಾರಿ/ಖಾಸಗಿ ಸಂಸ್ಥೆಗಳಿಂದ ಉತ್ಪಾದಿಸಲಾಗುತ್ತಿರುವ ಸೌರಶಕ್ತಿ/ ಪವನಶಕ್ತಿಗಳಲ್ಲಿ ರೈತರ ಪಂಪ್‌ಸೆಟ್ ಚಾಲನೆಗಳಿಗಾಗಿ ನೀಡಲಾಗುತ್ತಿರುವ ಶಕ್ತಿ ಸಂಖ್ಯೆ ಎಷ್ಟು ಮತ್ತು ಇದಕ್ಕೆ ಯಾವ ಸಂಸ್ಥೆ ಜವಾಬ್ದಾರಿಯಾಗಿರುತ್ತದೆ ; (ಸರ್ಕಾರಿ ಸಂಸ್ಥೆ ಅಥವಾ ಖಾಸಗಿ ಸಂಸ್ಥೆ)

(ಋ) ಒಂದು ವೇಳೆ ರಾಜ್ಯ ಸರ್ಕಾರದ ವತಿಯಿಂದ ಸ್ಥಾಪಿಸಲಾಗಿರುವ ಶಕ್ತಿ ಘಟಕಗಳಿಂದ ರಾಜ್ಯಕ್ಕೆ ಬೇಕಾಗುವ ಶಕ್ತಿಯನ್ನು ಉತ್ಪಾದಿಸುವಲ್ಲಿ ಯಶಸ್ಸು ಕಂಡರೂ ಖಾಸಗಿ ಸಂಸ್ಥೆಗಳೊಂದಿಗೆ ಮಾಡಿಕೊಂಡಿರುವ ಒಪ್ಪಂದ ಕರಾರಿನಂತೆ ಮಾಸಿಕವಾಗಿ/ವಾರ್ಷಿಕವಾಗಿ ಇವರಿಗೆ ಮೊತ್ತ ಪಾವತಿಸಲಾಗುತ್ತಿದೆಯೇ ; ಇದ್ದರೆ, ಈ ರೀತಿಯ

ಪ್ರಕರಣಗಳು ಎಷ್ಟು ಮತ್ತು ಹಿಂದಿನ ಐದು ವರ್ಷಗಳಲ್ಲಿ ಎಷ್ಟು ಮೊತ್ತವನ್ನು ಈ ರೀತಿ ಪಾವತಿಸಲಾಗಿದೆ ? (ಮಾಹಿತಿ ನೀಡುವುದು)

## ಬೆಳಗಾವಿ ನಗರದ ವ್ಯಾಕ್ಸಿನ್ ಡಿಪೋ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೬೫ (೦೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ನಗರದಲ್ಲಿ ಈ ಹಿಂದೆ ಮಹಾಮಾರಿ ಕಾಯಿಲೆಗಳಿಂದ ದೇಶದ ಜನರನ್ನು ರಕ್ಷಿಸಲು ಲಸಿಕೆ ಸಂಸ್ಥೆಯೊಂದನ್ನು ಸ್ಥಾಪಿಸಲಾಗಿದ್ದು ಇಲ್ಲಿಯ ವಿಜ್ಞಾನಿಗಳು, ತಂತ್ರಜ್ಞರು ಮತ್ತು ಕೆಲಸಗಾರರು ಸೇರಿ ದಿನದ ೨೪ ಗಂಟೆ ಶ್ರಮಿಸಿ ಭಾರತದಲ್ಲಿ ಸಿಡುಬು. ರ್‍ಯಾಬಿಸ್ ನಂತಹ ಮಹಾಮಾರಿ ಕಾಯಿಲೆಗಳಿಗೆ ಲಸಿಕೆ ತಯಾರಿಸುತ್ತಿದ್ದು ಈ ಸಂಸ್ಥೆಯು ಇವತ್ತು ಪಾಳು ಕಟ್ಟಡವಾಗಿ ಪರಿವರ್ತಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಐತಿಹಾಸಿಕ ಸಂಶೋಧನಾ ಮತ್ತು ಲಸಿಕೆ ಕೇಂದ್ರವನ್ನು ಉಳಿಸಿಕೊಳ್ಳಲು ಸರ್ಕಾರ ಕೈಗೊಂಡ ಕ್ರಮವೇನು ;

(ಇ) ಈ ಕೇಂದ್ರವನ್ನು ಪುನರಾರಂಭಿಸಿ ದೇಶದಲ್ಲಿ ಮತ್ತು ರಾಜ್ಯದಲ್ಲಿ ವೈದ್ಯಕೀಯ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಸಂಶೋಧನಾ ಕೇಂದ್ರವನ್ನಾಗಿ ಪರಿವರ್ತಿಸಿದರೆ ಲಾಭದಾಯಕವಾಗುವುದಿಲ್ಲವೇ, ವಿವರಿಸುವುದು ?

## ರಾಜ್ಯದಲ್ಲಿನ ಅರಣ್ಯ ವಿಸ್ತೀರ್ಣದ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೬೬ (೦೩) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅರಣ್ಯೇತರ ಉದ್ದೇಶಗಳಿಗಾಗಿ ಬದಲಿಸಲಾದ ಕರ್ನಾಟಕ ಅರಣ್ಯ ಪ್ರದೇಶದ ಒಟ್ಟು ವಿಸ್ತೀರ್ಣ ಎಷ್ಟು; ಮೂಲಭೂತ ಸೌಲಭ್ಯಗಳು ಮತ್ತು ಕೈಗಾರಿಕಾ ಯೋಜನೆಗಳನ್ನು ಒಳಗೊಂಡಂತೆ ಕಳೆದ ಐದು ವರ್ಷಗಳ ಮಾಹಿತಿ ನೀಡುವುದು ;

(ಆ) ಭೂ-ಪ್ರದೇಶವನ್ನು ಆರಣ್ಯ ಪ್ರದೇಶದ ಭಾಗವನ್ನಾಗಿ ಪರಿಗಣಿಸಲು ಅರಣ್ಯ ಇಲಾಖೆಯು ಅಳವಡಿಸಿಕೊಂಡಿರುವ ಮಾನದಂಡಗಳು ಯಾವುವು ;

(ಇ) ಪ್ರಸ್ತುತ, ಕರ್ನಾಟಕ ಅರಣ್ಯ ಪ್ರದೇಶದಲ್ಲಿ ನಿಯಮಿತ ಜೀವಿ ಪರಿಸರ ಅಥವಾ ಜೀವ- ವೈವಿಧ್ಯವಿದೆಯೆಂದು ಅಥವಾ ಜೀವಿ ಪರಿಸರ ಅಥವಾ ಜೀವ ವೈವಿಧ್ಯವಿಲ್ಲವೆಂದು ಪರಿಗಣಿಸಲಾದ ಪ್ರದೇಶದ ಒಟ್ಟು ವಿಸ್ತೀರ್ಣವೆಷ್ಟು ;

(ಈ) ಈವರೆಗೆ ದಾಖಲಾಗಿರುವ ಕರ್ನಾಟಕದ ಒಟ್ಟು ಅರಣ್ಯ ಪ್ರದೇಶದಲ್ಲಿ ದಟ್ಟವಾದ ಅರಣ್ಯಗಳ ಅನುಪಾತವೆಷ್ಟು ;

(ಉ) ರಾಜ್ಯದಲ್ಲಿ ಪರಿಸರ ಸ್ನೇಹಿ ಪರಿಸರವನ್ನು ಸುಸ್ಥಿರಗೊಳಿಸಲು ಸರ್ಕಾರದಿಂದ ಯಾವ ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ; ರಾಷ್ಟ್ರೀಯ ಉದ್ಯಾನವನಗಳು/ಪ್ರಾಣಿ ಸಂಗ್ರಹಾಲಯಗಳು, ಮುಂತಾದವುಗಳ ಸುತ್ತಮುತ್ತಲಿನ ಪರಿಸರ ಸೂಕ್ಷ್ಮವಲಯಗಳಿಗೆ (ESZ Zone) ನಿರ್ದಿಷ್ಟ ಪಡಿಸಿರುವ ಮಾರ್ಗಸೂಚಿಗಳೇನು ;

(ಊ) ಬಫರ್ ವಲಯವನ್ನು ೧೦ ಕಿಲೋಮೀಟರ್ ಅಥವಾ ೧ ಮೀಟರ್‌ಗೆ ಘೋಷಿಸಲಾಗಿದೆಯೇ ; ಪರಿಸರ ಸೂಕ್ಷ್ಮ ಪ್ರದೇಶದಲ್ಲಿ ಮತ್ತು ಸುತ್ತಮುತ್ತಲು ನಡೆಯುತ್ತಿರುವ ಕಲ್ಲುಗಣಿಗಾರಿಕೆಗಳೆಷ್ಟು ?

## ಕರ್ನಾಟಕ ರಾಜ್ಯದಲ್ಲಿ ಸ್ಥಾಪಿತವಾಗಿರುವ ನೃಪತುಂಗಾ ವಿಶ್ವವಿದ್ಯಾಲಯದ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೬೭ (೦೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕದ ಉನ್ನತ ಶಿಕ್ಷಣ ಇಲಾಖೆ ಅಧೀನದಲ್ಲಿ ಈ ಮೊದಲು ಸ್ಥಾಪಿತವಾಗಿದ್ದ ಸರ್ಕಾರಿ ವಿಜ್ಞಾನ ಕಾಲೇಜನ್ನು ನೃಪತುಂಗಾ ವಿಶ್ವವಿದ್ಯಾಲಯವನ್ನಾಗಿ ಮೇಲ್ದರ್ಜೆಗೇರಿಸಲಾಗಿದ್ದು (Unitary University) ಈ ವಿಶ್ವವಿದ್ಯಾಲಯವನ್ನು ಅನುದಾನ ಆಯೋಗದ (University Grants Commission) (UGC) ನಿಯಮಾವಳಿಗಳಂತೆ ಸ್ಥಾಪಿತವಾಗಿದೆಯೇ ;

(ಆ) ವಿಶ್ವವಿದ್ಯಾಲಯದ ಅನುದಾನ ಆಯೋಗದ (UGC) ನಿಯಮಾವಳಿಯಂತೆ ಒಂದು ವಿಶ್ವವಿದ್ಯಾಲಯವನ್ನು ಸ್ಥಾಪಿಸಬೇಕಾದಲ್ಲಿ, ಸದರಿ ವಿಶ್ವವಿದ್ಯಾಲಯಕ್ಕೆ ಕನಿಷ್ಠ ೨೫ ಎಕರೆ ಭೂಮಿ ಇರಬೇಕು (ನಗರವ್ಯಾಪ್ತಿಯಲ್ಲಿದ್ದರೆ) ; ಆದರೆ ಸದರಿ ವಿಶ್ವವಿದ್ಯಾಲಯವು ಕೇವಲ ೦೪ ಎಕರೆ ಭೂಮಿಯಲ್ಲಿ ಸ್ಥಾಪಿತವಾಗಿದ್ದು ನಿಯಮಾವಳಿಗಳ ಉಲ್ಲಂಘನೆಯಾಗಿರುವುದಿಲ್ಲವೇ ; ಆದ್ದಲ್ಲಿ (UGC) ನಿಯಮಾವಳಿಗಳನ್ನು ಉಲ್ಲಂಘಿಸಿ ಈ ವಿಶ್ವವಿದ್ಯಾಲಯವನ್ನು ಸ್ಥಾಪಿಸಲು ಕಾರಣವೇನು ;

(ಇ) ಸರ್ಕಾರಿ ವಿಜ್ಞಾನ ಕಾಲೇಜ್‌ನಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಹಾಸ್ಟೆಲ್ ವ್ಯವಸ್ಥೆಗಾಗಿ ಬೆಂಗಳೂರಿನ ಎಂ.ಜಿ ರಸ್ತೆಯಲ್ಲಿ ಕಟ್ಟಡ ಮಂಜೂರು ಮಾಡಲಾಗಿದ್ದು ಈ ಕಟ್ಟಡವನ್ನು ಸಮಾಜ ಕಲ್ಯಾಣ ಇಲಾಖೆಯು ಹಾಸ್ಟೆಲ್‌ಗಾಗಿ ಉಪಯೋಗಿಸಿಕೊಳ್ಳಲಾಗುತ್ತಿದೆಯೇ, ಈ ಹಾಸ್ಟೆಲ್ ಕಟ್ಟಡವನ್ನು ವಿಶ್ವವಿದ್ಯಾಲಯವು ಹಿಂಪಡೆದುಕೊಳ್ಳಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಯೋಜನೆಯ ಬಗ್ಗೆ

**ಶ್ರೀ ಬಿ. ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೮ (೪೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಯೋಜನೆಯಡಿಯಲ್ಲಿ ದೊರೆಯುವ ಚಿಕಿತ್ಸಾ ವಿಧಾನಗಳು ಯಾವುವು ; (ವಿವರ ನೀಡುವುದು)

(ಆ) ಸದರಿ ಯೋಜನೆ ಜಾರಿಯಾಗಿ ಐದು ವರ್ಷಗಳು ಕಳೆದರೂ ಸೂಕ್ತ ರೀತಿಯಲ್ಲಿ ಸೇವೆ ದೊರೆಯದೆ ಇರುವುದು ಹಾಗೂ ಯೋಜನೆಯ ಕುರಿತು ಸಮರ್ಪಕ ಮಾಹಿತಿ ಇಲ್ಲದೆ ಚಿಕಿತ್ಸೆಗಾಗಿ ರೋಗಿಗಳು ಆಸ್ಪತ್ರೆಯಿಂದ ಆಸ್ಪತ್ರೆಗಳಿಗೆ ಅಲೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯೋಜನೆಯ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡುವಲ್ಲಿ ವಿಫಲವಾದ ಅಧಿಕಾರಿಗಳ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ವಿವರ ನೀಡುವುದು) ;

(ಇ) ಈ ಮೇಲ್ಕಂಡ ಜಿಲ್ಲೆಗಳಲ್ಲಿ ಸದರಿ ಯೋಜನೆಯಡಿ ಚಿಕಿತ್ಸೆ ನೀಡುತ್ತಿರುವ ಸರ್ಕಾರಿ ಮತ್ತು ಖಾಸಗಿ ಆಸ್ಪತ್ರೆಗಳ ಸಂಖ್ಯೆ ಎಷ್ಟು? (ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಎ.ಪಿ.ಎಲ್ ಮತ್ತು ಬಿ.ಪಿ.ಎಲ್ ಕಾರ್ಡ್‌ಗಳ ಬಗ್ಗೆ

**ಶ್ರೀ ಬಿ. ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೯ (೪೨) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಒಟ್ಟು ಎಷ್ಟು ಎ.ಪಿ.ಎಲ್ ಮತ್ತು ಬಿ.ಪಿ.ಎಲ್ ಕಾರ್ಡ್‌ಗಳು ಚಾಲ್ತಿಯಲ್ಲಿವೆ; (ವಿವರ ನೀಡುವುದು)

(ಆ) ಸದರಿ ಜಿಲ್ಲೆಗಳಲ್ಲಿ ಹೊಸದಾಗಿ ಎಷ್ಟು ಎ.ಪಿ.ಎಲ್ ಮತ್ತು ಬಿ.ಪಿ.ಎಲ್ ಕಾರ್ಡ್‌ಗಳನ್ನು ನೀಡುವ ಗುರಿ ಸರ್ಕಾರದ ಮುಂದಿದೆಯೇ; (ವಿವರ ನೀಡುವುದು)

(ಇ) ನಾಗರಿಕ ಸರಬರಾಜು ಹೊರತುಪಡಿಸಿ ಬೇರೆ-ಬೇರೆ ಯಾವ ಸಂಸ್ಥೆಗಳಿಗೆ ಆಹಾರ ಸರಬರಾಜು ಮಾಡಲಾಗುತ್ತಿದೆ; (ವಿವರ ನೀಡುವುದು)

(ಈ) ಕಳೆದ ೨-೩ ವರ್ಷಗಳಿಂದ ಎ.ಪಿ.ಎಲ್ ಮತ್ತು ಬಿ.ಪಿ.ಎಲ್ ಕಾರ್ಡ್ ವಿತರಣೆಯುನ್ನು ನಿಲ್ಲಿಸಲಾಗಿದೆಯೇ; (ವಿವರ ನೀಡುವುದು)

(ಉ) ಎ.ಪಿ.ಎಲ್ ಮತ್ತು ಬಿ.ಪಿ.ಎಲ್ ಕಾರ್ಡ್‌ಗಳನ್ನು ವಿತರಿಸಬೇಕಾದರೆ ಅನುಸರಿಸುವ ಮಾನದಂಡಗಳೇನು? (ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳ ಗೃಹ ಜ್ಯೋತಿ ಯೋಜನೆಯ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೦ (೪೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿರುವ ಜನತೆಗೆ ಇಂಧನ ಇಲಾಖೆಯಿಂದ ಗೃಹ ಜ್ಯೋತಿ ಯೋಜನೆಯಡಿಯಲ್ಲಿ ೨೦೦ ಯೂನಿಟ್ ಉಚಿತವಾಗಿ ಪೂರೈಸಲು ಸರ್ಕಾರದ ಬೊಕ್ಕಸಕ್ಕೆ ಉಂಟಾಗಬಹುದಾದ ವಾರ್ಷಿಕ ಹೊರೆ ಎಷ್ಟು ;

(ಆ) ಉಚಿತ ೨೦೦ ಯೂನಿಟ್ ವಿದ್ಯುತ್ ಸರಬರಾಜಿನಿಂದ ಉಂಟಾಗುವ ನಷ್ಟವನ್ನು ಸರಿದೂಗಿಸಲು ವಿದ್ಯುತ್ ಕಂಪನಿಗಳಿಗೆ ಸರ್ಕಾರದಿಂದ ಯಾವ ರೀತಿ ಪರಿಹಾರವನ್ನು ನೀಡಲಾಗುತ್ತಿದೆ ? (ಸಂಪೂರ್ಣ ವಿವರ ನೀಡುವುದು)

## ೨೦೧೫ರ ನಂತರ ಅನುದಾನಿತ ಶಾಲಾ ಕಾಲೇಜುಗಳಲ್ಲಿ ಖಾಲಿ ಆಗಿರುವ ಹುದ್ದೆಗಳನ್ನು ತುಂಬಲು ಅನುಮತಿ ನೀಡುವ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :-**

೭೧ (೨೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಅನುದಾನಿತ ಪ್ರೌಢ ಶಾಲಾ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ಮರಣ ರಾಜೀನಾಮೆಯಿಂದ ಜನವರಿ ೨೦೧೬ ರಿಂದ ಮಾರ್ಚ್ ೨೦೨೪ರವರೆಗೆ ಖಾಲಿ ಆಗಿರುವ ಒಟ್ಟು ಖಾಲಿ ಹುದ್ದೆಗಳೆಷ್ಟು ; (ವಿವರ ನೀಡುವುದು)

(ಆ) ಸದರಿ ಖಾಲಿ ಹುದ್ದೆಗಳನ್ನು ತುಂಬಲು ಸರ್ಕಾರವು ಯಾವ ಕಾಲಮಿತಿಯಲ್ಲಿ ಅನುಮತಿ ನೀಡಲಾಗುತ್ತದೆ ;

(ಇ) ೨೦೧೫ಕ್ಕೂ ಮುನ್ನ ಅನುದಾನಿತ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳಲ್ಲಿ ಈಗಾಗಲೇ ಅನುಮತಿ ನೀಡಿ ವೇತನಾನುದಾನಕ್ಕೊಳಪಟ್ಟಿರುವ ಹುದ್ದೆಗಳೆಷ್ಟು ; ಇಲಾಖಾ ಅನುಮತಿ ನೀಡಿ ಇದುವರೆವಿಗೆ ವೇತನಾನುದಾನಕ್ಕೆ ಒಳಪಡಿಸದೆ ಇರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಈ) ಡಿಸೆಂಬರ್ ೨೦೧೫ರವರೆಗೆ ನಿವೃತ್ತಿ, ಮರಣ ರಾಜೀನಾಮೆಯಿಂದ ಖಾಲಿ ಆಗಿರುವ ಎಲ್ಲಾ ಖಾಲಿ ಇರುವ ಹುದ್ದೆಗಳನ್ನು ತುಂಬಲು ಯಾವಾಗ ಅನುಮತಿ ನೀಡಲಾಗುವುದು ?

## ೧೯೯೫ ರಿಂದ ೨೦೦೦ರ ಅವಧಿಯಲ್ಲಿ ಪ್ರಾರಂಭವಾಗಿರುವ ಕನ್ನಡ ಮಾಧ್ಯಮ ಶಾಲಾ ಕಾಲೇಜುಗಳಿಗೆ ವೇತನಾನುದಾನ ನೀಡುವ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :-**

೭೨ (೨೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ೧೯೯೫ ರಿಂದ ೨೦೦೦ರ ಅವಧಿಯಲ್ಲಿ ಪ್ರಾರಂಭವಾಗಿ ಸತತವಾಗಿ ನಡೆಯುತ್ತಿರುವ ಅನುದಾನರಹಿತ ಕನ್ನಡ ಮಾಧ್ಯಮದ ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಶಾಲಾ ಕಾಲೇಜುಗಳೆಷ್ಟು; (ಜಿಲ್ಲಾವಾರು ವಿಳಾಸದೊಡನೆ ವಿವರ ನೀಡುವುದು)

(ಆ) ಸದರಿ ಶಾಲಾ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರ್ಹ ಬೋಧಕ ಬೋಧಕೇತರರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಸದರಿ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೊಳಪಡಿಸಲು ಬೇಕಾಗುವ ವೆಚ್ಚವೆಷ್ಟು ; (ವಿವರ ನೀಡುವುದು)

(ಈ) ಸದರಿ ಶಾಲಾ ಕಾಲೇಜುಗಳನ್ನು ಯಾವ ಕಾಲಮಿತಿಯಲ್ಲಿ ವೇತನಾನುದಾನಕ್ಕೆ ಒಳಪಡಿಸಲಾಗುವುದು ?

## ಅನುದಾನಿತ ಐಟಿಐ ನೌಕರರಿಗೆ ಥಾಮಸ್ ವರದಿಯಂತೆ ಸೇವಾ ನಿಯಮಗಳನ್ನು ರೂಪಿಸಿ ಜಾರಿಗೊಳಿಸುವ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :-**

೭೩ (೨೮) ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಅನುದಾನಿತ ಐಟಿಐ ತರಬೇತಿ ಕೇಂದ್ರಗಳ ನೌಕರರಿಗೆ ಶ್ರೀ ಥಾಮಸ್ ನೇತೃತ್ವದ ವರದಿಯನ್ನು ಯಾವಾಗ ಆದೇಶ ಮಾಡಲಾಗಿದೆ ; (ವಿವರ ಮತ್ತು ಆದೇಶ ನೀಡುವುದು)

(ಆ) ಸದರಿಯವರಿಗೆ ಥಾಮಸ್ ನೇತೃತ್ವದ ವರದಿಯಲ್ಲಿ ನೀಡಿರುವ ಶಿಫಾರಸ್ಸುಗಳಲ್ಲಿ ಇದುವರೆವಿಗೆ ಯಾವ ಯಾವ ಶಿಫಾರಸ್ಸುಗಳನ್ನು ಜಾರಿಗೊಳಿಸಲಾಗಿದೆ ; (ವಿವರ ನೀಡುವುದು)

(ಇ) ಸದರಿ ನೌಕರರಿಗೆ ಥಾಮಸ್ ವರದಿಯ ಶಿಫಾರಸ್ಸಿನಂತೆ ಇದುವರೆವಿಗೂ ಸೇವಾ ನಿಯಮಗಳನ್ನು ರೂಪಿಸದೆ ಇರುವುದರಿಂದ ಸಾವಿರಾರು ನೌಕರರಿಗೆ ಯಾವುದೇ ಸೌಲಭ್ಯವಿಲ್ಲದೆ ಅನ್ಯಾಯವಾಗಿದ್ದು ಯಾವ ಕಾಲಮಿತಿಯಲ್ಲಿ ಸೇವಾ ನಿಯಮಗಳನ್ನು ರೂಪಿಸಲಾಗುತ್ತದೆ ? (ವಿವರ ನೀಡುವುದು)

## ರಾಜ್ಯದಲ್ಲಿನ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಮಾಹಿತಿ ಬಗ್ಗೆ

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೪ (೪೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಾಗಲಕೋಟೆ ಹಾಗೂ ವಿಜಯಪುರ ಜಿಲ್ಲೆ ಸೇರಿದಂತೆ ರಾಜ್ಯದಲ್ಲಿರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು ;

(ಆ) ಸದರಿ ಶಾಲೆಗಳಲ್ಲಿ ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಶಿಕ್ಷಕರ ಲಭ್ಯತೆ ಇದೆಯೇ ; ಲಭ್ಯತೆ ಇಲ್ಲದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಈ ಶಾಲೆಗಳಲ್ಲಿ ಅತಿಥಿ ಶಿಕ್ಷಕರು ಕರ್ತವ್ಯ ನಿವಹಿಸುತ್ತಿದ್ದರೆ ಅವರ ಗೌರವಧನ ಹೆಚ್ಚಿಸುವ ಉದ್ದೇಶ ಸರ್ಕಾರದ ಪರಿಶೀಲನೆಯಲ್ಲಿದೆಯೇ ; ಹಾಗಿದ್ದಲ್ಲಿ, ಜಿಲ್ಲಾವಾರು ಮಾಹಿತಿ ನೀಡುವುದು ?

## ಖಾಸಗಿ ಅನುದಾನಿತ ಶಾಲೆಗಳಲ್ಲಿನ ಬೋಧಕರ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :-**

೭೫ (೩೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಖಾಸಗಿ ಅನುದಾನಿತ ಶಾಲೆಗಳಲ್ಲಿ ಎಷ್ಟು ವರ್ಷದಿಂದ ಬೋಧಕರ ಹುದ್ದೆಗಳು ಖಾಲಿ ಇವೆ ; ಅವುಗಳ ಒಟ್ಟು ಸಂಖ್ಯೆ ಎಷ್ಟು ;

(ಆ) ಸರ್ಕಾರಕ್ಕೆ ಖಾಲಿ ಇರುವ ಬೋಧಕರ ಹುದ್ದೆಗಳನ್ನು ಭರ್ತಿ ಮಾಡಲು ಶಿಕ್ಷಣ ಸಂಸ್ಥೆಗಳು ಎಷ್ಟು ವರ್ಷಗಳಿಂದ ಮನವಿ ಸಲ್ಲಿಸುತ್ತಾ ಬಂದಿವೆ ;

(ಇ) ಶಿಕ್ಷಣ ಸಂಸ್ಥೆಗಳ ಮನವಿಗೆ ಇದುವರೆಗೂ ಒಪ್ಪಿಗೆ ನೀಡದೆ ಇರಲು ಕಾರಣಗಳೇನು ; ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲು ಸರ್ಕಾರ ಅನುಮತಿ ನೀಡುವುದು ?

## ಹೊಸದಾಗಿ ಬಿ.ಪಿ.ಎಲ್ ಕಾರ್ಡ್ ನೀಡುವ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :-**

೭೬ (೩೭) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಹೊಸದಾಗಿ ಬಿಪಿಎಲ್ ಪಡಿತರ ಚೀಟಿಗಾಗಿ ಸ್ವೀಕೃತಗೊಂಡಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಹೊಸದಾಗಿ ಬಿಪಿಎಲ್ ಪಡಿತರ ಚೀಟಿ ನೀಡಲು ಸರ್ಕಾರ ನಿಗದಿಪಡಿಸಿರುವ ಮಾನದಂಡಗಳೇನು ;

(ಇ) ಬಿಪಿಎಲ್ ಪಡಿತರ ಚೀಟಿಗಳನ್ನು ವಿತರಿಸಲು ಸರ್ಕಾರ ಯಾವ ಕಾಲಮಿತಯೊಳಗೆ ಕ್ರಮವಹಿಸಲಾಗುವುದು ?

## ರಾಜ್ಯವು ವಿದ್ಯುತ್ ಉತ್ಪಾದನೆಯಲ್ಲಿ ಸ್ವಾವಲಂಬನೆ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :-**

೭೭ (೩೮) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎಷ್ಟು ಪ್ರಮಾಣದಲ್ಲಿ ವಿದ್ಯುತ್ ಕೊರತೆ ಇದೆ ; (ವಿವರ ನೀಡುವುದು)

(ಆ) ವಿದ್ಯುತ್ ಸ್ವಾವಲಂಬನೆಗಾಗಿ ರಾಜ್ಯದಲ್ಲಿಯೇ ವಿದ್ಯುತ್ ಉತ್ಪಾದಿಸಲು ಯಾವ ಹೊಸ ಹೊಸ ಯೋಜನೆಗಳನ್ನು ಪ್ರಾರಂಭಿಸಲಾಗಿದೆ ; (ವಿವರ ನೀಡುವುದು)

(ಇ) ಈ ಯೋಜನೆಗಳು ಪೂರ್ಣಗೊಂಡು ರಾಜ್ಯವು ವಿದ್ಯುತ್ ಉತ್ಪಾದನೆಯಲ್ಲಿ ಸ್ವಾವಲಂಬನೆಯಾಗುವುದು ಯಾವಾಗ ?

## ಕಾಡು ಪ್ರಾಣಿಗಳಿಂದ ರೈತರ ಮೇಲೆ ಜರುಗುವ ಪ್ರಾಣ ಹಾನಿ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :-**

೭೮ (೩೯) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೨ ವರ್ಷಗಳಿಂದ ಸಾರ್ವಜನಿಕರು ಹಾಗೂ ರೈತರ ಮೇಲೆ ಕಾಡು ಪ್ರಾಣಿಗಳಿಂದ ಎಷ್ಟು ಮಾರಣಾಂತಿಕ ದಾಳಿ ಉಂಟಾಗಿದೆ ; ಜೀವ ಹಾನಿ ಉಂಟಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು ; (ವರ್ಷವಾರು ವಿವರ ನೀಡುವುದು)

(ಆ) ಈ ರೀತಿ ಮಾರಣಾಂತಿಕ ದಾಳಿಯಾಗುವುದನ್ನು ಶಾಶ್ವತವಾಗಿ ತಡೆಗಟ್ಟಲು ಸರ್ಕಾರ ಯಾವ ರೀತಿ ಕ್ರಮ ತೆಗೆದುಕೊಂಡಿದೆ ? (ವಿವರ ನೀಡುವುದು)

## ಡೆಂಗ್ಯೂ ಖಾಯಿಲೆಯು ಹೆಚ್ಚಾಗಿರುವ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :-**

೭೯ (೪೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಡೆಂಗ್ಯೂ ಖಾಯಿಲೆಂಯು ಪ್ರಕರಣಗಳು ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇದುವರೆಗೂ ಎಷ್ಟು ಪ್ರಕರಣಗಳು ದಾಖಲಾಗಿವೆ ; ಆ ಪ್ರಕರಣಗಳಲ್ಲಿ ಸಾವಿನ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಡೆಂಗ್ಯೂ ಖಾಯಿಲೆಯನ್ನು ತಡೆಗಟ್ಟಲು ಸರ್ಕಾರ ಯಾವ ಯಾವ ಕ್ರಮಕೈಗೊಂಡಿದೆ ?

## ಕೆಲವು ಶಾಲೆಗಳಿಗೆ ಹಳೆಯ ಬಿಲ್ ಪಾವತಿಸದ ಕಾರಣ ವಿದ್ಯುತ್ ಸಂಪರ್ಕ ಕಡಿತಗೊಳಿಸಿರುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿರಾದವರು) :–**

೮೦ (೧೩೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ಪ್ರಾಥಮಿಕ, ಪ್ರೌಢ ಶಾಲೆ ಹಾಗೂ ಪಿ.ಯು. ಕಾಲೇಜುಗಳಿಗೆ ಉಚಿತ ವಿದ್ಯುತ್ ಪೂರೈಸುವಂತೆ ಸರ್ಕಾರ ಆದೇಶಿಸಿದೆಯೇ ; (ಆದೇಶದ ಪ್ರತಿ ನೀಡುವುದು)

(ಆ) ಆದೇಶಿಸಿದ್ದಲ್ಲಿ, ಇತ್ತೀಚೆಗೆ ಕೆಲವು ಶಾಲೆಗಳಿಗೆ ಹಳೆಯ ಬಿಲ್ ಬಾಕಿ ಪಾವತಿಸದ ಕಾರಣ ನೀಡಿ ವಿದ್ಯುತ್ ಸಂಪರ್ಕ ಕಡಿತಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಪಾವತಿಸಲು ಪ್ರಸ್ತುತ ಬಾಕಿ ಇರುವ ಹಳೆಯ ಬಿಲ್ ಮೊತ್ತವೆಷ್ಟು ;

(ಈ) ಪ್ರಸ್ತುತ ಬಾಕಿ ಇರುವ ಹಳೆಯ ಬಿಲ್ ಪಾವತಿ ಕುರಿತು ಇಲಾಖೆಯ ನಿಲುವೇನು ;

(ಉ) ಈ ರೀತಿಯಲ್ಲಿ ಕೆಲವು ಶಾಲೆಗಳಿಗೆ ಹಳೆಯ ಬಿಲ್ ಬಾಕಿ ಪಾವತಿಸದ ಕಾರಣ ನೀಡಿ ವಿದ್ಯುತ್ ಸಂಪರ್ಕ ಕಡಿತಗೊಳಿಸಿರುವ ಪ್ರಕರಣಗಳು ಮರುಕಳಿಸದಂತೆ ತಡೆಯಲು ಇಲಾಖೆ ಇದುವರಗೆ ಏನು ಕ್ರಮವಹಿಸಿದೆ ?

## ಭ್ರೂಣಹತ್ಯೆ ದಂಧೆ ಪ್ರಕರಣಗಳು ಪದೇ ಪದೇ ಮರುಕಳಿಸುತ್ತಿರುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿರಾದವರು) :–**

೮೧ (೧೩೭೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮತ್ತೆ ಮತ್ತೆ ಭ್ರೂಣಹತ್ಯೆ ದಂಧೆ ಮರುಕಳಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಕಳೆದ ವರ್ಷ ರಾಜ್ಯದಲ್ಲಿ ವರದಿಯಾಗಿರುವ ಭ್ರೂಣಹತ್ಯೆ ದಂಧೆಯ ಪ್ರಕರಣಗಳ ಸಂಖ್ಯೆ ಎಷ್ಟು ;

(ಇ) ಸದರಿ ಪ್ರಕರಣಗಳಲ್ಲಿ ಭಾಗಿಯಾಗಿರುವವರ ವಿರುದ್ಧ ಸರ್ಕಾರ ಇದುವರೆಗೆ ಯಾವ ಕ್ರಮಗಳನ್ನು ಕೈಗೊಂಡಿದೆ ;

(ಈ) ಭ್ರೂಣಹತ್ಯೆ ದಂಧೆ ಮತ್ತೆ ಮತ್ತೆ ಮರುಕಳಿಸುತ್ತಿರುವುದನ್ನು ತಡೆಯಲು ವ್ಯವಸ್ಥಿತ ಕಾರ್ಯತಂತ್ರ ರೂಪಿಸಲು ಸರ್ಕಾರ ಇದುವರೆಗೆ ಏನು ಕ್ರಮವಹಿಸಿದೆ ;

(ಉ) ರಾಜ್ಯದಲ್ಲಿ ಮತ್ತೆ ಮತ್ತೆ ಮರುಕಳಿಸುತ್ತಿರುವ ಭ್ರೂಣಹತ್ಯೆ ದಂಧೆಗೆ ಸಂಪೂರ್ಣ ಕಡಿವಾಣ ಹಾಕಲು ಕಠಿಣ ಮತ್ತು ಪರಿಣಾಮಕಾರಿ ಕ್ರಮಗಳನ್ನು ಕೈಗೊಳ್ಳಲು ಸರ್ಕಾರ ಈ ಕೂಡಲೇ ಮುಂದಾಗುವುದೇ ?

## ಆನೆ ಶಿಬಿರಗಳಲ್ಲಿ ಸಕಾಲದಲ್ಲಿ ಚಿಕಿತ್ಸೆ ಸಿಗದೆ ಆನೆಗಳ ಸರಣಿ ಸಾವು ಸಂಭವಿಸಿರುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿರಾದವರು) :-**

೮೨ (೧೩೯) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಆನೆ ಶಿಬಿರಗಳಲ್ಲಿ ಆನೆಗಳ ಸರಣಿ ಸಾವಿಗೆ ಸಕಾಲದಲ್ಲಿ ಸೂಕ್ತ ಚಿಕಿತ್ಸೆ ದೊರೆಯದಿರುವುದು ಹಾಗೂ ಅವುಗಳ ರೋಗಗಳನ್ನು ಪತ್ತೆ ಹಚ್ಚಲು ವಿಫಲವಾಗಿರುವುದಕ್ಕೆ ಅರಣ್ಯ ಇಲಾಖೆಯಲ್ಲಿ ತಜ್ಞ ವನ್ಯಜೀವಿ ವೈದ್ಯರ ಕೊರತೆ ಇರುವುದೇ ಮೂಲ ಕಾರಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಪ್ರಸ್ತುತ ಅರಣ್ಯ ಇಲಾಖೆಯಲ್ಲಿ ಎಷ್ಟು ಪೂರ್ಣ ಪ್ರಮಾಣದ ತಜ್ಞ ವನ್ಯಜೀವಿ ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ ;

(ಇ) ಆನೆ ಹಾಗೂ ವನ್ಯಜೀವಿಗಳ ರಕ್ಷಣೆಗೆ ಅರಣ್ಯ ಇಲಾಖೆಯಲ್ಲಿ ತಜ್ಞ ವನ್ಯಜೀವಿ ವೈದ್ಯರ ವೃಂದವೊಂದನ್ನು ಸೃಷ್ಠಿಸಿ ಪೂರ್ಣ ಪ್ರಮಾಣದ ತಜ್ಞ ವನ್ಯಜೀವಿ ವೈದ್ಯರನ್ನು ನೇಮಕ ಮಾಡಿಕೊಳ್ಳಲು ಇದುವರೆಗೆ ಯಾವುದೇ ಕ್ರಮವಹಿಸದಿರಲು ಕಾರಣಗಳೇನು ;

(ಈ) ಪಶು ವೈದ್ಯಕೀಯ ಇಲಾಖೆಯಿಂದ ತಾತ್ಕಾಲಿಕ ನಿಯೋಜನೆ ಮೇಲೆ ವೈದ್ಯರನ್ನು ನೇಮಿಸಿಕೊಳ್ಳುವುದನ್ನು ಬಿಟ್ಟು, ವಿಶೇಷ ಜ್ಞಾನ, ತಾಳ್ಮೆ ಹಾಗೂ ಪ್ರಾಣಿ ಪ್ರೀತಿ ಅಗತ್ಯವಿರುವ ತಜ್ಞ ವನ್ಯಜೀವಿ ವೈದ್ಯರನ್ನು ಯಾವ ಕಾಲಮಿತಿಯೊಳಗೆ ಅರಣ್ಯ ಇಲಾಖೆ ನೇಮಿಸಿಕೊಳ್ಳಲಿದೆ ?

## ಆಂಬುಲೆನ್ಸ್‌ಗಳಿಗೆ ಜಿ.ಪಿ.ಎಸ್ ತಂತ್ರಜ್ಞಾನ ಅಳವಡಿಸುವ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿರಾದವರು) :-**

೮೩ (೧೪೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ತುರ್ತು ಸಂದರ್ಭದಲ್ಲಿ ಆಂಬುಲೆನ್ಸ್‌ಗಳು ತಡೆರಹಿತವಾಗಿ ಸಂಚರಿಸುವುದಕ್ಕೆ ಜಿ.ಪಿ.ಎಸ್ (ಗ್ಲೋಬಲ್ ಪೋಸಿಷನಿಂಗ್ ಸಿಸ್ಟಂ) ತಂತ್ರಜ್ಞಾನ ಅಳವಡಿಸುವುದನ್ನು ಕಡ್ಡಾಯ ಮಾಡಲಾಗಿದೆಯೇ; ಕಡ್ಡಾಯ ಮಾಡಿದ್ದಲ್ಲಿ, ಪ್ರಸ್ತುತ ರಾಜ್ಯದಲ್ಲಿ ಖಾಸಗಿ ಮತ್ತು ಸರ್ಕಾರದ ಎಷ್ಟು ಆಂಬುಲೆನ್ಸ್‌ಗಳು ಅಳವಡಿಸಿಕೊಂಡಿವೆ ; (ಜಿಲ್ಲಾವಾರು ಸಂಖ್ಯೆಯೊಂದಿಗೆ ಮಾಹಿತಿ ಒದಗಿಸುವುದು)

(ಆ) ಇದುವರೆಗೂ ಎಷ್ಟು ಆಂಬುಲೆನ್ಸ್‌ಗಳಿಗೆ ಜಿ.ಪಿ.ಎಸ್. (ಗ್ಲೋಬಲ್ ಪೊಸಿಷನಿಂಗ್ ಸಿಸ್ಟಂ) ತಂತ್ರಜ್ಞಾನ ಅಳವಡಿಸಲಾಗಿದೆ ಮತ್ತು ಅಳವಡಿಸಲು ಬಾಕಿ ಇರಲು ಆಂಬುಲೆನ್ಸ್‌ಗಳ ಸಂಖ್ಯೆ ಎಷ್ಟು ;

(ಇ) ಯಾವ ಕಾಲಮಿತಿಯೊಳಗೆ ಬಾಕಿ ಇರುವ ಆಂಬುಲೆನ್ಸ್‌ಗಳಿಗೆ ಜಿ.ಪಿ.ಎಸ್. (ಗ್ಲೋಬಲ್ ಪೊಸಿಷನಿಂಗ್ ಸಿಸ್ಟಂ) ತಂತ್ರಜ್ಞಾನ ಅಳವಡಿಸಲಾಗುವುದು ?

## ಸಿ.ಇ.ಟಿ. ಪರೀಕ್ಷೆಯಲ್ಲಿ ಪಠ್ಯೇತರ ಪ್ರಶ್ನೆಗಳನ್ನು ಕೇಳಲಾದ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೮೪ (೧೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೪ರ ಸಿ.ಇ.ಟಿ. ಪರೀಕ್ಷೆಗೆ ಎಷ್ಟು ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಿದ್ದರು ಪರೀಕ್ಷೆಗೆ ಹಾಜರಾದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು;

(ಆ) ಕರ್ನಾಟಕ ಪರೀಕ್ಷಾ ಪ್ರಾಧಿಕಾರ (ಕೆ.ಇ.ಎ) ನಡೆಸಿದ ಸಿ.ಇ.ಟಿ. ಪರೀಕ್ಷೆಯಲ್ಲಿ ಎಷ್ಟು ಪಠ್ಯೇತರ ಪ್ರಶ್ನೆಗಳನ್ನು ಕೇಳಲಾಗಿತ್ತು ; ಇದರಿಂದ ಉದ್ಭವಿಸಿದ ಸಮಸ್ಯೆಯನ್ನು ಹೇಗೆ ಪರಿಹರಿಸಲಾಗಿದೆ ;

(ಇ) ಪ್ರಶ್ನೆಗಳನ್ನು ಹೊಂದಿಸುವಲ್ಲಿ ಪಿ.ಯು. ಇಲಾಖೆ ಮತ್ತು ಕೆ.ಇ.ಎ ನಡುವೆ ಸಮನ್ವಯದ ಕೊರತೆಗೆ ಕಾರಣವೇನು ; ಕೈಬಿಟ್ಟ ಪಠ್ಯಕ್ರಮದಿಂದ ಪ್ರಶ್ನೆ ಪತ್ರಿಕೆ ರೂಪಿಸಿದವರು ಯಾರು ; ಯಾರಿಂದ ಈ ಎಡವಟ್ಟು ನಡೆದಿದೆ ಎಂಬ ತನಿಖೆ ನಡೆಸಲಾಗಿದೆಯೇ ;

(ಈ) ಘಟನೆಗೆ ಕಾರಣರಾದ ಅಧಿಕಾರಿಗಳನ್ನು ಸರ್ಕಾರ ಗುರುತಿಸಿದೆಯೇ ; ಅವರ ವಿರುದ್ಧ ಕೈಗೊಂಡ ಕ್ರಮಗಳೇನು ; (ವಿವರಗಳನ್ನು ನೀಡುವುದು)

(ಉ) ಭವಿಷ್ಯದಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ವಿದ್ಯಾರ್ಥಿಗಳಲ್ಲಿ ಮಾನಸಿಕ ಒತ್ತಡವಾಗದಂತೆ ಸರ್ಕಾರ ಏನು ಕ್ರಮ ಕೈಗೊಂಡಿದೆ ?

## ವಿದ್ಯುತ್ ಖರೀದಿ ಹಾಗೂ ಗ್ರಾಹಕರಿಗೆ ವಿಧಿಸುತ್ತಿರುವ ದಂಡದ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೫ (೧೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯಕ್ಕೆ ಪ್ರತಿನಿತ್ಯ ಅಗತ್ಯವಿರುವ ವಿದ್ಯುತ್ ಎಷ್ಟು ; ಪ್ರಸ್ತುತ ವಿವಿಧ ಮೂಲಗಳಿಂದ ದೊರೆಯುತ್ತಿರುವ ವಿದ್ಯುತ್ ಪ್ರಮಾಣ ಎಷ್ಟು; ಖಾಸಗಿಯುವರಿಂದ ಹಾಗೂ ಇತರೆ ಮೂಲಗಳಿಂದ ಖರೀದಿಸುತ್ತಿರುವ ವಿದ್ಯುತ್ ಪ್ರಮಾಣ ಎಷ್ಟು ;

(ಆ) ಸರ್ಕಾರ ತನ್ನ ಸ್ವಂತ ಮೂಲದಿಂದ ಉತ್ಪಾದಿಸುತ್ತಿರುವ ವಿದ್ಯುತ್‌ಗೆ ಪ್ರತೀ ಯೂನಿಟ್‌ಗೆ ತಗಲುತ್ತಿರುವ ವೆಚ್ಚ ಎಷ್ಟು ; ಖಾಸಗಿಯವರಿಂದ ಹಾಗೂ ಇತರೆ ಮೂಲಗಳಿಂದ ಖರೀದಿಸುತ್ತಿರುವ ವಿದ್ಯುತ್‌ಗೆ ಪ್ರತೀ ಯೂನಿಟ್‌ಗೆ ಪಾವತಿಸುತ್ತಿರುವ ಹಣ ಎಷ್ಟು ; ಎಷ್ಟು ವರ್ಷಗಳವರೆಗೆ ವಿದ್ಯುತ್ ಖರೀದಿಸುವ ಒಪ್ಪಂದವಾಗಿದೆ ; (ಸಮಗ್ರ ವಿವರ ನೀಡುವುದು)

(ಇ) ಗ್ರಾಹಕರಿಗೆ ಪ್ರತೀ ಯೂನಿಟ್‌ಗೆ ಹೆಸ್ಕಾಂಗಳು ವಿಧಿಸುತ್ತಿರುವ ದರ ಎಷ್ಟು ; ಈ ದರದ ಜೊತೆಗೆ ಸ್ಥಿರ ಠೇವಣಿ ದರ ಸೇರಿದಂತೆ ಗ್ರಾಹಕರ ಬಿಲ್‌ನಲ್ಲಿ ಬೇರೆ ಯಾವ ಉದ್ದೇಶಕ್ಕೆ ಎಷ್ಟು ಹಣವನ್ನು ವಿಧಿಸಲಾಗುತ್ತಿದೆ ; (ಹೆಸ್ಕಾಂವಾರು ಸಂಪೂರ್ಣ ವಿವರ ನೀಡುವುದು)

(ಈ) ಇಂಧನ ಹೊಂದಾಣಿಕೆ ವೆಚ್ಚ ಎಂದರೇನು ; ಮಾಹೆಯಾನ ಈವರೆಗೆ ಸಂಗ್ರಹವಾಗಿರುವ ಇಂಧನ ಹೊಂದಾಣಿಕೆ ವೆಚ್ಚ ಎಷ್ಟು ;

(ಉ) ಗ್ರಾಹಕರಿಗೆ ನೀಡುವ ವಿದ್ಯುತ್ ಬಿಲ್‌ನಲ್ಲಿ ವಿಧಿಸುತ್ತಿರುವ ಹೆಚ್ಚುವರಿ ಲೋಡ್ ದಂಡ ಎಂದರೇನು ; ಹೆಚ್ಚುವರಿ ಲೋಡ್ ದಂಡ ವಿಧಿಸಲು ಕಾರಣಗಳೇನು ; ಇದಕ್ಕೆ ಸಮರ್ಥನೆಗಳೇನು ; ಹೆಚ್ಚುವರಿ ಲೋಡ್ ದಂಡ ವಿಧಿಸುತ್ತಿರುವುದರಿಂದ ಗ್ರಾಹಕರಿಗೆ ಹೆಚ್ಚು ಹೊರೆಯಾಗಿದ್ದು, ಇದನ್ನು ರದ್ದುಪಡಿಸುವ ಕುರಿತು ಸರ್ಕಾರದ ನಿಲುವೇನು ?

## ಹೆಸ್ಕಾಂಗಳಿಗೆ ಪಾವತಿಸಲು ಬಾಕಿ ಇರುವ ವಿದ್ಯುತ್ ಬಿಲ್ಲಿನ ಮೊತ್ತದ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೬ (೧೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗ್ರಾಮ ಪಂಚಾಯತಿಗಳಿಂದ ಹೆಸ್ಕಾಂಗಳಿಗೆ ಪಾವತಿಸಲು ಬಾಕಿ ಇರುವ ಕುಡಿಯುವ ನೀರು ಹಾಗೂ ಬೀದಿ ದೀಪಗಳ ವಿದ್ಯುತ್ ಶಕ್ತಿ ಬಿಲ್ಲಿನ ಮೊತ್ತ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಈ ರೀತಿ ಗ್ರಾಮ ಪಂಚಾಯತಿಗಳಿಂದ ಬಾಕಿ ಇರುವ ವಿದ್ಯುತ್ ಬಿಲ್ಲನ್ನು ಸರ್ಕಾರದಿಂದ ಹೆಸ್ಕಾಂಗಳಿಗೆ ನೇರವಾಗಿ ಪಾವತಿ ಮಾಡಲಾಗಿದೆಯೇ ; ಮಾಡಲಾಗಿದ್ದರೆ, ಪಾವತಿ ಮಾಡಿರುವ ಮೊತ್ತ ಎಷ್ಟು ? (ಜಿಲ್ಲಾವಾರು ವಿವರ ನೀಡುವುದು)

## ಲಕ್ಯ ಹೋಬಳಿ ವ್ಯಾಪ್ತಿಯಲ್ಲಿ ವಿದ್ಯುತ್ ಸಮಸ್ಯೆ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೮೭ (೧೫) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಿಕ್ಕಮಗಳೂರು ವಿಧಾನಸಭಾ ಕ್ಷೇತ್ರ ಲಕ್ಯ ಹೋಬಳಿಯ ವ್ಯಾಪ್ತಿಯಲ್ಲಿ ತೀವ್ರ ವಿದ್ಯುತ್ ಸಮಸ್ಯೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ವಿದ್ಯುತ್ ಸಮಸ್ಯೆಯನ್ನು ಪರಿಹರಿಸಲು ಗಾಣದಾಳು ಗ್ರಾಮದಲ್ಲಿ ಎಂ.ಯು.ಎಸ್.ಎಸ್ ಸ್ಟೇಷನ್ ಸ್ಥಾಪಿಸಲು ಮಂಜೂರಾತಿ ದೊರೆತಿದ್ದು ಯಾವಾಗ ;

(ಇ) ಈ ಕಾಮಗಾರಿಯ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದೆಯೇ; ಪೂರ್ಣಗೊಂಡಿದ್ದರೆ, ಯಾವಾಗ ಪೂರ್ಣಗೊಂಡಿದೆ; ಕಾಮಗಾರಿ ಪ್ರಾರಂಭವಾಗದೇ ಇರಲು ಕಾರಣಗಳೇನು ;

(ಈ) ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು; ಯಾವ ಕಾಲಮಿತಿಯೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು ? (ವಿವರ ಒದಗಿಸಿ)

## ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ಪಡೆಯಲು ತಗಲುತ್ತಿರುವ ವೆಚ್ಚಗಳ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೮೮ (೧೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ಪಡೆಯಲು ತಗಲುವ ವೆಚ್ಚಗಳನ್ನು ರೈತರೇ ಭರಿಸುತ್ತಿದ್ದು, ಇಂಧನ ಇಲಾಖೆಯಿಂದ ವಿಧಿಸುತ್ತಿರುವ ದರಗಳು ಬಹಳ ತುಟ್ಟಿಯಾಗಿರುವುದರಿಂದ ರೈತರು ತೊಂದರೆಗೊಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ಕಡಿಮೆ ವೆಚ್ಚದಲ್ಲಿ ವಿದ್ಯುತ್ ಸಂಪರ್ಕ ನೀಡಲು ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಆ) ರೈತರು ವಿದ್ಯುತ್ ಪರಿವರ್ತಕಗಳಿಗೆ ಅರ್ಜಿ ಸಲ್ಲಿಸಿ ಸರ್ಕಾರ ನಿಗಧಿಪಡಿಸಿರುವ ಹಣವನ್ನು ಪಾವತಿ ಮಾಡಿ ವಿದ್ಯುತ್ ಪರಿವರ್ತಕಗಳಿಗಾಗಿ ವರ್ಷಾನುಗಟ್ಟಲೆ ಕಾಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ರೈತರ ಬೇಡಿಕೆಗೆ ಅನುಗುಣವಾಗಿ ನಿಗದಿತ ಕಾಲಾವಧಿಯಲ್ಲಿ ವಿದ್ಯುತ್ ಪರಿವರ್ತಕಗಳನ್ನು ವಿತರಣೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ರಾಮನಗರ/ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ವಿದ್ಯುತ್ ಪರಿವರ್ತಕಗಳಿಗಾಗಿ ಅರ್ಜಿ ಸಲ್ಲಿಸಿರುವ ರೈತರ ಸಂಖ್ಯೆ ಎಷ್ಟು; ಅರ್ಜಿ ಸಲ್ಲಿಸಿದ ದಿನಾಂಕ, ಈ ಪೈಕಿ ಎಷ್ಟು ರೈತರಿಗೆ ವಿದ್ಯುತ್ ಪರಿವರ್ತಕಗಳನ್ನು ವಿತರಿಸಲಾಗಿದೆ ; ಯಾವಾಗ ವಿತರಿಸಲಾಗಿದೆ ; ಬಾಕಿ ಉಳಿದಿರುವ ಅರ್ಜಿಗಳೆಷ್ಟು? (ಸಂಪೂರ್ಣ ವಿವರ ನೀಡುವುದು)

## NEET ಪರೀಕ್ಷೆಯಲ್ಲಿ ನಡೆದಿರುವ ಅಕ್ರಮಗಳ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೮೯ (೧೭) ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ವೈದ್ಯಕೀಯ ಕಾಲೇಜುಗಳ ಸಂಖ್ಯೆ ಎಷ್ಟು; ಆವುಯಾವುವು ಈ ಕಾಲೆಜುಗಳಲ್ಲಿ ಲಭ್ಯವಿರುವ ಯು.ಜಿ.ಸೀಟ್‌ಗಳ ಸಂಖ್ಯೆ ಎಷ್ಟು; ಈ ಪೈಕಿ ಸರ್ಕಾರಿ ಕೋಟ ಮತ್ತು ಮ್ಯಾನೇಜ್‌ಮೆಂಟ್ ಕೋಟ ಸೀಟ್‌ಗಳು ಎಷ್ಟು ; (ಕಾಲೇಜುವಾರು ಮಾಹಿತಿ ನೀಡುವುದು)

(ಆ) ೨೦೧೭-೧೮ನೇ ಸಾಲಿನಿಂದ NEET ಪರೀಕ್ಷೆ ಮೂಲಕ ಸರ್ಕಾರಿ ಕೋಟದಡಿ ಈ ಕಾಲೇಜುಗಳಲ್ಲಿ ಹಂಚಿಕೆಯಾದ ಸೀಟ್‌ಗಳೆಷ್ಟು; ಸರ್ಕಾರಿ ಕೋಟದಡಿ ಹಂಚಿಕೆಯಾದ ಸೀಟುಗಳ ಪೈಕಿ ಕಾಲೇಜುಗಳಿಗೆ ದಾಖಲಾದ ವಿದ್ಯಾರ್ಥಿಗಳಲ್ಲಿ ಕರ್ನಾಟಕದ ವಿದ್ಯಾರ್ಥಿಗಳೆಷ್ಟು ಮತ್ತು ಹೊರ ರಾಜ್ಯದ ವಿದ್ಯಾರ್ಥಿಗಳೆಷ್ಟು; (ವರ್ಷವಾರು ಮತ್ತು ಕಾಲೇಜುವಾರು ಮಾಹಿತಿ ನೀಡುವುದು)

(ಇ) ಈ ಕಾಲೇಜುಗಳಿಗೆ ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರಗಳಿಂದ ಲಭ್ಯವಾಗಿರುವ ಸವಲತ್ತುಗಳೇನು ; (ಸಂಪೂರ್ಣ ವಿವರ ನೀಡುವುದು)

(ಈ) NEET ಪರೀಕ್ಷೆಯ ಷರತ್ತುಗಳನ್ನು ಒಪ್ಪಲೇಬೇಕಾದ ಅನಿವಾರ್ಯತೆ ರಾಜ್ಯ ಸರ್ಕಾರಕ್ಕಿದೆಯೇ ; ಇದ್ದಲ್ಲಿ, ಈ ಸಂಬಂಧ ರೂಪಿಸಲಾಗಿರುವ ಕಾನೂನುಗಳ ಮಾಹಿತಿ ನೀಡುವುದು ; ಇಲ್ಲದಿದ್ದಲ್ಲಿ, ನೀಟ್ ಪರೀಕ್ಷೆಯನ್ನು ದಿಕ್ಕರಿಸಿ ನಮ್ಮ ರಾಜ್ಯದಲ್ಲಿ ಸರ್ಕಾರಿ ಕೋಟದಡಿ ಲಭ್ಯವಿರುವ ಸೀಟ್‌ಗಳನ್ನು ನಮ್ಮ ರಾಜ್ಯದ ವಿದ್ಯಾರ್ಥಿಗಳಿಗಷ್ಟೆ ಮೀಸಲಿರಿಸಲು ಸರ್ಕಾರವು ಯಾವುದಾದರೂ ಯೋಜನೆ ರೂಪಿಸಲು ಉದ್ದೇಶಿಸಿದೆಯೇ ? (ಸಂಪೂರ್ಣ ಮಾಹಿತಿ ನೀಡುವುದು)

## ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಮೂಲ ಸೌಕರ್ಯ ಒದಗಿಸುವ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೦ (೧೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಮನಗರ ಜಿಲ್ಲೆಯಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು ; ಇಲ್ಲಿ ಲಭ್ಯವಿರುವ ಕೋರ್ಸ್‌ಗಳು ಯಾವುವು ; ಇಲ್ಲಿ ಲಭ್ಯವಿರುವ ಕೊಠಡಿಗಳ ಸಂಖ್ಯೆ ಎಷ್ಟು; ಈ ಕಾಲೇಜುಗಳು ಸ್ವಂತ ಕಟ್ಟಡಗಳನ್ನು ಹೊಂದಿವೆಯೇ ; ಹೊಂದಿದ್ದಲ್ಲಿ, ಇವು ಸುಸ್ಥಿತಿಯಲ್ಲಿವೆಯೇ ; (ಈ ಕಾಲೇಜುಗಳಿಗೆ ಕಳೆದ ೫ ವರ್ಷಗಳಲ್ಲಿ ದಾಖಲಾಗಿರುವ ವಿದ್ಯಾರ್ಥಿ-ವಿದ್ಯಾರ್ಥಿನಿಯರ ಸಂಖ್ಯೆ ಮತ್ತು ವರ್ಷವಾರು ಫಲಿತಾಂಶಗಳ ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ರಾಮನಗರ ಜಿಲ್ಲೆಯಲ್ಲಿ ಕೊಠಡಿಗಳ ಕೊರತೆ ಇರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು; ಇಂತಹ ಕಾಲೇಜುಗಳನ್ನು ನಡೆಸಲು ಬೇರೆ ವ್ಯವಸ್ಥೆ ಕಲ್ಪಿಸಲಾಗಿದೆಯೇ ; (ಕಾಲೇಜುವಾರು ಮಾಹಿತಿ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ರಾಮನಗರ ಜಿಲ್ಲೆಯಲ್ಲಿ ಕೊಠಡಿಗಳ ಕೊರತೆ ಇರುವ ಎಷ್ಟು ಕಾಲೇಜುಗಳಲ್ಲಿ ಕೊಠಡಿ ನಿರ್ಮಾಣ ದುರಸ್ಥಿ ಮಾಡಲಾಗಿದೆ ; ಇದಕ್ಕಾಗಿ ಖರ್ಚು ಮಾಡಲಾಗಿರುವ ಅನುದಾನವೆಷ್ಟು ; (ಕಾಲೇಜುವಾರು ಮಾಹಿತಿ ನೀಡುವುದು)

(ಈ) ರಾಮನಗರ ಜಿಲ್ಲೆಯಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ ಮತ್ತು ಬೋಧಕೇತರ ನೌಕರರ ಹುದ್ದೆಗಳೆಷ್ಟು ; ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ಕಾಲೇಜುಗಳವಾರು ಮಾಹಿತಿ ನೀಡುವುದು)

## ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಮೂಲಸೌಕರ್ಯ ಒದಗಿಸುವ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೯೧ (೨೯) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಮನಗರ ಜಿಲ್ಲೆಯಲ್ಲಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು; ಇಲ್ಲಿ ಲಭ್ಯವಿರುವ ಕೋರ್ಸ್‌ಗಳು ಯಾವುವು; ಇಲ್ಲಿ ಲಭ್ಯವಿರುವ ಕೊಠಡಿಗಳ ಸಂಖ್ಯೆ ಎಷ್ಟು ; ಈ ಕಾಲೇಜುಗಳಿಗೆ ಕಳೆದ ೫ ವರ್ಷಗಳಲ್ಲಿ ದಾಖಲಾಗಿರುವ ವಿದ್ಯಾರ್ಥಿ–ವಿದ್ಯಾರ್ಥಿನಿಯರ

ಸಂಖ್ಯೆ ಮತ್ತು ವರ್ಷವಾರು ಫಲಿತಾಂಶಗಳ ವಿವರ ; ಈ ಕಾಲೇಜುಗಳು ಸ್ವಂತ ಕಟ್ಟಡಗಳನ್ನು ಹೊಂದಿವೆಯೇ ; ಹೊಂದಿದ್ದಲ್ಲಿ, ಇವು ಸುಸ್ಥಿತಿಯಲ್ಲಿವೆಯೇ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ರಾಮನಗರ ಜಿಲ್ಲೆಯಲ್ಲಿ ಕೊಠಡಿಗಳ ಕೊರತೆ ಇರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು; ಇಂತಹ ಕಾಲೇಜುಗಳನ್ನು ನಡೆಸಲು ಬೇರೆ ವ್ಯವಸ್ಥೆ ಕಲ್ಪಿಸಲಾಗಿದೆಯೇ ; (ಕಾಲೇಜುವಾರು ಮಾಹಿತಿ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ರಾಮನಗರ ಜಿಲ್ಲೆಯಲ್ಲಿ ಕೊಠಡಿಗಳ ಕೊರತೆ ಇರುವ ಎಷ್ಟು ಕಾಲೇಜುಗಳಲ್ಲಿ ಕೊಠಡಿ ನಿರ್ಮಾಣ/ ರಿಪೇರಿ ಮಾಡಲಾಗಿದೆ ; ಇದಕ್ಕಾಗಿ ಖರ್ಚು ಮಾಡಲಾಗಿರುವ ಅನುದಾನವೆಷ್ಟು ; (ಕಾಲೇಜುವಾರು ಮಾಹಿತಿ ನೀಡುವುದು)

(ಈ) ರಾಮನಗರ ಜಿಲ್ಲೆಯಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಖಾಲಿ ಇರುವ ಭೋದಕ ಮತ್ತು ಬೋಧಕೇತರ ನೌಕರರ ಹುದ್ದೆಗಳೆಷ್ಟು ; ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ಕಾಲೇಜುವಾರು ಮಾಹಿತಿ ನೀಡುವುದು)

## ರಾಮನಗರ ಜಿಲ್ಲಾ ಆಸ್ಪತ್ರೆಯಲ್ಲಿ ಮೂಲಸೌಕರ್ಯ ಮತ್ತು ತಜ್ಞ ವೈದ್ಯರ ಕೊರತೆ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೯೨ (೩೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಮನಗರ ಜಿಲ್ಲಾ ಆಸ್ಪತ್ರೆಗೆ ಮಂಜೂರಾದ ತಜ್ಞ ವೈದ್ಯರು, ನರ್ಸ್‌ಗಳು, ಪ್ರಯೋಗಾಲಯ ತಂತ್ರಜ್ಞರು, ಮತ್ತು ಇತರೆ ಸಿಬ್ಬಂದಿಗಳ ಹುದ್ದೆಗಳೆಷ್ಟು; ಹಾಲಿ ತುಂಬಿರುವ ಹುದ್ದೆಗಳೆಷ್ಟು; ಖಾಲಿ ಇರುವ ಹುದ್ದೆಗಳೆಷ್ಟು ; (ಸಂಪೂರ್ಣ ವಿವರ ನೀಡುವುದು)

(ಆ) ರಾಮನಗರ ಜಿಲ್ಲಾ ಆಸ್ಪತ್ರೆಯಲ್ಲಿ ತಜ್ಞ ವೈದ್ಯರು, ನರ್ಸ್‌ಗಳು, ಪ್ರಯೋಗಾಲಯ ತಂತ್ರಜ್ಞರು, ಮತ್ತು ಇತರೆ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ವೈದ್ಯಕೀಯ ಸೇವೆ ಬಲವರ್ಧನೆಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ರಾಮನಗರ ಜಿಲ್ಲಾ ಆಸ್ಪತ್ರೆಯಲ್ಲಿ ಕಳೆದ ೩ ವರ್ಷಗಳಲ್ಲಿ ದಾಖಲಾದ ಒಳರೋಗಿ ಮತ್ತು ಹೊರರೋಗಿಗಳ ಸಂಖ್ಯೆ ಎಷ್ಟು ; (ವಿವರಗಳನ್ನು ನೀಡುವುದು)

(ಈ) ಅಪಘಾತ, ಹೃದ್ರೋಗ, ಕ್ಯಾನ್ಸರ್, ಮೂತ್ರಪಿಂಡ ಖಾಯಿಲೆಗಳ ತುರ್ತು ಚಿಕಿತ್ಸೆಗೆ ಜಿಲ್ಲಾ ಆಸ್ಪತ್ರೆಯಲ್ಲಿ ಅಗತ್ಯ ಮೂಲಸೌಕರ್ಯ ಮತ್ತು ತಜ್ಞ ವೈದ್ಯರುಗಳ ಕೊರತೆ ಇರುವುದರಿಂದ ಸಾರ್ವಜನಿಕರು ಬಹುತೇಕ ಖಾಸಗಿ ಆಸ್ಪತ್ರೆಗಳನ್ನು ಅವಲಂಭಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇಂತಹ ಖಾಯಿಲೆಗಳ ತುರ್ತು ಚಿಕಿತ್ಸೆಯನ್ನು ಜಿಲ್ಲಾ ಆಸ್ಪತ್ರೆಯಲ್ಲೇ ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## ಅಕ್ಷರ ದಾಸೋಹಕ್ಕೆ ಅಕ್ಕಿ ಸರಬರಾಜು ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೩ (೨೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಾಲೆಗಳು ಪ್ರಾರಂಭವಾಗಿ ತಿಂಗಳುಗಳೇ ಕಳೆದರೂ ಇದುವರೆಗೂ ಅಕ್ಷರ ದಾಸೋಹಕ್ಕೆ ಅಕ್ಕಿ ಬೇಳೆಯನ್ನು ಶಾಲೆಗಳಿಗೆ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ೨೦೨೪–೨೫ರ ಶೈಕ್ಷಣಿಕ ಸಾಲಿನಿಂದ ಅಕ್ಷರ ದಾಸೋಹವನ್ನು ನಿಲ್ಲಿಸುವ ಯೋಚನೆ ಸರ್ಕಾರದ ಗಮನದಲ್ಲಿದೆಯೇ ;

(ಆ) ಶಾಲೆಗಳಿಗೆ ಅಕ್ಕಿ ಮತ್ತು ಬೇಳೆ ಸರಬರಾಜು ಮಾಡಲು ಟೆಂಡರ್ ಕರೆಯಲಾಗಿದೆಯೇ ; ಸರ್ಕಾರವು ಯಾವ ಯಾವ ವಸ್ತುಗಳನ್ನು ಅಕ್ಷರ ದಾಸೋಹಕ್ಕಾಗಿ ಸರಬರಾಜು ಮಾಡುತ್ತದೆ ; (ಪ್ರತಿಯೊಂದು ವಸ್ತುಗಳ ಹೆಸರಿನೊಂದಿಗೆ ವಿವರ ನೀಡುವುದು)

(ಇ) ಅಕ್ಷರ ದಾಸೋಹಕ್ಕಾಗಿ ಸರ್ಕಾರವು ಖರೀದಿಸುವ ಅಕ್ಕಿ, ಬೇಳೆ ಹಾಗೂ ಇತರ ವಸ್ತುಗಳಿಗೆ ಪ್ರತಿ ಕೆ.ಜಿ.ಗೆ ನಿಗದಿಪಡಿಸಿದ ದರವೆಷ್ಟು; (ವಸ್ತುವಾರು ವಿವರ ನೀಡುವುದು)

(ಈ) ಒಂದು ಶೈಕ್ಷಣಿಕ ವರ್ಷಕ್ಕೆ ಅಕ್ಷರ ದಾಸೋಹಕ್ಕಾಗಿ ಸರ್ಕಾರವು ಎಷ್ಟು ಟನ್ ಅಕ್ಕಿ, ಬೇಳೆ ಹಾಗೂ ಇತರ ವಸ್ತುಗಳನ್ನು ಖರೀದಿಸುತ್ತದೆ ? (ಸರಬರಾಜುದಾರರು ಮತ್ತು ಸಾಗಾಣಿಕೆದಾರರ ಹೆಸರು ಮತ್ತು ಸಂಪೂರ್ಣ ವಿವರದೊಂದಿಗೆ ವಸ್ತುವಾರು ವಿವರ ನೀಡುವುದು)

## ನರ್ಸಿಂಗ್ ಕಾಲೇಜು ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೪ (೨೩) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ನರ್ಸಿಂಗ್ ಕಾಲೇಜುಗಳಿವೆ ; ಇವುಗಳಲ್ಲಿ ಎಷ್ಟು ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ದೊರತಿದೆ ; ಅವುಗಳಲ್ಲಿ ಪ್ರಸ್ತುತ ಎಷ್ಟು ವಿದ್ಯಾರ್ಥಿಗಳು ವಿದ್ಯಾಭ್ಯಾಸ ಮಾಡುತ್ತಿದ್ದಾರೆ ;

(ಆ) ಒಂದು ಆಸ್ಪತ್ರೆಯ ಅಧೀನದಲ್ಲಿ ಎಷ್ಟು ನರ್ಸಿಂಗ್ ಕಾಲೇಜುಗಳನ್ನು ಪ್ರಾರಂಭಿಸಬಹುದು ;

(ಇ) ಒಂದೇ ಕಟ್ಟಡದಲ್ಲಿ ಎರಡು ನರ್ಸಿಂಗ್ ಕಾಲೇಜುಗಳನ್ನು ನಡೆಸಲು ಅವಕಾಶವಿದೆಯೇ ;

(ಈ) ೨೦೨೪-೨೫ನೇ ಸಾಲಿನಲ್ಲಿ ಎಷ್ಟು ಹೊಸ ನರ್ಸಿಂಗ್ ಕಾಲೇಜುಗಳನ್ನು ಪ್ರಾರಂಭಿಸಲು ಅನುಮತಿ ನೀಡಲಾಗಿದೆ ;

(ಉ) ಕಳೆದ ಎರಡು ವರ್ಷಗಳಲ್ಲಿ ಎಷ್ಟು ನರ್ಸಿಂಗ್ ಕಾಲೇಜುಗಳನ್ನು ಮೂಲ ಸೌಕರ್ಯಗಳಿಲ್ಲ ಎಂಬ ಕಾರಣಕ್ಕಾಗಿ ಅನುಮತಿಯನ್ನು ಹಿಂಪಡೆದು ಮುಚ್ಚಲಾಗಿದೆ ? (ಜಿಲ್ಲಾವಾರು ವಿವರ ನೀಡುವುದು)

## ಉಚಿತ ವಿದ್ಯುತ್ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೫ (೨೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದೀನದಯಾಳ ಉಪಾಧ್ಯಾಯ ಗ್ರಾಮಜ್ಯೋತಿ ಯೋಜನೆಯಡಿಯಾಲ್ಲಿ ರಾಜ್ಯದ ಎಷ್ಟು ಹಳ್ಳಿಗಳಿಗೆ ವಿದ್ಯುತ್ ಒದಗಿಸಲಾಗಿದೆ ; ಈ ಯೋಜನೆಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಎಷ್ಟು ಅನುದಾನ ನೀಡಿವೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಸೌಭಾಗ್ಯ ಯೋಜನೆಯಡಿಯಲ್ಲಿ ಎಷ್ಟು ಮನೆಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಗೃಹ ಜ್ಯೋತಿ ಯೋಜನೆಯ ಅನ್ವಯ ಎಷ್ಟು ಮನೆಗಳಿಗೆ ಉಚಿತ ವಿದ್ಯುತ್ ನೀಡಲಾಗುತ್ತಿದೆ ; ಎಷ್ಟು ಯೂನಿಟ್ ವಿದ್ಯುತ್ ನೀಡಲಾಗುತ್ತದೆ ; ಅದಕ್ಕೆ ತಗಲುವ ಒಟ್ಟು ವೆಚ್ಚ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ಗೃಹ ಜ್ಯೋತಿ ಯೋಜನೆಯ ಅನ್ವಯ ನೀಡಲಾಗುವ ಉಚಿತ ವಿದ್ಯುತ್‌ನ್ನು ಸರ್ಕಾರವು ಒಂದು ಯುನಿಟ್‌ಗೆ ಯಾವ ಬೆಲೆಯಲ್ಲಿ ಖರೀದಿಸುತ್ತಿದೆ ? (ವಿವರ ನೀಡುವದು)

## ಮರದ ಮಿಲ್ಲುಗಳ ಪ್ರಾರಂಭಕ್ಕೆ ಸಲ್ಲಿಸಬೇಕಾದ ದಾಖಲೆ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೯೬ (೨೫) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ನವ ಮಂಗಳೂರು ಬಂದರಿನ ನಿರಾಶ್ರಿತರಿಗೆ ಆಶ್ರಯ ಕಲ್ಪಿಸುವ ನಿಟ್ಟಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಕೃಷ್ಣಾಪುರ ಮತ್ತು ಕಾಟಿಪಳ್ಳ ಗ್ರಾಮವನ್ನು ಗುರುತಿಸಿರುವುದು ಅರಣ್ಯ ಇಲಾಖೆಯ ಗಮನಕ್ಕೆ ಬಂದಿದೆಯೇ ; ವಸತಿ ಪ್ರದೇಶದ ಮರದ ಮಿಲ್ಲುಗಳನ್ನು ನಡೆಸಲು ನಿಯಮಾನುಸಾರ ಅನುಮತಿ ಇಲ್ಲದಿದ್ದಲ್ಲಿ, ಈ ನಿರಾಶ್ರಿತರಿಗೆ ಇರುವ ಗ್ರಾಮದಲ್ಲಿ ಮರದ ಮಿಲ್ಲುಗಳನ್ನು ಸ್ಥಾಪಿಸಲು ಯಾವ ನಿಯಮದ ಅನ್ವಯ ಅನುಮತಿಸಲಾಗಿದೆ ; ಮರದ ಮಿಲ್ಲುಗಳನ್ನು ಪ್ರಾರಂಭಿಸಲು ಸಲ್ಲಿಸಬೇಕಾದ ದಾಖಲೆಗಳಾವುವು ; (ವಿವರ ನೀಡುವುದು)

(ಆ) ಈ ವಸತಿ ಪ್ರದೇಶವು ಕಾಯ್ದಿರಿಸಿದ ಅರಣ್ಯ ಪ್ರದೇಶದಿಂದ ಅಥವಾ ಸಂರಕ್ಷಿತ ಅರಣ್ಯ ಪ್ರದೇಶದಿಂದ ಎಷ್ಟು ಕಿ.ಮೀ.ದೂರದಲ್ಲಿದೆ; ಈ ಪ್ರದೇಶದ ೧೦ ಕಿ.ಮೀ ವ್ಯಾಪ್ತಿಯಲ್ಲಿರುವ ಕಾಯ್ದಿರಿಸಿದ ಅರಣ್ಯ ಪ್ರದೇಶ ಅಥವಾ ಸಂರಕ್ಷಿತ ಅರಣ್ಯ ಪ್ರದೇಶಗಳಾವುವು ; (ಹೆಸರಿನೊಂದಿಗೆ ಮಾಹಿತಿ ನೀಡುವುದು)

(ಇ) ಕೃಷ್ಣಾಪುರದ ೫ನೇ ಬ್ಲಾಕಿನಲ್ಲಿರುವ ಆಶಾ ಮರದ ಮೀಲ್ಲು ರಸ್ತೆಯ ಇಕ್ಕೆಲಗಳಲ್ಲಿ ಮರದ ದಿಮ್ಮಿಗಳನ್ನು ರಾಶಿ ರಾಶಿ ಹಾಕುವ ಮೂಲಕ ಸಾರ್ವಜನಿಕರಿಗೆ ಮತ್ತು ವಾಹನ ಚಾಲಕರಿಗೆ ತೊಂದರೆಯುಂಟು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ಇಲಾಖೆ ಕೈಗೊಂಡ ಕ್ರಮಗಳೇನು ;

(ಈ) ಕೃಷ್ಣಾಪುರದ ೫ನೇ ಬ್ಲಾಕಿನಲ್ಲಿರುವ ಮರದ ಮಿಲ್ಲು ವಸತಿ ಪ್ರದೇಶದಲ್ಲಿದೆಯೇ ; ನವ ಮಂಗಳೂರು ಬಂದರಿನ ನಿರಾಶ್ರಿತರಿಗೆ ಆಶ್ರಯ ಕಲ್ಪಿಸುವ ನಿಟ್ಟಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಕೃಷ್ಣಾಪುರ ಮತ್ತು ಕಾಟಿಪಳ್ಳ ಗ್ರಾಮವನ್ನು ಗುರುತಿಸಿರುವುದರ ಬಗ್ಗೆ ಅರಣ್ಯ ಇಲಾಖೆಯ ನಿಲುವೇನು ? (ವಿವರ ನೀಡುವುದು)

## ಕಾಣಿಗನ ಹಳ್ಳದಿಂದ ದರೋಜಿ ಕೆರೆಗೆ ರಾಸಾಯನಿಕಯುಕ್ತ ನೀರು ಸೇರಿ ಕಲುಷಿತವಾಗುತ್ತಿರುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೯೭ (೦೬) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಳ್ಳಾರಿ ಜಿಲ್ಲೆ ತೊರಣಗಲ್ಲು ಭಾಗದಲ್ಲಿನ ಕಾಣಿಗನ ಹಳ್ಳದಲ್ಲಿ ಬೇಸಿಗೆ ಸಂದರ್ಭದಲ್ಲೂ ಸಹ ನೀರು ಹರಿಯುತ್ತಿದ್ದು, ಇದು

ದರೋಜಿ ಕೆರೆಗೆ ಸೇರುತ್ತಿದ್ದು, ಈ ಹಳ್ಳದಲ್ಲಿ ರಾಸಾಯನಿಕಯುಕ್ತ ನೀರು ಹರಿಯುತ್ತಿದ್ದು, ಇದರಿಂದ ಜಲಚರಗಳು ಸಾಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದಕ್ಕೆ ಕೈಗೊಂಡ ಕ್ರಮಗಳೇನು ;

(ಆ) ಈ ರಾಸಾಯನಿಕಯುಕ್ತ ನೀರಿನಿಂದ ದರೋಜಿ ಕೆರೆ ಕಲುಷಿತವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದಕ್ಕೆ ಕೈಗೊಂಡ ಕ್ರಮಗಳೇನು ; ಈ ಭಾಗದ ಜಲಮೂಲಗಳನ್ನು ಪರೀಕ್ಷಿಸಲು ತೆಗೆದುಕೊಂಡ ಕ್ರಮಗಳೇನು ; (ಮಾಹಿತಿ ಒದಗಿಸುವುದು)

(ಇ) ದರೋಜಿ ಕೆರೆಯನ್ನು ಶುದ್ಧೀಕರಣ ಮಾಡಿ ಜನ, ಜಾನುವಾರುಗಳಿಗೆ ಯೋಗ್ಯ ನೀರನ್ನು ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು ? (ಮಾಹಿತಿ ನೀಡುವುದು)

## ಬಳ್ಳಾರಿ–ವಿಜಯನಗರ ಜಿಲ್ಲೆಗಳಲ್ಲಿ ರಕ್ತನಿಧಿ (Blood Bank) ಗಳನ್ನು ಸ್ಥಾಪಿಸುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೮ (೦೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿರುವ ರಕ್ತನಿಧಿಗಳ ಮತ್ತು ರಕ್ತ ಸಂಗ್ರಹಣ ಕೇಂದ್ರಗಳ ಸಂಖ್ಯೆ ಎಷ್ಟು; ಅವುಗಳ ಹೆಸರು ಮತ್ತು ಸ್ಥಳ, ಇವುಗಳಲ್ಲಿ ಸರ್ಕಾರಿ ಮತ್ತು ಖಾಸಗಿ ಕೇಂದ್ರಗಳ ಮಾಹಿತಿ ನೀಡುವುದು ;

(ಆ) ಈ ಸರ್ಕಾರಿ ರಕ್ತನಿಧಿಗಳು ಯಾವ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿವೆ; ರಕ್ತ ಸಂಗ್ರಹಣೆಗಾಗಿ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ; (ಮಾಹಿತಿ ಒದಗಿಸುವುದು)

(ಇ) ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿರುವ ರಕ್ತ ಸಂಗ್ರಹಣೆ ಮತ್ತು ರಕ್ತ ನಿಧಿಗಳು ಸಮರ್ಪಕವಾಗಿವೆಯೇ; ಈ ಜಿಲ್ಲೆಗಳಿಗೆ ನೂತನ ರಕ್ತ ನಿಧಿಗಳನ್ನು ಸ್ಥಾಪಿಸುವ ಯೋಜನೆಗಳನ್ನು ಹಾಕಿಕೊಳ್ಳಲಾಗಿದೆಯೇ ? (ವಿವರಗಳೊಂದಿಗೆ ಮಾಹಿತಿ ನೀಡುವುದು)

## ಸರ್ಕಾರಿ ಶಾಲೆಯ ಶಿಕ್ಷಕರುಗಳಿಗೆ ಹೊಸ ವಿಷಯಗಳ ಕಾರ್ಯಗಾರ ಮತ್ತು ಪರೀಕ್ಷೆ ನಡೆಸುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೯೯ (೦೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಶಿಕ್ಷಣ ಇಲಾಖೆಯ ಶಾಲಾ ಶಿಕ್ಷಕರುಗಳು ಅಪ್‌ಡೇಟ್ ಇಲ್ಲದೆ ಸರ್ಕಾರಿ ಶಾಲೆಯ ವಿದ್ಯಾರ್ಥಿಗಳಿಗೆ ಹೊಸ ವಿಷಯಗಳನ್ನು ತಿಳಿಸಲಾಗದೆ ಗ್ರಾಮೀಣ ಭಾಗದ ವಿದ್ಯಾರ್ಥಿಗಳು ನಗರ ಭಾಗದ ಖಾಸಗಿ ಶಾಲೆಗಳ ವಿದ್ಯಾರ್ಥಿಗಳಿಗಿಂತ ಹಿಂದುಳಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಶಿಕ್ಷಣ ಇಲಾಖೆಯ ಶಾಲಾ ಶಿಕ್ಷಕರುಗಳಿಗೆ ಅಪ್‌ಡೇಟ್ ಆಗಲು ಕಾಲ ಕಾಲಕ್ಕೆ ಯಾವುದಾದರೂ ಹೊಸ ವಿಷಯಗಳ ಕುರಿತು

ಪರೀಕ್ಷೆಯನ್ನು ಗೊತ್ತುಪಡಿಸಿ ಪಾಸು ಮಾಡುವಂತೆ ಸೂಚಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; ಆ ಮೂಲಕ ಸರ್ಕಾರಿ ಶಾಲೆಯ ವಿದ್ಯಾರ್ಥಿಗಳಿಗೆ ಹೆಚ್ಚಿನ ಅನುಕೂಲವಾಗುವಂತೆ ಮಾಡಲು ಇಲಾಖೆಯು ಹಾಕಿಕೊಂಡ ಕ್ರಮಗಳೇನು ;

(ಇ) ಶಿಕ್ಷಕರುಗಳ ಜ್ಞಾನವನ್ನು ಹೆಚ್ಚಿಸಲು ಜಿಲ್ಲಾ ಮಟ್ಟಗಳಲ್ಲಿ ಹೊಸ-ಹೊಸ ವಿಷಯಗಳ/ಸಾಮಾನ್ಯ ಜ್ಞಾನದ ಕುರಿತು ಕಾರ್ಯಗಾರಗಳನ್ನು ನಡೆಸಿ ಪರೀಕ್ಷೆಗಳನ್ನು ನಡೆಸಲು ಇಲಾಖೆಯು ಕೈಗೊಂಡಿರುವ ಕ್ರಮಗಳೇನು ? (ಮಾಹಿತಿ ಒದಗಿಸುವುದು)

## ಅನುದಾನ ರಹಿತ ಖಾಸಗಿ ಶಾಲೆಗಳನ್ನು ಸಮಯಕ್ಕೆ ಸರಿಯಾಗಿ ನವೀಕರಣ ಮಾಡುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೦೦ (೦೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅನುದಾನ ರಹಿತ ಖಾಸಗಿ ಶಾಲೆಗಳು ಸೂಕ್ತ ಸಮಯಕ್ಕೆ ನವೀಕರಣಗೊಳ್ಳದೆ ವಿದ್ಯಾರ್ಥಿಗಳಿಗೆ, ಪೋಷಕರಿಗೆ ಸಾಕಷ್ಟು ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದ್ದಲ್ಲಿ, ಸರಿಯಾದ ಸಮಯಕ್ಕೆ ನವೀಕರಣ ಮಾಡಿಸಿಕೊಳ್ಳುವಂತೆ ಖಾಸಗಿ ಶಾಲೆಗಳಿಗೆ ನೀಡಲಾದ ಸೂಚನೆಗಳೇನು ; (ವಿವರಗಳೊಂದಿಗೆ ಮಾಹಿತಿ ಒದಗಿಸುವುದು)

(ಆ) ಈ ನಿಟ್ಟಿನಲ್ಲಿ ಅನುದಾನ ರಹಿತ ಖಾಸಗಿ ಶಾಲೆಗಳನ್ನು ಸೂಕ್ತ ಸಮಯಕ್ಕೆ ನವೀಕರಣಗೊಳಿಸಿ ಆ ಮೂಲಕ ವಿದ್ಯಾರ್ಥಿಗಳ ಹಿತ ಕಾಯಲು ಸರ್ಕಾರದಿಂದ ಯಾವ ಕ್ರಮಕೈಗೊಳ್ಳಲಾಗಿದೆ ? (ಮಾಹಿತಿ ಒದಗಿಸುವುದು)

## ಅರಣ್ಯ ಇಲಾಖೆಯಲ್ಲಿ ಪಶು ವೈದ್ಯರುಗಳನ್ನು ನೇಮಕ ಮಾಡಿಕೊಳ್ಳುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೦೧ (೧೦) ಮಾನ್ಯ ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಅರಣ್ಯ ಇಲಾಖೆಯಲ್ಲಿರುವ ಪಶುವೈದ್ಯರ ಸಂಖ್ಯೆ ಎಷ್ಟು; ಇವರುಗಳನ್ನು ಯಾವ ಯಾವ ಕೆಲಸದ ಮೇಲೆ ನಿಯುಕ್ತಿಗೊಳಿಸಲಾಗಿದೆಯೇ ; ಇವರುಗಳನ್ನು ಯಾವಾಗ ಮತ್ತು ಯಾವ ನಿಯಮಾವಳಿ ರೀತ್ಯಾ ನೇಮಕ ಮಾಡಿಕೊಳ್ಳಲಾಗಿದೆ ;

(ಆ) ನೇಮಕಗೊಂಡ ಪಶುವೈದ್ಯರುಗಳಿಗೆ ಕಾಡು ಪ್ರಾಣಿಗಳಿಗೆ ಚಿಕಿತ್ಸೆ ನೀಡಲು ಹೆಚ್ಚಿನ ತರಬೇತಿಗೆ ಯಾವ ಕ್ರಮಗಳನ್ನು ಕೈಗೊಳ್ಳಲಾಗುವುದು ? (ಮಾಹಿತಿ ನೀಡುವುದು)

## ರಾಜ್ಯದ ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ನಿವೃತ್ತಿ, ನಿಧನ ಹಾಗೂ ರಾಜೀನಾಮೆಯಿಂದ ತೆರವಾಗಿರುವ ಹುದ್ದೆಗಳನ್ನು ತುಂಬಿಕೊಳ್ಳುವ ಕುರಿತು

**ಶ್ರೀ ಎಸ್. ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :-**

೧೦೨ (೧೧೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಿಂದ ನಿವೃತ್ತಿ ನಿಧನ ಹಾಗೂ ರಾಜೀನಾಮೆಯಿಂದ ತೆರವಾಗಿರುವ ಶಿಕ್ಷಕರ/ ಉಪನ್ಯಾಸಕರ ಹುದ್ದೆಗಳ ಸಂಖ್ಯೆ ಎಷ್ಟು ; (ವಿವರವಾದ ಮಾಹಿತಿ ನೀಡುವುದು)

(ಆ) ಸರ್ಕಾರ ಸದ್ಯ ನಿವೃತ್ತಿ / ಇತ್ಯಾದಿಗಳ ಕಾರಣಗಳಿಂದ ತೆರವಾಗಿರುವ ಹುದ್ದೆಗಳನ್ನು ತುಂಬಿಕೊಳ್ಳಲು ಯಾವ ವರ್ಷದವರೆಗೆ ಅನುಮತಿ ನೀಡಿದೆ ; (ಮಾಹಿತಿ ನೀಡುವುದು)

(ಇ) ಸರ್ಕಾರ ನಿವೃತ್ತಿ, ಇತ್ಯಾದಿ ಕಾರಣಗಳಿಂದ ತೆರವಾಗಿರುವ ಹುದ್ದೆಗಳನ್ನು ತುಂಬಿಕೊಳ್ಳಲು ಈಗಾಗಲೇ ನಿಗದಿ ಪಡಿಸಿರುವ ವರ್ಷವನ್ನು ೨೦೨೪ ರವರೆಗೆ ವಿಸ್ತರಿಸಲು ಸರ್ಕಾರ ಚಿಂತನೆ ನಡೆಸಿದೆಯೇ ?

**ಸರ್ಕಾರಿ ಶುಶ್ರೂಷಾ ಮಹಾವಿದ್ಯಾಲಯ ಬೆಂಗಳೂರಿನಲ್ಲಿ ಎಂ.ಎಸ್.ಸಿ ನರ್ಸಿಂಗ್ ವಿದ್ಯಾರ್ಥಿಗಳಿಂದ ಉತ್ತರ ಪತ್ರಿಕೆಗಳ ಮೌಲ್ಯಮಾಪನ ಮಾಡಿಸಿರುವ ಕುರಿತು**

**ಶ್ರೀ ಎಸ್. ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :-**

೧೦೩. (೧೧೮) ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ಶುಶ್ರೂಷಾ ಮಹಾವಿದ್ಯಾಲಯ ಬೆಂಗಳೂರು ಇದರ ಪ್ರಾಂಶುಪಾಲರು ೨೦೨೪ರಲ್ಲಿ ಜಮ್ಮು-ಕಾಶ್ಮೀರ ವಿದ್ಯಾಲಯ ಎಂ.ಎಸ್.ಸಿ ನರ್ಸಿಂಗ್ ವಿದ್ಯಾರ್ಥಿಗಳ ಉತ್ತರ ಪತ್ರಿಕೆಗಳನ್ನು ತಮ್ಮ ಮಹಾವಿದ್ಯಾಲಯದ ಎಂ.ಎಸ್.ಸಿ ನರ್ಸಿಂಗ್ ವಿದ್ಯಾರ್ಥಿಗಳಿಂದಲೇ ಒತ್ತಡ ಹೇರಿ ಮೌಲ್ಯ ಮಾಪನ ನಡೆಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬೇರೆ ರಾಜ್ಯದ ವಿಶ್ವ ವಿದ್ಯಾಲಯದ ವಿದ್ಯಾರ್ಥಿಗಳ ಎಂ.ಎಸ್.ಸಿ ನರ್ಸಿಂಗ್ ಉತ್ತರ ಪತ್ರಿಕೆಗಳನ್ನು ಪ್ರಾಂಶುಪಾಲರು ತಮ್ಮ ಕಾಲೇಜಿನ ವಿದ್ಯಾರ್ಥಿಗಳಿಂದ ಮೌಲ್ಯಮಾಪನ ಮಾಡಿಸಿರುವ ಬಗ್ಗೆ ವೈದ್ಯಕೀಯ ಶಿಕ್ಷಣ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ಇವರಿಗೆ ದಾಖಲೆ ಸಹಿತ ಲಿಖಿತ ದೂರು ನೀಡಿರುವುದು ನಿಜವೇ ;

(ಇ) ಹಾಗಿದ್ದಲ್ಲಿ, ಯಾವ ದಿನಾಂಕದಂದು ದೂರು ನೀಡಿದ್ದಾರೆ; ಅದಕ್ಕೆ ಏನು ಕ್ರಮ ಕೈಗೊಳ್ಳಲಾಗಿದೆ ? (ಮಾಹಿತಿ ನೀಡುವುದು)

## ಅರಣ್ಯ ಇಲಾಖೆಗೆ ಹಂಚಿಕೆಯಾದ ಯೋಜನೆ ಮತ್ತು ಯೋಜನೇತರ ಅನುದಾನದ ಬಗ್ಗೆ

**ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೦೪ (೪೯) ಮಾನ್ಯ ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೯ರಿಂದ ಇಲ್ಲಿಯವರೆಗೆ ಕೊಡಗು ಜಿಲ್ಲೆಯಲ್ಲಿ ಅರಣ್ಯ ಇಲಾಖೆಗೆ ಹಂಚಿಕೆಯಾದ ಯೋಜನೆ ಮತ್ತು ಯೋಜನೇತರ ಅನುದಾನ ಎಷ್ಟು ; ಸದರಿ ಸಾಲಿನಲ್ಲಿ ಕೈಗೊಳ್ಳಬೇಕಾಗಿದ್ದ ಕಾಮಗಾರಿಗಳ ಕ್ರಿಯಾ ಯೋಜನೆಗಳಾವುವು ; (ಕಾಮಗಾರಿವಾರು ವಿವರವನ್ನು ಒದಗಿಸುವುದು)

(ಆ) ೨೦೨೩-೨೪ನೇ ಸಾಲಿನಲ್ಲಿ ಸಾಮಾಜಿಕ ಅರಣ್ಯವಲಯ ಮತ್ತು ಅರಣ್ಯವಲಯಕ್ಕೆ ಹಂಚಿಕೆಯಾದ ಅನುದಾನದ ಮೊತ್ತವೆಷ್ಟು; (ಅರಣ್ಯಗಳವಾರು ಪ್ರತ್ಯೇಕ ವಿವರ ನೀಡುವುದು) ಈ ಅವಧಿಯಲ್ಲಿ ವಿವಿಧ ಲೆಕ್ಕ ಶೀರ್ಷಿಕೆಗಳಡಿ ಕೈಗೊಳ್ಳಲಾದ ಪ್ರತಿಯೊಂದು ಕಾಮಗಾರಿಗೆ ಬಿಡುಗಡೆಯಾದ ಮೊತ್ತವೆಷ್ಟು; (ಕಾಮಗಾರಿಗಳ ಹೆಸರುಗಳೊಂದಿಗೆ ಮಾಹಿತಿ ನೀಡುವುದು)

(ಇ) ಕಾಮಗಾರಿಗಳನ್ನು ನಿರ್ವಹಿಸುತ್ತಿರುವ ಇಲಾಖೆ/ಸಂಸ್ಥೆ/ ಗುತ್ತಿಗೆದಾರರು ಯಾರು ; ಪ್ರತಿ ಕಾಮಗಾರಿವಾರು ಮಾಡಲಾಗಿರುವ ವೆಚ್ಚವೆಷ್ಟು ? (ಜಿಲ್ಲಾವಾರು, ತಾಲ್ಲೂಕುವಾರು ಪ್ರತ್ಯೇಕ ಕಾಮಗಾರಿವಾರು ಸಂಪೂರ್ಣ ಮಾಹಿತಿ ನೀಡುವುದು)

## ಕೊಡಗು ಜಿಲ್ಲೆಯಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ತೆರೆಯುವ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೦೫ (೫೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಡಗು ಜಿಲ್ಲೆಯಲ್ಲಿ ಸಾರ್ವಜನಿಕರು ಆರೋಗ್ಯ ಸಂಬಂಧಿ ಚಿಕಿತ್ಸೆಗಳಿಗೆ ಮಂಗಳೂರು, ಮೈಸೂರು ಹಾಗೂ ಇನ್ನಿತರ ಜಿಲ್ಲೆಗಳಿಗೆ ತೆರಳಬೇಕಾಗಿದ್ದು ಇದರಿಂದ ಬಡ ರೋಗಿಗಳಿಗೆ ತುಂಬಾ ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಯೋಜನೆಯಲ್ಲಿ ಲಭ್ಯವಿರುವ ಎಲ್ಲಾ ಚಿಕಿತ್ಸೆಗಳನ್ನು ನೀಡಲಾಗುತ್ತಿದೆಯೇ ;

(ಇ) ವೈದ್ಯಕೀಯ ಕಾಲೇಜು ಆಸ್ಪತ್ರೆ, ಜಿಲ್ಲಾ ಆಸ್ಪತ್ರೆ, ತಾಲ್ಲೂಕು ಆಸ್ಪತ್ರೆ, ಸಮುದಾಯ ಆಸ್ಪತ್ರೆಯಲ್ಲಿ ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಯೋಜನೆಯಡಿ ಲಭ್ಯವಿರುವ ಚಿಕಿತ್ಸೆಗಳನ್ನು ಒದಗಿಸದೆ ಇರಲು ಕಾರಣವೇನು ;

(ಈ) ಪರಿಣಿತ ವೈದ್ಯರು ಇಲ್ಲದಿದ್ದಲ್ಲಿ ಇತರೆ ಆಸ್ಪತ್ರೆಯ ವೈದ್ಯರನ್ನು ಬಳಸಿ ಚಿಕಿತ್ಸೆ ಒದಗಿಸಬಹುದೆ ;

(ಉ) ಕೊಡಗು ಜಿಲ್ಲೆಯಲ್ಲಿನ ಎಲ್ಲಾ ಆಸ್ಪತ್ರೆಗಳಲ್ಲಿ ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಯೋಜನೆಯಡಿ ಲಭ್ಯವಿರುವ ಚಿಕಿತ್ಸಾ ವಿವರವನ್ನು ಒದಗಿಸುವುದು ;

(ಊ) ಕೊಡಗು ಜಿಲ್ಲೆಗೆ ಅವಶ್ಯವಿರುವ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ತೆರೆಯಲು ಹಲವಾರು ವರ್ಷಗಳಿಂದ ಬೇಡಿಕೆ ಇದ್ದು, ಸದರಿ ಬೇಡಿಕೆಯ ಬಗ್ಗೆ ಸರ್ಕಾರದ ನಿಲುವೇನು ?

## ಕೌಶಲ್ಯಾಭಿವೃದ್ಧಿ ಇಲಾಖೆ ಜಾರಿಗೊಳಿಸುತ್ತಿರುವ ಯೋಜನೆ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೦೬ (೭೫) ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೌಶಲ್ಯಾಭಿವೃದ್ಧಿ ಇಲಾಖೆಯಿಂದ ಸರ್ಕಾರ ಜಾರಿಗೊಳಿಸುತ್ತಿರುವ ಯೋಜನೆ/ಕಾರ್ಯಕ್ರಮಗಳು ಯಾವುವು ; ಫಲಾನುಭವಿಗಳ ಆಯ್ಕೆಗೆ ಇರುವ ಮಾನದಂಡಗಳೇನು ;

(ಆ) ಕೌಶಲ್ಯಾಭಿವೃದ್ಧಿ ಇಲಾಖೆಯಿಂದ ಸರ್ಕಾರ ಜಾರಿಗೊಳಿಸುತ್ತಿರುವ ಯೋಜನೆ/ಕಾರ್ಯಕ್ರಮಗಳಿಂದ ಯಾವ ರೀತಿ ಉದ್ಯೋಗ ಸೃಷ್ಟಿಗೆ ಅವಕಾಶಗಳಿವೆ; (ಮಾಹಿತಿ ನೀಡುವುದು)

(ಇ) ಈ ಇಲಾಖೆಯಿಂದ ಕಳೆದ ಮೂರು ವರ್ಷಗಳಲ್ಲಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ಕೈಗೊಂಡಿರುವ ಯೋಜನೆ/ಕಾರ್ಯಕ್ರಮಗಳು ಯಾವುವು ; ಇದಕ್ಕೆ ಬಿಡುಗಡೆಯಾಗಿರುವ ಅನುದಾನ ಎಷ್ಟು; ಖರ್ಚಾಗಿರುವ ಅನುದಾನ ಎಷ್ಟು; ಈ ಯೋಜನೆ/ಕಾರ್ಯಕ್ರಮದಡಿಯಲ್ಲಿ ಉದ್ಯೋಗ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು; (ಯೋಜನೆ/ಕಾರ್ಯಕ್ರಮವಾರು ಮತ್ತು ತಾಲ್ಲೂಕವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ಐಟಿ–ಬಿಟಿ ಹಾಗೂ ಇತರೆ ಉದ್ಯಮಗಳು ಮುಖ್ಯವಾಗಿ ಬೆಂಗಳೂರು ಹಾಗೂ ಇತರೆ ನಗರ ಕೇಂದ್ರಿತವಾಗಿ ಸ್ಥಾಪನೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅದರಿಂದ ವಲಸೆ ಹೆಚ್ಚಾಗಿ ನಗರಗಳಲ್ಲಿ ಜನದಟ್ಟಣೆ ಹೆಚ್ಚಾಗಿ ಅಗತ್ಯ ಮೂಲ ಸೌಲಭ್ಯಗಳನ್ನು ಕಲ್ಪಿಸುವುದು ಸವಾಲಾಗಿರುವುದು ನಿಜವೇ; ಹಾಗಿದ್ದಲ್ಲಿ, ಇದರ ನಿವಾರಣೆಗಾಗಿ ಕೈಗೊಂಡ ಕ್ರಮಗಳೇನು ? (ಮಾಹಿತಿ ನೀಡುವುದು)

## ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆಶಾ ಕಾರ್ಯಕರ್ತೆಯರ ಬಗ್ಗೆ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೭ (೭೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆರೋಗ್ಯ ಇಲಾಖೆಯಲ್ಲಿ ಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶುಶ್ರೂಷಕರುಗಳು ಹಾಗೂ ಗೌರವಧನ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಆಶಾ ಕಾರ್ಯಕರ್ತೆಯರು ಖಾಯಂಗೊಳಿಸುವಂತೆ ಹೋರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ; ಇವರುಗಳನ್ನು ಯಾವಾಗ ಖಾಯಂಗೊಳಿಸಲಾಗುವುದು ;(ಮಾಹಿತಿ ನೀಡುವುದು)

(ಆ) ಗುತ್ತಿಗೆ ಆಧಾರದ ಮೇಲೆ ನೇಮಕಗೊಂಡ ವೈದ್ಯರು ಸೇರಿದಂತೆ ಇತರೆ ಅಧಿಕಾರಿ ನೌಕರರನ್ನು ಈಗಾಗಲೇ ಖಾಯಂಗೊಳಿಸಲಾಗಿದ್ದು, ಶುಶ್ರೂಷಕರುಗಳು ಹಾಗೂ ಆಶಾ ಕಾರ್ಯಕರ್ತೆಯರನ್ನು ಖಾಯಂಗೊಳಿಸದಿರುವುದಕ್ಕೆ ಕಾರಣವೇನು ; ಇವರುಗಳನ್ನು ಖಾಯಂಗೊಳಿಸಲು ಸರ್ಕಾರದ ಹಂತದಲ್ಲಿ ಚಿಂತನೆ ನಡೆದಿದೆಯೇ ; (ವಿವರ ನೀಡುವುದು)

(ಇ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶುಶ್ರೂಷಕರುಗಳಿಗೆ ಸಮಾನ ಕೆಲಸಕ್ಕೆ ಸಮಾನ ವೇತನ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಮಾಹಿತಿ ನೀಡುವುದು)

(ಈ) ಕಲಬುರಗಿಯ ಗುಲಬರ್ಗಾ ವೈದ್ಯಕೀಯ ವಿಜ್ಞಾನ ಸಂಸ್ಥೆ ಆಸ್ಪತ್ರೆಯಲ್ಲಿ ಇರುವ ಡಯಾಲಿಸಿಸ್ ಕೇಂದ್ರದಲ್ಲಿ ತಜ್ಞ ವೈದ್ಯರು ಮತ್ತು ಅಗತ್ಯ ಸಿಬ್ಬಂದಿ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮವೇನು ?

## ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯಲ್ಲಿ ಬಿಪಿಎಲ್ ಪಡಿತರ ಚೀಟಿ ಬಗ್ಗೆ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೮ (೭೭) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯಿಂದ ಬಿಪಿಎಲ್ ಪಡಿತರ ಚೀಟಿ ಪಡೆದ ಫಲಾನುಭವಿಗಳೆಷ್ಟು; ಕಳೆದ ಮೂರು ವರ್ಷಗಳಲ್ಲಿ ಹೊಸದಾಗಿ ಬಿಪಿಎಲ್ ಪಡಿತರ ಚೀಟಿ ಪಡೆದ ಫಲಾನುಭವಿಗಳೆಷ್ಟು; (ವಿವರ ನೀಡುವುದು)

(ಆ) ಬಿಪಿಎಲ್ ಪಡಿತರ ಚೀಟಿ ಪಡೆಯಲು ನಿಗಧಿಪಡಿಸಿರುವ ಮಾನದಂಡವೇನು ; ಹೊಸ ಪಡಿತರ ಚೀಟಿ ವಿತರಣೆ ಸ್ಥಗಿತಗೊಳಿಸಲು ಕಾರಣ ಏನು; ಇದರಿಂದ ಹೊಸದಾಗಿ ಪಡಿತರ ಚೀಟಿ ಪಡೆದು ಗೃಹಲಕ್ಷ್ಮೀ ಯೋಜನೆಗೆ ಹೆಸರು ನೋಂದಾಯಿಸುವ ಬಡ ಕುಟುಂಬಗಳಿಗೆ ತೊಂದರೆಯಾಗುವುದಿಲ್ಲವೆ ; ಹೊಸ ಪಡಿತರ ಚೀಟಿ ವಿತರಿಸುವ ಕಾರ್ಯವನ್ನು ಯಾವಾಗ ಪ್ರಾರಂಭಿಸಲಾಗುವುದು ; (ಮಾಹಿತಿ ನೀಡುವುದು)

(ಇ) ಪ್ರಸ್ತುತ ಪಡಿತರ ಚೀಟಿಯುಲ್ಲಿ ಹೆಸರಿರುವ ಪ್ರತಿ ವ್ಯಕ್ತಿಗೆ ವಿತರಿಸುತ್ತಿರುವ ಅಕ್ಕಿಯ ಪ್ರಮಾಣ ಎಷ್ಟು ; ಅದರಲ್ಲಿ ಕೇಂದ್ರ ಮತ್ತು ರಾಜ್ಯದ ಪಾಲು ಎಷ್ಟು; ಪ್ರತ್ಯೇಕವಾಗಿ ಮಾಹಿತಿ ನೀಡುವುದು; ಅಕ್ಕಿಯ ಬದಲಾಗಿ ಪ್ರತಿ ವ್ಯಕ್ತಿಯ ಬ್ಯಾಂಕ್ ಖಾತೆಗೆ ಎಷ್ಟು

ತಿಂಗಳ ಹಣ ಜಮಾ ಮಾಡಲಾಗಿದೆ; ಇದಕ್ಕೆ ಖರ್ಚಾದ ಹಣ ಎಷ್ಟು; ಯಾವ ಯಾವ ತಿಂಗಳ ಹಣ ಬಾಕಿ ಉಳಿದಿದೆ? (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

## ರಾಜ್ಯದಲ್ಲಿನ ಅರಣ್ಯ ಪ್ರದೇಶದ ಬಗ್ಗೆ

**ಶ್ರೀ ಸುನೀಲ್ ವಲ್ಯಾಪುರ್(ವಿಧಾನಸಭೆಯಿಂದ ಚುನಾಯಿತರಾದವರು) :-**

೧೦೯ (೭೮) ಮಾನ್ಯ ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಒಟ್ಟು ವಿಸ್ತೀರ್ಣದಲ್ಲಿ ಅರಣ್ಯದ ಪಾಲು ಎಷ್ಟು ; ಪರಿಸರ ಸಮತೋಲನೆಗೆ ಅರ್ಹತೆಯಾಗಿ ಇರಬೇಕಾದ ಅರಣ್ಯ ಪ್ರದೇಶದ ಪ್ರಮಾಣ ಎಷ್ಟು ;

(ಆ) ರಾಷ್ಟ್ರೀಯ ಸರಾಸರಿಯಂತೆ ಕರ್ನಾಟಕ ರಾಜ್ಯದ ಅರಣ್ಯ ಪ್ರದೇಶದ ಶೇಕಡವಾರು ಅರಣ್ಯ ಎಷ್ಟು ; ಕಳೆದ ೫ ವರ್ಷಗಳ ಅರಣ್ಯ ಬೆಳವಣಿಗೆಯ ಮಾಹಿತಿ ನೀಡುವುದು ;

(ಇ) ೨೦೧೮ ರಿಂದ ಇಲ್ಲಿಯವರೆಗೆ ಅರಣ್ಯ ಅಭಿವೃದ್ಧಿಗಾಗಿ ಸರ್ಕಾರ ಖರ್ಚು ಮಾಡಲಾದ ಅನುದಾನ ಎಷ್ಟು ; (ವರ್ಷವಾರು ಮತ್ತು ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ಅರಣ್ಯ ಅಭಿವೃದ್ಧಿಗಾಗಿ ಸಾರ್ವಜನಿಕರಿಗೆ ಹಾಗೂ ರೈತರಿಗೆ ಅರಿವು ಮೂಡಿಸುವಲ್ಲಿ ಸರ್ಕಾರ ಹಮ್ಮಿಕೊಂಡಿರುವ ಯೋಜನೆಗಳು ಯಾವುವು; ಬಯಲು ಸೀಮೆ ಎಂಬ ಹಣೆಪಟ್ಟಿ ಕಟ್ಟಿಕೊಂಡಿರುವ ಉತ್ತರ ಕರ್ನಾಟಕದ ಭಾಗದಲ್ಲಿ ಅರಣ್ಯ ಪ್ರದೇಶ ವಿಸ್ತರಣೆಗಾಗಿ ಸರ್ಕಾರ ಯಾವ ಯಾವ ಉತ್ತೇಜನಕಾರಿ ಯೋಜನೆಗಳನ್ನು ಹಮ್ಮಿಕೊಂಡಿದೆ ;

(ಉ) ಕಲ್ಯಾಣ ಕರ್ನಾಟಕದ ಜಿಲ್ಲೆಗಳಲ್ಲಿರುವ ಅರಣ್ಯ ಪ್ರದೇಶವೆಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಊ) ರಾಜ್ಯದಲ್ಲಿ ಅರಣ್ಯ ಪ್ರದೇಶ ಒತ್ತುವರಿ ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಸರ್ಕಾರಿ ಯೋಗ ಪ್ರಕೃತಿ ಚಿಕಿತ್ಸಾ ಕೇಂದ್ರಗಳ ಸ್ಥಿತಿಗತಿ ಕುರಿತು

**ಶ್ರೀ ಶರವಣ ಟಿ.ಎ. (ವಿಧಾನಸಭೆಯಿಂದ ಚುನಾಯಿತರಾದವರು) :-**

೧೧೦ (೧೩೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸರ್ಕಾರದಿಂದ ಪ್ರಾರಂಭಿಸಲಾದ ಯೋಗ ಮತ್ತು ಪ್ರಕೃತಿ ಚಿಕಿತ್ಸಾ ಕೇಂದ್ರಗಳನ್ನು ಎಲ್ಲಿ ಮತ್ತು ಯಾವಾಗ ಪ್ರಾರಂಭಿಸಲಾಯಿತು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಕೇಂದ್ರಗಳನ್ನು ಯಾರ ಸಹಯೋಗದಲ್ಲಿ ನಡೆಸಲಾಗುತ್ತಿದೆ ಮತ್ತು ಈ ಒಡಂಬಡಿಕೆ ಅವಧಿ ಎಷ್ಟು ;

(ಇ) ಯೋಗ ಮತ್ತು ಪ್ರಕೃತಿ ಚಿಕಿತ್ಸಾ ಕೇಂದ್ರಗಳನ್ನು ಮುಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ಕೇಂದ್ರಗಳನ್ನು ಮುಚ್ಚಲು ಕಾರಣಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಸದರಿ ಚಿಕಿತ್ಸಾ ಕೇಂದ್ರಗಳನ್ನು ಸರ್ಕಾರ ಮರು ಪ್ರಾರಂಭಿಸಲು ಉದ್ದೇಶಿಸಿದೆಯೇ ; ಹಾಗಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಈ ಕೇಂದ್ರಗಳನ್ನು ಪ್ರಾರಂಭಿಸಲಾಗುವುದು ?

# ಅನುದಾನಿತ ಶಾಲಾ ಕಾಲೇಜುಗಳ ಭೋಧಕ/ಭೋಧಕೇತರ ಹುದ್ದೆಗಳ ಭರ್ತಿ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೧೧೧ (೧೧೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅನುದಾನಿತ ಶಾಲಾ ಕಾಲೇಜುಗಳಲ್ಲಿ ನಿಧನ, ನಿವೃತ್ತಿ, ರಾಜೀನಾಮೆ ಹಾಗೂ ಇನ್ನಿತರೆ ಕಾರಣಗಳಿಂದ ೨೦೧೬ರ ನಂತರ ಇದುವರೆಗೂ ಖಾಲಿ ಇರುವ ಭೋಧಕ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಅನುಮತಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡದಿರುವುದರಿಂದ ವಿದ್ಯಾರ್ಥಿಗಳ ಗುಣಮಟ್ಟ ಶಿಕ್ಷಣಕ್ಕೆ ತುಂಬಾ ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ೨೦೧೬ ರಿಂದ ೨೦೨೪ರವರೆಗೂ ಖಾಲಿ ಇರುವ ಭೋದಕ/ಭೋದಕೇತರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಯಾವ ಕಾಲಮಿತಿಯಲ್ಲಿ ಅನುಮತಿ ನೀಡಲಾಗುವುದು ;

(ಈ) ಸದರಿ ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಭೋಧಕ/ಭೋದಕೇತರರಿಗೆ ಜ್ಯೋತಿ ಸಂಜೀವಿನಿ ಆರೋಗ್ಯ ವಿಮಾ ಯೋಜನೆ ಸೌಲಭ್ಯ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಜ್ಯೋತಿ ಸಂಜೀವಿನಿ ಆರೋಗ್ಯ ವಿಮಾ ಯೋಜನೆ ಸೌಲಭ್ಯ ನೀಡುವಲ್ಲಿ ಇರುವ ತೊಂದರೆಗಳೇನು ;

(ಊ) ಯಾವ ಕಾಲಮಿತಿಯಲ್ಲಿ ಸದರಿ ಸಿಬ್ಬಂದಿಯವರಿಗೂ ಆರೋಗ್ಯ ವಿಮಾ ವಿಸ್ತರಿಸಲಾಗುವುದು ?

## ಸಹಾಯಕ ಪ್ರಾಧ್ಯಾಪಕರ ನೇಮಕಾತಿ ಆದೇಶ ನೀಡುವ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೧೧೨ (೧೧೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೧ರ ಸಹಾಯಕ ಪ್ರಾಧ್ಯಾಪಕರ ನೇಮಕಾತಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ಪ್ರತಿ ನೀಡುವ ಪ್ರಕ್ರಿಯೆ ಯಾವ ಹಂತದಲ್ಲಿದೆ ;

(ಆ) ಆಯ್ಕೆ ಪಟ್ಟಿ ಅಧಿಸೂಚನೆಯಾದ ನಂತರ ಎಲ್ಲಾ ಪರಿಶೀಲನಾ ಕಾರ್ಯ ಶೇ೯೦% ಪೂರ್ಣಗೊಂಡರೂ ಅಭ್ಯರ್ಥಿಗಳಿಗೆ ಆದೇಶ ನೀಡಲು ತಡವಾಗುತ್ತಿರುವುದಕ್ಕೆ ಪರಿಹಾರಗಳನ್ನು ಕಂಡುಕೊಳ್ಳಲಾಗಿದೆಯೇ ;

(ಇ) ಹೈದರಾಬಾದ್ ಕರ್ನಾಟಕ ವಿಭಾಗದ ಮೀಸಲಾತಿ ವಿಷಯವಾಗಿ ಬಂದಂತಹ ಸರ್ಕಾರದ ಸುತ್ತೋಲೆ ಸಂಖ್ಯೆ:ಸಿ.ಆ.ಸು.ಇ/೦೩/ ಹೈಕಕೋ/೨೦೧೯, ದಿನಾಂಕ:೦೧.೦೨.೨೦೨೩ನ್ನು ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯು ಎತ್ತಿ ಹಿಡಿದಿದ್ದು, ಇದೇ ವಿಷಯುವಾಗಿ ೧೩ ಮಾರ್ಚ್ ೨೦೨೪ರಂದು ಉಚ್ಚನ್ಯಾಯಾಲಯದ ಮಧ್ಯಂತರ ತೀರ್ಪು ಸಹ ಕೌನ್ಸಿಲಿಂಗ್ ನಡೆಸಿ ಸ್ಥಳ ನಿಯುಕ್ತಿಗೊಳಿಸಬಹುದೆಂದು ಆದೇಶ ನೀಡಿದ್ದು, ಆದರೂ ತಡವಾಗಲು ಕಾರಣವೇನು ;

(ಈ) ಈ ಆದೇಶಾನುಸಾರ ಸರ್ಕಾರವು ಈಗಾಗಲೇ K.P.T.C.L ಇಲಾಖೆಯ AE ಹುದ್ದೆಗಳಿಗೆ ಪ್ರಾಥಮಿಕ ಶಾಲಾ ಸಾಕ್ಷರತಾ ಇಲಾಖೆಯ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕ ಹುದ್ದೆಗಳಿಗೆ

(G.P.S.T.R) P.W.D ಇಲಾಖೆಯ ಸಹಾಯಕ ಇಂಜಿನಿಯರ್ ಹುದ್ದೆಗಳಿಗೆ ಮತ್ತು RDPR A.E ಇಲಾಖೆಯ AE ಹುದ್ದೆಗಳಿಗೆ ಷರತ್ತು ಬದ್ದ ನೇಮಕಾತಿ ಆದೇಶವನ್ನು ಮತ್ತು ತಾತ್ಕಾಲಿಕ ಸ್ಥಳ ನಿಯುಕ್ತಿ ಮಾಡಿದ್ದು ಈ ಎಲ್ಲಾ ಹುದ್ದೆಗಳಿಗೆ ಆದೇಶ ನೀಡಿರುವಾಗ ಸಹಾಯಕ ಪ್ರಾಧ್ಯಾಪಕರಿಗೆ ನೀಡದಿರಲು ಕಾರಣವೇನು ;

(ಉ) ಮೂರು ವರ್ಷಗಳು ಕಳೆದರೂ ಅನಗತ್ಯ ನೆಪ ಹೇಳಿ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡದೇ ಮುಂದೂಡುತ್ತಿರುವುದಕ್ಕೆ ಕಾರಣಗಳೇನು ? (ಪೂರ್ಣ ಮಾಹಿತಿ ನೀಡುವುದು)

## ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಯೋಜನೆಯ ಸಮಗ್ರ ಅನುಷ್ಠಾನ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೧೧೩ (೧೧೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಯೋಜನೆಯಡಿಯಲ್ಲಿ ದೊರೆಯುವ ಚಿಕಿತ್ಸಾ ವಿಧಾನಗಳು ಯಾವುವು ; (ಚಿಕಿತ್ಸೆಗೆ ತಗಲುವ ವೆಚ್ಚದ ಮಾಹಿತಿ ನೀಡುವುದು)

(ಆ) ಈ ಯೋಜನೆಗೆ ಮತ್ತಷ್ಟು ಹೆಚ್ಚಿನ ಚಿಕಿತ್ಸೆಗಳನ್ನು ಸೇರ್ಪಡೆ ಮಾಡುವ ಮೂಲಕ ಚಿಕಿತ್ಸಾ ವಿಧಾನಗಳ ಪಟ್ಟಿ ಪರಿಷ್ಕರಣೆ ಮಾಡಲು ಸರ್ಕಾರ ಚಿಂತಿಸುತ್ತಿದೆಯೇ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ಯೋಜನೆ ಜಾರಿಗಾಗಿ ೫ ವರ್ಷಗಳು ಕಳೆದರೂ ಸೂಕ್ತ ರೀತಿಯಲ್ಲಿ ಸೇವೆ ದೊರೆಯದ ಹಾಗೂ ಯೋಜನೆಯ ಕುರಿತು ಸಮರ್ಪಕ ಮಾಹಿತಿ ಇಲ್ಲದ ಕಾರಣ ತುರ್ತು ಸಂದರ್ಭಗಳಲ್ಲಿ ಚಿಕಿತ್ಸೆಯಿಂದಾಗಿ ಆಸ್ಪತ್ರೆಯಿಂದ ಆಸ್ಪತ್ರೆಗೆ ಅಲೆದಾಡುವ ಪರಿಸ್ಥಿತಿ ಮುಂದುವರೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ;

(ಈ) ಸದರಿ ಯೋಜನೆಯಡಿ ಚಿಕಿತ್ಸೆ ನೀಡುತ್ತಿರುವ ಸರ್ಕಾರಿ ಮತ್ತು ಖಾಸಗಿ ಆಸ್ಪತ್ರೆಗಳ ಸಂಖ್ಯೆ ಎಷ್ಟು ; ಯೋಜನೆಗೆ ನೋಂದಣಿ ಆಗಲು ಖಾಸಗಿ ಆಸ್ಪತ್ರೆಗಳಿಂದ ನಿರಾಸಕ್ತಿಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಜಿಲ್ಲಾವಾರು ಚಿಕಿತ್ಸೆ ನೀಡುವ ಆಸ್ಪತ್ರೆಗಳ ವಿವರವನ್ನು ನೀಡುವುದು)

(ಉ) ತುರ್ತು ಸಂದರ್ಭಗಳಲ್ಲಿ ರೋಗಿಗಳ ದಾಖಲಾತಿ ಸಮಸ್ಯೆ ಮುಂದುವರೆದಿದ್ದು ಕೆಳಹಂತದ ಆಸ್ಪತ್ರೆಗಳಿಂದ ದೊಡ್ಡ ಆಸ್ಪತ್ರೆಗಳಿಗೆ ಶಿಫಾರಸ್ಸು ಮಾಡಿ ಈ ಯೋಜನೆಯಡಿ ಚಿಕಿತ್ಸೆ ಪಡೆಯುವ ಕುರಿತು ಬಹಳಷ್ಟು ಗೊಂದಲಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಕೆಲವೊಂದು ಆಸ್ಪತ್ರೆಗಳಲ್ಲಿ ರೋಗಿಗಳು/ಗಾಯಾಳುಗಳು ಬಂದು ನಿಂತಿದ್ದರೂ ಸಹ ಮಾನವೀಯತೆಯ ದೃಷ್ಟಿಯಿಂದಾದರೂ ಪ್ರಥಮ ಚಿಕಿತ್ಸೆ ನೀಡಲೂ ಸುಮಾರು ೧-೨ ಗಂಟೆಯಾದರೂ ವೈದ್ಯರು ಬರದಿರಲು ಕಾರಣಗಳೇನು ; ಅಂತಹ ವೈದ್ಯರುಗಳ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು ?

# ಸರ್ಕಾರಿ ಪ್ರಾಥಮಿಕ/ಪ್ರೌಢ ಶಾಲೆಗಳಲ್ಲಿ ದೈಹಿಕ ಶಿಕ್ಷಕರ ನೇಮಕಾತಿ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೧೧೪ (೧೧೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸುಮಾರು ೧೨ ವರ್ಷಗಳಿಂದ ಸರ್ಕಾರಿ ಪ್ರಾಥಮಿಕ/ಪ್ರೌಢ ಶಾಲೆಗಳಲ್ಲಿ ದೈಹಿಕ ಶಿಕ್ಷಕರ ನೇಮಕಾತಿಗಳನ್ನು ಮಾಡಿಕೊಳ್ಳದಿರುವುದು ನಿಜವೇ ;

(ಆ) ರಾಜ್ಯದಲ್ಲಿರುವ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು; ಪ್ರಾಥಮಿಕ ಪ್ರೌಢ ಶಾಲೆಗಳಲ್ಲಿ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು ಮತ್ತು ಸದ್ಯ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರ ಸಂಖ್ಯೆ ಎಷ್ಟು ; (ವಿವರವಾದ ಮಾಹಿತಿ ನೀಡುವುದು)

(ಇ) ಈ ಸರ್ಕಾರಿ ಶಾಲೆಗಳಲ್ಲಿ ಮಂಜೂರಾಗಿ ನಿವೃತ್ತಿಹೊಂದಿದ ದೈಹಿಕ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಚಿಂತನೆ ನಡೆಸಿದೆಯೇ ; ಹಾಗಿದ್ದಲ್ಲಿ, ಯಾವ ರೀತಿಯ ಕ್ರಮ ತೆಗೆದುಕೊಳ್ಳಲಾಗುವುದು ; (ವಿವರವಾದ ಮಾಹಿತಿ ನೀಡುವುದು)

(ಈ) ಸರ್ಕಾರಿ ಪಿ.ಯು.ಸಿ ಕಾಲೇಜಿನಲ್ಲಿ ಪ್ರಸ್ತುತ ಎಷ್ಟು ಜನ ದೈಹಿಕ ಶಿಕ್ಷಣ ಉಪನ್ಯಾಸಕರು ಕಾರ್ಯ ನಿರ್ವಹಿಸುತ್ತಿದ್ದಾರೆ ; (ಮಾಹಿತಿ ನೀಡುವುದು)

(ಉ) ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ನಿವೃತ್ತಿಯಿಂದ ತೆರವಾಗಿರುವ ದೈಹಿಕ ಶಿಕ್ಷಣ ಉಪನ್ಯಾಸಕರನ್ನು ನೇಮಕಾತಿ ಮಾಡಿಕೊಳ್ಳದಂತೆ ಆರ್ಥಿಕ ಇಲಾಖೆಯಿಂದ ಟಿಪ್ಪಣಿ ರೂಪದಲ್ಲಿ ಆದೇಶ ಬಂದಿದೆಯೇ ; ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## ಕೈಗಾ ಅಣು ವಿದ್ಯುತ್ ಸ್ಥಾವರದ ಸುತ್ತಮುತ್ತಲಿನ ಹಳ್ಳಿ ಜನರ ಅನಾರೋಗ್ಯದ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :-**

೧೧೫ (೮೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೈಗಾ ಅಣು ವಿದ್ಯುತ್ ಸ್ಥಾವರದ ಸುತ್ತಮುತ್ತಲಿನ ಹಲವಾರು ವನವಾಸಿ ಊರುಗಳ ಜನರಿಗೆ ಗಂಭೀರ ಕಾಯಿಲೆಗಳು ಬರುತ್ತಿರುವ ವರದಿಗಳು ಪ್ರಕಟವಾಗುತ್ತಿರುವುದು ನಿಜವೇ ;

(ಆ) ಇದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ವಿವರ ನೀಡುವುದು)

## ಆಯುಷ್ ಇಲಾಖೆಯಲ್ಲಿನ ಕಾರ್ಯ, ಯೋಜನೆ ಮತ್ತು ಉಪಯೋಗಗಳ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :-**

೧೧೬ (೮೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಆಯುಷ್ ಇಲಾಖೆಯನ್ನು ತಾಲ್ಲೂಕು ಮತ್ತು ಜಿಲ್ಲಾ ಮಟ್ಟದ ಆಸ್ಪತ್ರೆಗಳನ್ನಾಗಿ ಅಭಿವೃದ್ಧಿಪಡಿಸಿ ವಾಸ್ತವವಾಗಿ ಸಾರ್ವಜನಿಕರಿಗೆ ಉಪಯೋಗವಾಗುತ್ತಿರುವ ವಿಭಾಗಗಳು ಯಾವುವು ; (ತಜ್ಞ ವೈದ್ಯರ ಮಾಹಿತಿ ನೀಡುವುದು)

(ಆ) ಆಯುಷ್ ಇಲಾಖೆಯ ಸೇವೆಗಳ ಬಗ್ಗೆ ಸಾರ್ವಜನಿಕರಿಗೆ ಸದುಪಯೋಗ ಮಾಡಿಕೊಳ್ಳಲು ಇಲಾಖೆ ಕೈಗೊಂಡಿರುವ ಕ್ರಮಗಳೇನು ; ಯಾವ ಯಾವ ವಿಭಾಗಗಳ ಚಿಕಿತ್ಸೆ ಲಭ್ಯವಿದೆ ; (ಮಾಹಿತಿ ನೀಡುವುದು)

(ಇ) ಆಯುಷ್ ಇಲಾಖೆಯಲ್ಲಿ ವೈದ್ಯಾಧಿಕಾರಿಗಳ ಮತ್ತು ತಜ್ಞ ವೈದ್ಯರುಗಳ ಸಿ ಅಂಡ್ ಆರ್ ರೂಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಇದನ್ನು ಯಾವಾಗ ಪೂರ್ಣಗೊಳಿಸಿ ಕಾರ್ಯ ರೂಪಕ್ಕೆ ತರಲಾಗಿದೆ ;

(ಈ) ಆಯುಷ್ ಇಲಾಖೆಯಲ್ಲಿ ಯಾವ ಯಾವ ಸ್ನಾತಕೋತ್ತರ ಪದವಿ ಮಾಡಿರುವ ವೈದ್ಯರುಗಳು ಯಾವ ಯಾವ ವಿಭಾಗಗಳನ್ನು ನಿಭಾಯಿಸುತ್ತಾರೆ ಹಾಗೂ ಯಾವ ಯಾವ ರೋಗಗಳಿಗೆ ಚಿಕಿತ್ಸೆ ನೀಡಲಾಗಿದೆ ? (ಮಾಹಿತಿ ಒದಗಿಸುವುದು)

## ರಾಜ್ಯದ ಕಿರಿಯ ಪ್ರಾಥಮಿಕ ಶಾಲೆಗಳಲ್ಲಿ ಪದವೀಧರರನ್ನು (ಸ್ಥಳೀಯ) ನೇಮಿಸಿಕೊಳ್ಳುವ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :-**

೧೧೭ (೯೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಗ್ರಾಮೀಣ ಹಾಗೂ ಗುಡ್ಡಗಾಡು ಪ್ರದೇಶಗಳಲ್ಲಿರುವ ಅನೇಕ ಪ್ರಾಥಮಿಕ ಶಾಲೆಗಳಿಗೆ ಡಿ–ಇಡಿ (ಪ್ರಾಥಮಿಕ ಶಾಲಾ ಶಿಕ್ಷಣ) ತರಬೇತಿ ಹೊಂದಿರುವ ಅತಿಥಿ ಶಿಕ್ಷಕರ ಕೊರತೆ ಇರುವಾಗ ಮತ್ತು ಓಡಾಡಲು ವಾಹನದ ವ್ಯವಸ್ಥೆ ಇಲ್ಲದ ದೂರದ ಹಳ್ಳಿಗಳಲ್ಲಿರುವ ಕಿರಿಯ ಪ್ರಾಥಮಿಕ ಶಾಲೆಗಳಲ್ಲಿ ತರಬೇತಿ ಆಗಿರದ ಸ್ಥಳೀಯರಾಗಿರುವ ಬಿ.ಎ, ಬಿ.ಕಾಂ, ಬಿ.ಎಸ್ಸಿ ಪದವೀಧರರಿಗೆ ಇಂತಹ ಶಾಲೆಗಳಲ್ಲಿ ತರಗತಿಗಳನ್ನು ನಡೆಸಲು ಅವಕಾಶವಿದೆಯೇ ;

(ಆ) ಇಲ್ಲದಿದ್ದಲ್ಲಿ, ಗ್ರಾಮೀಣ ಮತ್ತು ಹಳ್ಳಿ ಪ್ರದೇಶಗಳಲ್ಲಿರುವ ಕಿರಿಯ ಪ್ರಾಥಮಿಕ ಶಾಲೆಗಳಿಗೆ ಡಿ–ಇಡಿ ತರಬೇತಿ ಆಗಿರುವ ಅತಿಥಿ ಶಿಕ್ಷಕರ ಕೊರತೆ ಇದ್ದಲ್ಲಿ, ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು ?

## ಗ್ರಾಮ ಅರಣ್ಯ ಸಮಿತಿ (VFC) ಮತ್ತು ಪಂಚಾಯತ್ ಜೀವ ವೈವಿಧ್ಯ ಸಮಿತಿಗೆ ಅಧಿಕಾರ ನೀಡುವ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :-**

೧೧೮ (೯೧) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಗ್ರಾಮ ಅರಣ್ಯ ಸಮಿತಿ VFC ಮತ್ತು ಪಂಚಾಯತ್ ಜೀವಿ ವೈವಿಧ್ಯ ಸಮಿತಿಗಳಿಗೆ ಜೀವ ತುಂಬುವ ಉದ್ದೇಶ ಅರಣ್ಯ ಇಲಾಖೆಗೆ ಇದೆಯೇ ; ಹಾಗಿದ್ದಲ್ಲಿ, ಯಾವಾಗಿನಿಂದ ಪ್ರಾರಂಭಿಸಲಾಗುವುದು ;

(ಆ) ಗ್ರಾಮ ಅರಣ್ಯ ಸಮಿತಿಯ ರಚನೆ ಮತ್ತು ಕಾರ್ಯಗಳೇನು ? (ವಿವರ ನೀಡುವುದು)

## ರಾಜ್ಯದ ಅರಣ್ಯ ಪ್ರದೇಶದಲ್ಲಿ ವಾಸಿಸುವ ಜನರ ಹಾಡಿಗಳ ಅಪಾಯಕಾರಿ ಮರಗಳ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :-**

೧೧೯ (೯೨) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯಾದ್ಯಂತ ಅರಣ್ಯ ಪ್ರದೇಶದಲ್ಲಿ ವಾಸಿಸುವ ಗಿರಿಜನರ ಮತ್ತು ಪಾರಂಪಾರಿಕ ಅರಣ್ಯ ವಾಸಿಗಳ ಹಾಡಿಗಳಲ್ಲಿ ಅವರ ಮನೆಗಳ ಹತ್ತಿರವಿರುವ ಅಥವಾ ಹಾಡಿಗಳಲ್ಲಿರುವ ಒಣಗಿದ ಅಪಾಯಕಾರಿ ಮರಗಳನ್ನು ತೆರವುಗೊಳಿಸಲು ಇರುವ ಮಾನದಂಡಗಳು ಯಾವುವು ;

(ಆ) ಹಾಡಿಗಳಲ್ಲಿರುವ ಅಪಾಯಕಾರಿ ಒಣಗಿದ ಮರಗಳಿಂದ ಮನೆಗಳಿಗೆ ಹಾನಿ, ಹಾಡಿಯ ಜನ ಅಥವಾ ಸಾಕು ಪ್ರಾಣಿಗಳಿಗೆ ಜೀವಹಾನಿಯಾದರೆ ಅರಣ್ಯ ಇಲಾಖೆ ಪರಿಹಾರ ನೀಡುವುದೇ ;

(ಇ) ಬೆಳಗಾವಿ ಜಿಲ್ಲೆ ಖಾನುಪುರ ತಾಲ್ಲೂಕಿನ ನಾಗರಗಾಳಿ ವಲಯ ಅರಣ್ಯ ಪ್ರದೇಶದಲ್ಲಿ ಬರುವ ನಾನಾಕೆಸರೋಡಗಾ ಗ್ರಾಮದ ಜನರು ಅನೇಕ ಬಾರಿ ತಮ್ಮ ಹಾಡಿಯಲ್ಲಿರುವ ಅಪಾಯಕಾರಿ ಮರಗಳ ತೆರವುಗೊಳಿಸುವ ಕುರಿತು ವಲಯ ಅರಣ್ಯ ಅಧಿಕಾರಿಗಳಿಗೆ ಖುದ್ದು ಭೇಟಿಮಾಡಿ ಮತ್ತು ಅರ್ಜಿಗಳನ್ನು ನೀಡಿದರೂ ಕಳೆದ ೨ ವರ್ಷಗಳಿಂದ ಅಪಾಯಕಾರಿ ಮರಗಳ ತೆರವುಗೊಳಿಸುವಿಕೆ ಕಾರ್ಯಕ್ಕೆ ಹಿಂದೇಟು ಹಾಕುತ್ತಿರುವುದಕ್ಕೆ ಕಾರಣಗಳೇನು ? (ಈ ಕುರಿತು ಸರ್ಕಾರದ ಕ್ರಮಗಳ ಬಗೆಗಿನ ಮಾಹಿತಿ ನೀಡುವುದು)

## ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಮೂಲಭೂತ ಸೌಕರ್ಯಗಳ ಸುಧಾರಣೆಯ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :-**

೧೨೦ (೬೨) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಮೂಲಭೂತ ಸೌಕರ್ಯ ಸುಧಾರಣೆಗೆ ರೂಪಿಸಿರುವ ಯೋಜನೆಗಳೇನು ಮತ್ತು ಈ ಕಾಲೇಜುಗಳಿಗೆ ೨೦೨೩-೨೪ನೇ ಸಾಲಿನಲ್ಲಿ ಒದಗಿಸುವ ಅನುದಾನ ಎಷ್ಟು ;

(ಆ) ಸರ್ಕಾರ ಒದಗಿಸಿದ ಅನುದಾನವನ್ನು ಬಳಕೆ ಮಾಡದಿರುವ ಪದವಿ ಕಾಲೇಜುಗಳು ಯಾವುವು ; ಎಷ್ಟು ಮೊತ್ತದ ಅನುದಾನವನ್ನು ಸರ್ಕಾರಕ್ಕೆ ಹಿಂತಿರುಗಿಸಲಾಗಿದೆ ;

(ಇ) ಸರ್ಕಾರದ ಅನುದಾನ ಬಳಸದೇ ನಿರ್ಲಕ್ಷ್ಯ ತೋರಿರುವ ಪದವಿ ಕಾಲೆಜುಗಳ ಪ್ರಾಚಾರ್ಯರ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಈ) ಪೂರ್ಣಕಾಲಿಕ ಪ್ರಾಚಾರ್ಯರು ನೇಮಕವಾಗದ ಕಾರಣ ಅನುದಾನ ಸದ್ಬಳಕೆ ಮತ್ತು ಶೈಕ್ಷಣಿಕ ಚಟುವಟಿಕೆಗಳು ಕುಂಠಿತಗೊಳ್ಳಲು ಕಾರಣವೇನು ;

(ಉ) ಪೂರ್ಣಕಾಲಿಕ ಪ್ರಾಚಾರ್ಯರ ನೇಮಕಾತಿ ಪ್ರಕ್ರಿಯೆ ಪೂರ್ಣಗೊಳ್ಳುವುದು ಯಾವಾಗ ?

## ನೂತನ ಶಹಾಬಾದ ತಾಲ್ಲೂಕಿನಲ್ಲಿ ತಾಲ್ಲೂಕು ವೈದ್ಯಾಧಿಕಾರಿ ಕಛೇರಿ ಮತ್ತು ತಾಲ್ಲೂಕು ಆಸ್ಪತ್ರೆ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :–**

೧೨೧ (೬೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯ ಹೊಸ ತಾಲ್ಲೂಕುಗಳಿಗೆ ಸ್ವತಂತ್ರ ತಾಲ್ಲೂಕು ವೈದ್ಯಾಧಿಕಾರಿಗಳನ್ನು ನೇಮಿಸಲಾಗಿದೆಯೇ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಕಲಬುರಗಿ ಜಿಲ್ಲೆಯ ಶಹಾಬಾದ ತಾಲ್ಲೂಕಿನಲ್ಲಿ ತಾಲ್ಲೂಕು ವೈದ್ಯಾಧಿಕಾರಿಯ ನೇಮಕ ಮತ್ತು ಕಛೇರಿ ಪ್ರಾರಂಭಿಸಲು ವಿಳಂಬವಾಗಿರುವುದಕ್ಕೆ ಕಾರಣಗಳೇನು ;

(ಇ) ನೂತನ ಶಹಾಬಾದ ತಾಲ್ಲೂಕಿನಲ್ಲಿ ಈಗಾಗಲೇ ನಿರ್ಮಿಸಿರುವ ಸುಸಜ್ಜಿತ ಕಾರ್ಮಿಕರ ರಾಜ್ಯ ವಿಮಾ ನಿಗಮದ (ಇ.ಎಸ್.ಐ) ಆಸ್ಪತ್ರೆಯನ್ನು ತಾಲ್ಲೂಕು ಆಸ್ಪತ್ರೆಯನ್ನಾಗಿಸಲು/ಪರಿವರ್ತಿಸಲು ಸರ್ಕಾರದ ನಿಲುವೇನು ;

(ಈ) ಹೊಸ ಕಟ್ಟಡ ಹಾಗೂ ಎಲ್ಲಾ ಉಪಕರಣಗಳನ್ನು ಹೊಂದಿರುವ ಇ.ಎಸ್.ಐ ಆಸ್ಪತ್ರೆ ಹಲವಾರು ವರ್ಷಗಳಿಂದ ಸಮರ್ಪಕವಾಗಿ ಕಾರ್ಯನಿರ್ವಹಿಸದಿರುವುದಕ್ಕೆ ಕಾರಣಗಳೇನು ; ಸದರಿ ಆಸ್ಪತ್ರೆಯನ್ನು ಸರ್ಕಾರ ತಾಲ್ಲೂಕು ಆಸ್ಪತ್ರೆಯನ್ನಾಗಿಸಿದರೆ ಜನರಿಗೆ ಅನುಕೂಲವಾಗುವುದಿಲ್ಲವೆ ? (ವಿವರಿಸುವುದು)

# ಯಾದಗಿರಿ ಜಿಲ್ಲೆ ಶೈಕ್ಷಣಿಕವಾಗಿ ತೀರ ಕೊನೆಯ ಸ್ಥಾನದಲ್ಲಿರಲು ಕಾರಣಗಳ ಕುರಿತು

**ಡಾ|| ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :-**

೧೨೨ (೬೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರತಿ ವರ್ಷ ಎಸ್‌ಎಸ್‌ಎಲ್‌ಸಿ/ಪಿಯುಸಿ ಪರೀಕ್ಷೆ ಫಲಿತಾಂಶ ಬಂದಾಗ ಯಾದಗಿರಿ ಜಿಲ್ಲೆ ಕೊನೆಯ ಸ್ಥಾನ ಪಡೆಯಲು ಕಾರಣಗಳೇನು ;

(ಆ) ಯಾದಗಿರಿ ಜಿಲ್ಲೆಯಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಮಂಜೂರಾದ ಶಿಕ್ಷಕರ ಸಂಖ್ಯೆಗಿಂತ ಅರ್ಧದಷ್ಟು ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಯಾದಗಿರಿ ಜಿಲ್ಲೆಯಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಶಿಥಿಲಗೊಂಡ ಕೊಠಡಿಗಳು/ಬೋಧನಾ ಕೊಠಡಿಗಳ ಕೊರತೆ, ಶೌಚಾಲಯ, ಬೋಧನಾ ಸಲಕರಣೆಗಳ ಕೊರತೆಯನ್ನು ನೀಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಶಿಕ್ಷಕರ ಕೊರತೆ ಮತ್ತು ಮೂಲಭೂತ ಸೌಕರ್ಯಗಳನ್ನು ಒದಗಿಸದೆ ಗುಣಮಟ್ಟದ ಶಿಕ್ಷಣ ಹೇಗೆ ಸಾಧಿಸಲಾಗುವುದು ಜಿಲ್ಲೆಯು ಶೈಕ್ಷಣಿಕವಾಗಿ ಹಿಂದುಳಿಯಲು ವಲಸೆಯು ಒಂದು ಕಾರಣವಾಗಿರುವುದರಿಂದ ಈ ಬಗ್ಗೆ ಸರ್ಕಾರದ ಕೈಗೊಂಡ ಕ್ರಮಗಳೇನು ?

# ಕಲಬುರಗಿಯಲ್ಲಿ ಸಿಬ್ಬಂದಿ ಕೊರತೆ ಮತ್ತು ಜಯದೇವ ಆಸ್ಪತ್ರೆ ಲೋಕಾರ್ಪಣೆ ಬಗ್ಗೆ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೨೩ (೯೮) ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿಯಲ್ಲಿ ವೈದ್ಯಕೀಯ ಶಿಕ್ಷಣ ಇಲಾಖೆಯಡಿಯಲ್ಲಿ ಎಷ್ಟು ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿವೆ ;

(ಆ) ಈ ಸಂಸ್ಥೆಗಳಲ್ಲಿ ಟ್ರಾಮಾ ಸೆಂಟರ್, ನರವಿಜ್ಞಾನ, ಜಿಮ್ಸ್‌ನಲ್ಲಿ ಸಾಕಷ್ಟು ಸಿಬ್ಬಂದಿಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಎಲ್ಲೆಲ್ಲಿ ಎಷ್ಟು ಯಾವ ಯಾವ ಹುದ್ದೆಗಳು ಖಾಲಿ ಇವೆ ; ಇವುಗಳನ್ನು ಎಷ್ಟು ದಿನಗಳಲ್ಲಿ ಭರ್ತಿ ಮಾಡಲಾಗುವುದು ;

(ಇ) ಕಲಬುರಗಿಯಲ್ಲಿ ಜಯದೇವ ಆಸ್ಪತ್ರೆಯ ನಿರ್ಮಾಣ ಕಾರ್ಯ ಯಾವ ಹಂತದಲ್ಲಿದೆ ; ಇನ್ನೂ ಯಾವ ಯಾವ ಕಾರ್ಯ ನಡೆಯಬೇಕಾಗಿದೆ ; ಎಷ್ಟು ದಿನದಲ್ಲಿ ಇದನ್ನು ಲೋಕಾರ್ಪಣೆ ಮಾಡಲಾಗುವುದು ?

# ಮಾಣಿಕೇಶ್ವರ ಕಾಲೋನಿಯ ಪ್ರಾಥಮಿಕ ಆರೋಗ್ಯ ಕೇಂದ್ರದ ಬಗ್ಗೆ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೨೪ (೯೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ನಗರದಲ್ಲಿ ಮಾಣಿಕೇಶ್ವರ ಕಾಲೋನಿಯಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಸ್ಥಾಪನೆಯಾಗಿ ವರ್ಷಗಳೇ ಕಳೆದರೂ ಇಲ್ಲಿ ತಜ್ಞ ವೈದ್ಯರು, ಸಿಬ್ಬಂದಿಗಳು ಕೊರತೆಯಿಂದಾಗಿ ರೋಗಿಗಳಿಗೆ ಸಕಾಲದಲ್ಲಿ ಚಿಕಿತ್ಸೆ ಲಭಿಸದಿರುವುದು ಸರ್ಕಾರದ ಗಮನಕ್ಕೆ

ಬಂದಿದೆಯೇ ; ಹಾಗಿದ್ದಲ್ಲಿ, ಎಷ್ಟು ಸಿಬ್ಬಂದಿಗಳ ಕೊರತೆ ಇದೆ ; ಕೂಡಲೇ ಅವಶ್ಯವಿರುವ ಸಿಬ್ಬಂದಿಗಳನ್ನು ಭರ್ತಿ ಮಾಡಲು ಕ್ರಮ ಜರುಗಿಸಲಾಗುವುದೇ ;

(ಆ) ಈ ಆಸ್ಪತ್ರೆಗೆ ಒಟ್ಟು ಎಷ್ಟು ಮೊತ್ತದ ಔಷಧಿಗಳನ್ನು ಸರ್ಕಾರ ಸರಬರಾಜು ಮಾಡಲಾಗಿದೆ ; ಇದರಲ್ಲಿ ವಿತರಣೆಯಾಗದೆ ಹಾಳಾಗಿರುವ ಔಷಧೀಯ ಪ್ರಮಾಣವೆಷ್ಟು ; ಅಧಿಕಾರಿಗಳು ಎಷ್ಟು ಬಾರಿ ಈ ಆಸ್ಪತ್ರೆಯ ಔಷಧಿ ಮಳಿಗೆಗೆ ಹೋಗಿ ವೀಕ್ಷಣೆ ಮಾಡಿರುತ್ತಾರೆ ; ಮಾಡದೇ ಇದ್ದಲ್ಲಿ. ಇದಕ್ಕೆ ಹೊಣೆ ಯಾರು ? (ಕಳೆದ ಮೂರು ವರ್ಷಗಳ ಮಾಹಿತಿ ನೀಡುವುದು)

## ರಾಜ್ಯದಲ್ಲಿ ಬೋರ್ಡ್ ಪರೀಕ್ಷೆ V/S ತರಗತಿ ಪರೀಕ್ಷೆಯ ಗೊಂದಲದ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೧೨೫ (೩೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರಿ ಮತ್ತು ಖಾಸಗಿ ಶಾಲೆಗಳ ನಡುವೆ ೫,೮ ಮತ್ತು ೯ನೇ ತರಗತಿ ಮಕ್ಕಳಿಗೆ ಬೋರ್ಡ್ ಪರೀಕ್ಷೆ ಜಟಾಪಟಿ ಮತ್ತು ನ್ಯಾಯಾಲಯದ ಭಿನ್ನ ತೀರ್ಪುಗಳ ನಡುವೆ ವಿದ್ಯಾರ್ಥಿಗಳು ತೊಂದರೆಗೆ ಒಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಪೂರ್ಣ ವಿವರ ನೀಡುವುದು ;

(ಆ) ರಾಜ್ಯದಲ್ಲಿನ ಶಾಲಾ ಮಕ್ಕಳಿಗೆ ಮೌಲ್ಯಂಕನ ಪರೀಕ್ಷೆ ಬೇಕು ಎಂದು ಕರ್ನಾಟಕ ಹೈಕೋರ್ಟ್ ತೀರ್ಪು ನೀಡಿದೆಯೇ ; ಹಾಗಿದ್ದಲ್ಲಿ, ಈ ತೀರ್ಪಿನ ಸಾರಾಂಶಗಳು ಯಾವುವು; ಪೂರ್ಣ ಮಾಹಿತಿ ನೀಡುವುದು ;

(ಇ) ರಾಜ್ಯದ ಹೈಕೋರ್ಟ್‌ನ ವಿಭಾಗೀಯ ಪೀಠದ ತೀರ್ಪಿನ ವಿರುದ್ಧ ಖಾಸಗಿ ಶಾಲೆಗಳು ಸುಪ್ರೀಂ ಕೋರ್ಟ್ ಮೆಟ್ಟಲು ಏರಿದ್ದು,

ಶಾಲಾ ಮಕ್ಕಳಲ್ಲಿ ಮತ್ತು ಪೋಷಕರಲ್ಲಿ ಗೊಂದಲವುಂಟಾಗಿ ಕೋರ್ಡ್‌ನ ತೀರ್ಪು ಹೊರ ಬಿದ್ದಿದೆಯೇ ;

(ಈ) ಹಾಗಿದ್ದಲ್ಲಿ, ಸುಪ್ರೀಂಕೋರ್ಟ್‌ನ ತೀರ್ಪಿನ ಅನ್ವಯ ರಾಜ್ಯ ಸರ್ಕಾರ ಶಿಕ್ಷಣ ಇಲಾಖೆಯಲ್ಲಿ ಕೈಗೊಂಡಿರುವ ಸುಧಾರಣಾ ಕ್ರಮಗಳು ಯಾವುವು ? (ಪೂರ್ಣ ಮಾಹಿತಿ ನೀಡುವುದು)

## ಉನ್ನತ ಶಿಕ್ಷಣ ಇಲಾಖೆಯಿಂದ ಸಹಾಯಕ ಪ್ರಾಧ್ಯಾಪಕರ ನೇಮಕಾತಿ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೧೨೬ (೩೩) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಸರ್ಕಾರದಲ್ಲಿ ೨೦೨೧ ರ ಸಹಾಯಕ ಪ್ರಾಧ್ಯಾಪಕರ ನೇಮಕಾತಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ಪ್ರತಿ ನೀಡುವ ಪ್ರಕ್ರಿಯೆ ಯಾವ ಹಂತದಲ್ಲಿದೆ.

(ಆ) ರಾಜ್ಯ ಸರ್ಕಾರದಿಂದ ಆಯ್ಕೆ ಪಟ್ಟಿ, ಅಧಿಸೂಚನೆ ಹೊರಡಿಸಿದ ನಂತರ ಎಲ್ಲಾ ಅಗತ್ಯವಿರುವ ಪರಿಶೀಲನಾ ಕಾರ್ಯ ಶೇ.೯೦% ರಷ್ಟು ಪೂರ್ಣಗೊಂಡರೂ ಅಭ್ಯರ್ಥಿಗಳಿಗೆ ಆದೇಶ ನೀಡಲು ತಡವಾಗಿರಲು ಕಾರಣಗಳೇನು ; (ಪೂರ್ಣ ಮಾಹಿತಿ ನೀಡುವುದು)

(ಇ) ಹೈದರಾಬಾದ್ ಕರ್ನಾಟಕ ವಿಭಾಗದ ಮೀಸಲಾತಿ ವಿಷಯವಾಗಿ ಸರ್ಕಾರದ ಸುತ್ತೋಲೆ ಹೊರಡಿಸಿದ ಸಂಖ್ಯೆ:ಸಿಆಸುಇ/೦೩/ ಹೈಕಕೋ/೨೦೧೯ ದಿನಾಂಕ:೦೧ ಫೆಬ್ರವರಿ ೨೦೨೩ನ್ನು ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯು ಎತ್ತಿಹಿಡಿದಿದ್ದು, ಇದೇ ವಿಷಯವಾಗಿ ೧೩ ಮಾರ್ಚ್ ೨೦೨೪ ರಂದು ಉಚ್ಚನ್ಯಾಯಾಲಯದ ಮಧ್ಯಂತರ ತೀರ್ಪು ಸಹ ಕೌನ್ಸಿಲಿಂಗ್

ನಡೆಸಿ, ಸ್ಥಳನಿಯುಕ್ತಿಗೊಳಿಸಬಹುದೆಂದು ಆದೇಶ ನೀಡಿದ್ದರೂ ಸರ್ಕಾರಿ ಆದೇಶ ನೀಡಲು ತಡವಾಗಲು ಕಾರಣಗಳೇನು; ಪೂರ್ಣ ಮಾಹಿತಿ ನೀಡುವುದು ;

(ಈ) ರಾಜ್ಯ ಸರ್ಕಾರ ಈಗಾಗಲೇ ಕೆ.ಪಿ.ಟಿ.ಸಿ.ಎಲ್ ಇಲಾಖೆಯ ಎ.ಇ ಹುದ್ದೆಗಳಿಗೆ ಪ್ರಾಥಮಿಕ ಶಾಲಾ ಸಾಕ್ಷರತಾ ಇಲಾಖೆಯ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕ ಹುದ್ದೆಗಳಿಗೆ (ಜಿ.ಪಿಎಸ್.ಟಿ.ಆರ್) ಪಿಡಬ್ಲ್ಯೂಡಿ ಇಲಾಖೆಯ ಸಹಾಯಕ ಇಂಜಿನಿಯರ್ ಹುದ್ದೆಗಳಿಗೆ ಮತ್ತು ಆರ್.ಡಿ.ಪಿ.ಆರ್ ಇಲಾಖೆಯ ಎ.ಇ. ಹುದ್ದೆಗಳಿಗೆ ಷರತ್ತು ಬದ್ಧ ನೇಮಕಾತಿ ಆದೇಶವನ್ನು ಮತ್ತು ತಾತ್ಕಾಲಿಕ ಸ್ಥಳನಿಯುಕ್ತಿ ಮಾಡಿದ್ದರೂ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳಿಗೆ ನೇಮಕಾತಿ ಆದೇಶ ನೀಡಲು ವಿಳಂಬವಾಗಲು ಕಾರಣಗಳೇನು ? (ಪೂರ್ಣ ಮಾಹಿತಿ ನೀಡುವುದು)

## ನೂತನ ಮತ್ತು ನವೀಕರಿಸಬಹುದಾದ ಇಂಧನ ಉತ್ಪಾದನೆ ಮತ್ತು ಪ್ರಸರ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೧೨೭ (೩೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ವಿವಿಧ ನೂತನ ಮತ್ತು ನವೀಕರಿಸಬಹುದಾದ ಇಂಧನ ಮೂಲಗಳಿಂದ ಉತ್ಪಾದಿಸಲಾಗುತ್ತಿರುವ ವಿದ್ಯುತ್ ಶಕ್ತಿಯ ಪ್ರಮಾಣವೆಷ್ಟು ; ಪೂರ್ಣ ವಿವರ ನೀಡುವುದು ;

(ಆ) ರಾಜ್ಯದಲ್ಲಿ ಈ ವಲಯದಲ್ಲಿ ಉತ್ಪಾದಿಸುವ ಅಘಾದ ಪ್ರಮಾಣದ ವಿದ್ಯುತ್ ಅನ್ನು ಉತ್ಪಾದನೆ ಸ್ಥಳದಿಂದ ಸ್ಥಳಾಂತರಿಸಿ ಗ್ರೀಡ್‌ಗೆ ಸಾಗಿಸಲು ಹಲವಾರು ಅಡಚಣೆಗಳು/ಸಮಸ್ಯೆಗಳಿರುವುದು ಸರ್ಕಾರದ

ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಅಡಚಣೆ/ಸಮಸ್ಯೆಗಳನ್ನು ಸರಿಪಡಿಸಲು ಕೈಗೊಂಡಿರುವ ಕ್ರಮಗಳು ಯಾವುವು ; ಪೂರ್ಣ ಮಾಹಿತಿ ನೀಡುವುದು ;

(ಇ) ರಾಜ್ಯದಲ್ಲಿ ಕೇಂದ್ರ ಸರ್ಕಾರದ ನವೀಕರಿಸಬಹುದಾದ ಇಂಧನ ಮೂಲಗಳ ಗ್ರೀಡ್-ಉತ್ಪಾದನೆ ಸಂಪರ್ಕ ವ್ಯವಸ್ಥೆ (Renewable Energy Source Grid-Connection Generation System-RES-CGS) ಅನ್ನು ರಾಜ್ಯ ಸರ್ಕಾರ ಅನುಷ್ಠಾನಗೊಳಿಸುತ್ತಿದೆಯೇ ; ಹಾಗಿದ್ದಲ್ಲಿ, ಪೂರ್ಣ ವಿವರ ನೀಡುವುದು ;

(ಈ) ರಾಜ್ಯದಲ್ಲಿ ನವೀಕರಿಸಬಹುದಾದ ಇಂಧನ ಉತ್ಪಾದಕರಿಗೆ ವಿದ್ಯುತ್ ವಿತರಣ ಕಂಪನಿಗಳು ವಿದ್ಯುತ್ ಖರೀದಿ ಒಪ್ಪಂದದಂತೆ (ಪಿಪಿಎ) ಬಿಲ್ಲುಗಳ ತೀರುವಳಿ ಮಾಡಲು ವಿಳಂಬವಾಗುತ್ತಿರವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಸಮಸ್ಯೆಯನ್ನು ಬಗೆಹರಿಸಲು ಕೈಗೊಂಡಿರುವ ಕ್ರಮಗಳು ಯಾವುವು ? (ಪೂರ್ಣ ಮಾಹಿತಿ ನೀಡುವುದು)

## ಕಡಲಾಮೆ ಮೊಟ್ಟೆ ಸಂರಕ್ಷಣೆಯ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೧೨೮ (೩೫) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಕಡಲ ತೀರದಲ್ಲಿ ಇತ್ತೀಚೆಗೆ 'ಆಲಿವ್ ರೆಡ್ ಲೇ' ಪ್ರಭೇದದ ಕಡಲಾಮೆ ಮೊಟ್ಟೆಗಳು ಪತ್ತೆಯಾಗಿರುವುದು ನಿಜವೇ ; ಹಾಗಿದ್ದಲ್ಲಿ ಈ ಬಗ್ಗೆ ಪೂರ್ಣ ಮಾಹಿತಿ ನೀಡುವುದು ;

(ಆ) ಈ ಅಪರೂಪ ತಳಿಯ ಕಡಲಾಮೆಗಳ ಮೊಟ್ಟೆಗಳನ್ನು ರಕ್ಷಿಸಿ ಮೊಟ್ಟೆಗಳು ಮರಿಯಾದ ಬಳಿಕ ಸುರಕ್ಷಿತವಾಗಿ ಕಡಲಿಗೆ ಸೇರಿಸಲು ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಇಲಾಖೆಯಲ್ಲಿ ಈ ಬಗ್ಗೆ ಪರಿಣತಿ ಹೊಂದಿರುವ ಜೀವ ವಿಜ್ಞಾನಿಗಳು ಇದ್ದಾರೆಯೇ ; ಇಲ್ಲದಿದ್ದಲ್ಲಿ, ಇಲಾಖೆ ಮಾಡಿಕೊಂಡಿರುವ ಬದಲಿ ವ್ಯವಸ್ಥೆ ಯಾವುದು ; (ಪೂರ್ಣ ಮಾಹಿತಿ ನೀಡುವುದು)

(ಇ) ಈ ರೀತಿ ಕಡಲ ತೀರದಲ್ಲಿ ಅಪರೂಪದ ಕಡಲಾಮೆಗಳು ಮೊಟ್ಟೆ ಇಟ್ಟಿರುವುದು ಪ್ರಥಮವೇ ; ಆಗಿದ್ದಲ್ಲಿ, ಈ ಕಡಲ ತೀರದ ಪ್ರದೇಶವನ್ನು ಅಭ್ಯಸಿಸಿ, ಸಂರಕ್ಷಣ ಕ್ರಮಗಳನ್ನು ಕೈಗೊಳ್ಳಲು ಕೈಗೊಂಡಿರುವ ಕ್ರಮಗಳು ಯಾವುವು ? (ಪೂರ್ಣ ಮಾಹಿತಿ ನೀಡುವುದು)

## ರಾಜ್ಯದಲ್ಲಿ ಹೊಸದಾಗಿ ಪಡಿತರ ಚೀಟಿಯನ್ನು ವಿತರಿಸುವ ಕುರಿತು

**ಶ್ರೀಮತಿ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :-**

೧೨೯ (೧೨೩) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪ್ರಸ್ತುತ ಪಡಿತರವನ್ನು ಪಡೆಯುತ್ತಿರುವ ಒಟ್ಟು ಕುಟುಂಬಗಳ ಸಂಖ್ಯೆ ಎಷ್ಟು ;

(ಆ) ಹೊಸದಾಗಿ ಪಡಿತರಕ್ಕಾಗಿ ಸಲ್ಲಿಸಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿಯನ್ನು ನೀಡುವುದು)

(ಇ) ಹೊಸದಾಗಿ ಪಡಿತರ ಚೀಟಿಯನ್ನು ಹೊಂದಲು ಅರ್ಜಿ ಸಲ್ಲಿಸಿರುವ ಕುಟುಂಬಗಳಿಗೆ ಪಡಿತರ ಚೀಟಿಯನ್ನು ನೀಡಲಾಗಿದೆಯೇ ;

(ಈ) ಪಡಿತರ ಚೀಟಿಯನ್ನು ನೀಡಿಲ್ಲವಾದಲ್ಲಿ ಅದಕ್ಕೆ ಕಾರಣವೇನು ?

# ರಾಜ್ಯದಲ್ಲಿ ಕೌಶಲ್ಯಾಭಿವೃದ್ಧಿ ಇಲಾಖೆಯಲ್ಲಿನ ತರಬೇತಿ ಪಡೆದವರ ಕುರಿತು

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :-**

೧೩೦ (೨೦) ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಕೌಶಲ್ಯಾಭಿವೃದ್ಧಿ ನಿಗಮದಲ್ಲಿ ಇರುವ ಯೋಜನೆಗಳಾವುವು ; ಈ ಯೋಜನೆಗಳಲ್ಲಿ ಉದ್ಯೋಗ ತರಬೇತಿ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು ;

(ಆ) ತರಬೇತಿ ಪೂರ್ಣಗೊಳಿಸಿದ ಫಲಾನುಭವಿಗಳ ಪೈಕಿ ಎಷ್ಟು ಜನರಿಗೆ ರಾಜ್ಯ, ಅಂತರರಾಜ್ಯ ಮತ್ತು ಹೊರದೇಶಗಳಲ್ಲಿ ಉದ್ಯೋಗಾವಕಾಶ ದೊರೆತಿದೆ ; (ಮಾಹಿತಿ ಒದಗಿಸುವುದು)

(ಇ) ಉದ್ಯೋಗ ಕ್ರಾಂತಿಗೆ ಕಾರಣವಾದ ಯೋಜನೆಗಳ ಉನ್ನತೀಕರಣಕ್ಕೆ ಮತ್ತಷ್ಟು ಒತ್ತು ನೀಡಲಾಗುವುದೇ ?

# ಕರ್ನಾಟಕ ಪಬ್ಲಿಕ್ ಸ್ಕೂಲ್‌ಗಳ ಸ್ಥಾಪನೆ ಕುರಿತು

**ಡಾ. ಯತೀಂದ್ರ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೧ (೧೪೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಈವರೆಗೆ ಎಷ್ಟು ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಪ್ರಾರಂಭಿಸಲಾಗಿದೇ ; ಈ ಶಾಲೆಗಳಿಗೆ ಬೇಕಾದ ಅಗತ್ಯ ಸಿಬ್ಬಂದಿ ಹಾಗೂ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆಯೇ ; ಒದಗಿಸಿದ್ದಲ್ಲಿ, ವರ್ಷಾವಾರು ಮತ್ತು ಜಿಲ್ಲಾವಾರು ಮಾಹಿತಿ ನೀಡುವುದು ;

(ಆ) ಮುಂಬರುವ ವರ್ಷಗಳಲ್ಲಿ ಸರ್ಕಾರಕ್ಕೆ ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ತೆರೆಯುವ ಆಲೋಚನೆ ಇದಯೇ; ಇದ್ದಲ್ಲಿ ಮುಂದಿನ ಐದು ವರ್ಷಗಳಲ್ಲಿ ಎಷ್ಟು ಶಾಲೆಗಳನ್ನು ಆರಂಭಿಸಲಾಗುವುದು ?

## ನೀಟ್ ಪರೀಕ್ಷಾ ವ್ಯವಸ್ಥೆಯಡಿ ರಾಜ್ಯದ ವಿದ್ಯಾರ್ಥಿಗಳಿಗೆ ದೊರಕುತ್ತಿರುವ ಸೀಟುಗಳ ಕುರಿತು

**ಡಾ. ಯತೀಂದ್ರ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೨ (೧೪೫) ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳಿಗೆ ನೀಟ್ ವ್ಯವಸ್ಥೆ ಜಾರಿಯಿಂದಾಗಿ ಈವರೆಗೆ ಎಷ್ಟು ವೈದ್ಯಕೀಯ ಸೀಟುಗಳು ದೊರೆತಿವೆ ; ಕೊರತೆಂಯಾಗಿದ್ದಲ್ಲಿ ಎಷ್ಟು ಸೀಟುಗಳು ಕೊರತೆಯಾಗಿವೆ; ಆ ಕೊರತೆಯನ್ನು ನೀಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ನೀಟ್ ವ್ಯವಸ್ಥೆಯಿಂದ ಹಿಂದೆ ಇದ್ದ ವ್ಯವಸ್ಥೆಗೆ ಹೋಲಿಸಿ ಮಾಹಿತಿ ನೀಡುವುದು)

(ಆ) ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳಿಗೆ ನೀಟ್ ವ್ಯವಸ್ಥೆಯಲ್ಲಿ ಯಾವ ಕೊನೆಯ ಶ್ರೇಣಿಯುವರೆಗೆ ಸೀಟುಗಳು ದೊರೆಯುತ್ತಿವೆ ; (ವರ್ಷಾವಾರು ಮಾಹಿತಿ ನೀಡುವುದು)

(ಇ) ನೀಟ್ ರದ್ದು ಪಡಿಸಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವ ಪ್ರಸ್ತಾವ ರಾಜ್ಯ ಸರ್ಕಾರದ ಮುಂದಿದೆಯೇ ? (ಇದ್ದಲ್ಲಿ ಮಾಹಿತಿ ನೀಡುವುದು)

## ಗೃಹ ಜ್ಯೋತಿ ಯೋಜನೆಯ ಪ್ರಗತಿ ಕುರಿತು

**ಡಾ. ಯತೀಂದ್ರ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೩ (೧೪೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಐದು ಗ್ಯಾರಂಟಿಗಳಲ್ಲಿ ಒಂದಾದ "ಗೃಹ ಜ್ಯೋತಿ" ಕಾರ್ಯಕ್ರಮದಡಿಯಲ್ಲಿ ಪ್ರತಿ ಕುಟುಂಬಕ್ಕೆ ೨೦೦ ಯೂನಿಟ್‌ಗಳ ಉಚಿತ ವಿದ್ಯುತ್‌ಅನ್ನು ನೀಡುತ್ತಿದ್ದು, ಪ್ರಾರಂಭದಿಂದ ಇಲ್ಲಿಯವರೆಗೆ ಈ ಯೋಜನೆಯಡಿ ಲಾಭ ಪಡೆದಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ;

(ಆ) "ಗೃಹ ಜ್ಯೋತಿ" ಯೋಜನೆಯಡಿ ಫಲಾನುಭವಿಗಳಿಗೆ ಈವರೆಗೆ ಎಷ್ಟು ಯೂನಿಟ್ ಉಚಿತ ವಿದ್ಯುತ್‌ಅನ್ನು ಒದಗಿಸಲಾಗಿದೆ ಈ ಯೋಜನೆಯಿಂದ ಫಲಾನುಭವಿಗಳಿಗೆ ಉಳಿತಾಯವಾಗಿರುವ ಹಣವೆಷ್ಟು ? (ಪೂರ್ಣ ವಿವರ ನೀಡುವುದು)

## ಆಹಾರ ಸುರಕ್ಷತೆ ಕುರಿತು ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳ ಕುರಿತು

**ಡಾ: ಯತೀಂದ್ರ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೪ (೧೪೭) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರದ ಆಹಾರ ಸುರಕ್ಷತಾ ಇಲಾಖೆ ಅಡಿ ರಾಜ್ಯ ಮಟ್ಟದಲ್ಲಿ, ಜಿಲ್ಲಾ ಮಟ್ಟದಲ್ಲಿ ಮತ್ತು ತಾಲ್ಲೂಕು ಮಟ್ಟದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳೆಷ್ಟು ; (ವೃಂದವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಆಹಾರ ಕಲಬೆರಿಕೆ ತಡೆಯಲು ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಈ ಕಾರ್ಯಕ್ರಗಳಿಗೆ ರಾಜ್ಯ

ಸರ್ಕಾರ ಒದಗಿಸಿರುವ ಅನುದಾನದ ಮಾಹಿತಿ ನೀಡುವುದು ; ಈ ಕಾರ್ಯಕ್ರಮಗಳಿಗೆ ಕೇಂದ್ರ ಸರ್ಕಾರದಿಂದ ಅನುದಾನ ನೀಡಲಾಗುತ್ತಿದೆಯೇ ; ಇದ್ದಲ್ಲಿ, ಈವರೆಗೆ ಎಷ್ಟು ಅನುದಾನ ಒದಗಿಸಲಾಗಿದೆ ; (ವರ್ಷಾವಾರು ಮಾಹಿತಿ ನೀಡುವುದು)

(ಇ) ಜನರಿಗೆ ಆಹಾರ ಸುರಕ್ಷತೆ ಬಗ್ಗೆ ಅರಿವು ಮೂಡಿಸುವಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಇಲ್ಲವಾದಲ್ಲಿ ಪ್ರಸಕ್ತ ಸಾಲಿನಲ್ಲಿ ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದೇ ;

(ಈ) ಆಹಾರ ಕಲಬೆರಿಕೆಯನ್ನು ಪರಿಣಾಮಕಾರಿಯಾಗಿ ತಡೆಯಲು ಕಾನೂನು ತಿದ್ದುಪಡಿ ತರುವ ಉದ್ದೇಶವಿದೆಯೇ ; ಇದ್ದಲ್ಲಿ, ಯಾವು ರೀತಿಯ ತಿದ್ದುಪಡಿ ತರಲಾಗುವುದು ?

**ಕೆ. ಆರ್. ಮಹಾಲಕ್ಷ್ಮಿ**

ಕಾರ್ಯದರ್ಶಿ

ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 036/400 ಪ್ರತಿಗಳು/09–07–2024